ಸಂಪುಟ: 06 ಸಂಚಿಕೆ: 126 ಪುಟಗಳು: 08 ಭಾನುವಾರ 19ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ


ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಮ್ಮೆಲ್ಲ ಸಮಸ್ಯೆಗಳಿಗೆ ಮುಖ್ಯ ಕಾರಣವೆಂದರೆ ಯೋಚಿಸದೇ ಮಾಡುವುದು ಮತ್ತು ಏನೂ ಮಾಡದೆ ಬರೀ ಯೋಚಿಸುವುದು. ಮಾಡುವ ಮೊದಲು ಯೋಚಿಸೋಣ!

## ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರಿಗೆ ಪತ್ನಿ ವಿಯೋಗ; ತೀವ್ರ ಹೃದಯಾಘಾತದಿಂದ ಚೆನ್ನಮ್ಮ ನಿಧನ

• ಉದಯವಾಹಿನಿ, ಬೆಂಗಳೂರು



ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಪತ್ನಿ ಚೆನ್ನಮ್ಮ (85) ನಿಧನರಾಗಿದ್ದಾರೆ. ಉಸಿರಾಟದ ಸಮಸ್ಯೆ ಹಿನ್ನೆಲೆ ಆಸ್ಪತ್ರೆ ದಾಖಲಾಗಿದ್ದ ಚೆನ್ನಮ್ಮ ಚಿಕಿತ್ಸೆ ಫಲಿಸದೆ ನಿಧನರಾಗಿದ್ದಾರೆ. ಚೆನ್ನಮ್ಮರಿಗೆ ಉಸಿರಾಟದ ಸಮಸ್ಯೆ ಉಲ್ಬಣಿಸಿದ ಕಾರಣ ಬುಧವಾರ ರಾತ್ರಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರ ಆರೋಗ್ಯದಲ್ಲಿ ಇಂದು ಹಠಾತ್ ಏರುಪೇರಾಗಿದೆ. ಚಿಕಿತ್ಸೆಗೆ ಸ್ಪಂದಿಸದೇ ಅಂತಿಮವಾಗಿ ಸಂಜೆ ವೇಳೆಗೆ ಚೆನ್ನಮ್ಮ ಕೊನೆಯುಸಿರೆಳೆದಿದ್ದಾರೆ. ಆ ಮೂಲಕ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಪತ್ನಿ ವಿಯೋಗ ಅನುಭವಿಸಿದ್ದಾರೆ. ಕಳೆದ ನಾಲ್ಕು ದಿನಗಳಿಂದ ಉಸಿರಾಟದ ಸಮಸ್ಯೆ ಹಿನ್ನೆಲೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಚೆನ್ನಮ್ಮ ಆರೋಗ್ಯದಲ್ಲಿ ಚೇತರಿಕೆ ಕಾಣುತ್ತಿತ್ತು. ಆದರೆ, ಇದೇ ಸಂದರ್ಭದಲ್ಲಿ ತೀವ್ರ ಹೃದಯಾಘಾತ ಸಂಭವಿಸಿ ಸಂಜೆ 4 ಗಂಟೆಗೆ ನಿಧನರಾಗಿದ್ದಾರೆ ಎಂದು ಮಣಿಪಾಲ್ ಆಸ್ಪತ್ರೆ ವೈದ್ಯರು ತಿಳಿಸಿದ್ದಾರೆ.

ರಾಜಕೀಯವಾಗಿ ಸಕ್ರಿಯರಾಗಿದ್ದ ದೇವೇಗೌಡರ ಕುಟುಂಬದ ಬೆನ್ನೆಲುಬಾಗಿದ್ದ ಗಟ್ಟಿಗಿತ್ತಿ ಚೆನ್ನಮ್ಮ ಇಹಲೋಕ ತ್ಯಜಿಸಿದ್ದಾರೆ. 1954ರಲ್ಲಿ ಚೆನ್ನಮ್ಮ ಅವರು ಹೆಚ್.ಡಿ. ದೇವೇಗೌಡರ ಜೊತೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದರು.ಚೆನ್ನಮ್ಮ–ಹೆಚ್.ಡಿ. ದೇವೇಗೌಡ ದಂಪತಿಗೆ ಹೆಚ್. ಡಿ. ರೇವಣ್ಣ, ಹೆಚ್.ಡಿ. ಬಾಲಕೃಷ್ಣ, ಹೆಚ್ ಡಿ. ರಮೇಶ್ ಗೌಡ, ಹೆಚ್.ಡಿ. ಕುಮಾರಸ್ವಾಮಿ, ಶೈಲಜಾ ಹಾಗೂ ಅನಸೂಯಾ ಸೇರಿ ಒಟ್ಟು ನಾಲ್ವರು ಗಂಡು ಮತ್ತು ಇಬ್ಬರು ಹೆಣ್ಣು ಮಕ್ಕಳಿದ್ದಾರೆ.ಚೆನ್ನಮ್ಮ ಮೇಲೆ **2001ರಲಿ ಆಯಸಿಡ್ ದಾಳಿ:** ಚೆನ್ನಮ್ಮ ಮೇಲೆ ಕೌಟುಂಬಿಕ ಕಲಹದ ಹಿನ್ನೆಲೆ ಸಂಬಂಧಿಯೇ 2001ರಲ್ಲಿ ಆಸಿಡ್ ದಾಳಿ ಮಾಡಿದ್ದರು. 2001ರ ಫೆಬ್ರುವರಿ 21ರಂದು ಚೆನ್ನಮ್ಮ ಅವರು ಹೊಳೆನರಸೀಪುರ ತಾಲ್ಲೂಕಿನ ಹರದನಹಳ್ಳಿಯಲ್ಲಿನ ಈಶ್ವರ ದೇವಾಲಯದಲ್ಲಿ ಪೂಜೆ ಮುಗಿಸಿ ವಾಪಸ್ ಬರುತ್ತಿದ್ದ ವೇಳೆ ಅವರ ಮೇಲೆ ಆಸಿಡ್ ದಾಳಿಯಾಗಿತ್ತು. ಮಹಾಶಿವರಾತ್ರಿ ಪೂಜೆ ಸಲ್ಲಿಸಲು ದೇವಸ್ಥಾನಕ್ಕೆ ಹೋದಾಗ ಈ ಘಟನೆ ನಡೆದಿತ್ತು. ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಅವರು ಚಿಕಿತ್ಸೆ ಬಳಿಕ ಚೇತರಿಸಿಕೊಂಡಿದ್ದರು. ದೇವೇಗೌಡ ಮತ್ತು ಕಾಳಮ್ಮ ದಂಪತಿಯ ಮಗಳಾಗಿದ್ದ ಚೆನ್ನಮ್ಮ ವರೆಗೆ ಶಿಕ್ಷಣ ಪೂರೈಸಿದ್ದರು. ಮನೆಯ ಹಿರಿಯ ಮಗಳಾಗಿ ನಾಲ್ವರು ತಮ್ಮಂದಿರು ಮತ್ತು ಮೂವರು ತಂಗಿಯರಿಗೆ ತಾಯಿಯಂತೆ ಆಸರೆಯಾಗಿದ್ದರು.

## ರಾಜ್ಯದಲ್ಲಿ ಕೃಷಿ ಬೆಳೆ ಬಿತ್ತನೆಯಲ್ಲಿ ಭಾರಿ ಕುಸಿತ,

• ಉದಯವಾಹಿನಿ, ಬೆಂಗಳೂರು

ಮಳೆಯ ಅಭಾವದಿಂದ ರಾಜ್ಯ ಬರದ ಛಾಯೆಯಲ್ಲಿದ್ದು, ಈ ಬಾರಿಯ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಪ್ರಮಾಣದಲ್ಲಿ ಭಾರಿ ಕುಸಿತ ಕಂಡಿದೆ. ಜುಲೈ 10ರ ವರೆಗಿನ ಬಿತ್ತನೆ ಗುರಿ ಮುಂದೆ ಪ್ರಗತಿ ಕಂಡಿದ್ದು, ಕೇವಲ 48% ಮಾತ್ರ. ಹೀಗಾಗಿ ಈ ಬಾರಿ ರಾಜ್ಯದ ಕೃಷಿ ಉತ್ಪಾದನೆಯಲ್ಲಿ ಭಾರಿ ಇಳಿಕೆ ಕಾಣುವ ಆತಂಕ ಎದುರಾಗಿದೆ. ಜುಲೈ ಎರಡನೇ ವಾರದಲ್ಲಿ ರಾಜ್ಯದಲ್ಲಿ ಬೆಳೆವಾರು ಬಿತ್ತನೆ ಕೊರತೆಯ ವಸ್ತು ಸ್ಥಿತಿಯ ವರದಿ ಇಲ್ಲಿದೆ. ಎಲ್ ನಿನೋ ಮೂಲಕ ರಾಜ್ಯದ ಸುಮಾರು 157 ತಾಲ್ಲೂಕುಗಳಲ್ಲಿ ತೀವ್ರ ಮಳೆ ಕೊರತೆ ಎದುರಾಗಿದೆ. ಇದರಿಂದ ರಾಜ್ಯದಲ್ಲಿ ಭೀಕರ ಬರಗಾಲದ ಭೀತಿ ಎದುರಾಗಿದೆ. ಸರ್ಕಾರ ಭೀಕರ ಬರಗಾಲದ ಆತಂಕ ಕೇಂದ್ರದ ಬಳಿ ನೆರವಿನ ಮೊರೆ ಇಟ್ಟಿದೆ.

## ಬಿಡದಿ ಟೌನ್‌ಶಿಪ್ : ಬಿಎಸ್‌ವೈ–ಎಚ್‌ಡಿಕೆ ವಿರುದ್ಧ ಕಿಕ್‌ಬ್ಯಾಕ್ ಆರೋಪ ಮಾಡಿದ ಶಾಸಕ ಎಚ್.ಸಿ.ಬಾಲಕೃಷ್ಣ

• ಉದಯವಾಹಿನಿ, ಬೆಂಗಳೂರು

ಬಿಡದಿಯ ಉಪನಗರ ನಿರ್ಮಾಣಕ್ಕೆ ಅಧಿಸೂಚನೆ ಹೊರಡಿಸಿದ ಆಗಿನ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಮತ್ತು ಡಿಎಲ್‌ಎಫ್‌ಗೆ ಹಣವನ್ನು ವಾಪಸ್ ಕೊಟ್ಟ ಯಡಿಯೂರಪ್ಪ ಅವರು ಎಷ್ಟು ಕಿಕ್‌ಬ್ಯಾಕ್ ಪಡೆದಿದ್ದಾರೆ ಮತ್ತು ಅದರಲ್ಲಿ ಅವರ ಪಕ್ಷದ ಹಿರಿಯ ನಾಯಕರ ಪಾಲು ಎಷ್ಟು ಎಂದು ಮಾಗಡಿಯ ಕಾಂಗ್ರೆಸ್ ಶಾಸಕ ಎಚ್.ಸಿ.ಬಾಲಕೃಷ್ಣ ಪ್ರಶ್ನಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಮತ್ತು ಜೆಡಿಎಸ್‌ನ ನಾಯಕರು ಬಿಡದಿ ಯೋಜನೆಯನ್ನು ರಿಯಲ್ ಎಸ್ಟೇಟ್ ವ್ಯವಹಾರ ಎಂದು ಪದೇ ಪದೇ ಹೇಳುತ್ತಿದ್ದಾರೆ. ಈ ಯೋಜನೆಯಿಂದ ಹಣ ಸಂಗ್ರಹಿಸಿ ಹೈಕಮಾಂಡ್‌ಗೆ ನೀಡಲು ಮುಖ್ಯಮಂತ್ರಿ ಮುಂದಾಗಿದ್ದಾರೆ ಎಂಬ ಗಂಭೀರ ಆರೋಪ ಮಾಡುತ್ತಿದ್ದಾರೆ. ಆದರೆ ಈ ಯೋಜನೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಪಾಪದ ಕೂಸು ಎಂದು ತಿರುಗೇಟು ನೀಡಿದರು. ಯೋಜನೆ ವಿರೋಧಿಸಿ ನಿನ್ನೆ ಬಿಜೆಪಿಯ ನಾಯಕರು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿ, ವೀರಾವೇಶದ ಮಾತನ್ನಾಡಿದ್ದಾರೆ ಮತ್ತು ಬಿಡದಿಯವರೆಗೂ ಪಾದಯಾತ್ರೆ ನಡೆಸುವುದಾಗಿ ಘೋಷಿಸಿದ್ದಾರೆ.

## ಎಸ್‌ಐಆರ್ ಪ್ರಕ್ರಿಯೆಯಿಂದ ಶಿಕ್ಷಕರನ್ನು ಕೈಬಿಡುವಂತೆ ಮೋದಿಗೆ ಪತ್ರ ಬರೆದ ವಿದ್ಯಾರ್ಥಿ

• ಉದಯವಾಹಿನಿ, ಬೆಂಗಳೂರು

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಅವಧಿ ವಿಸ್ತರಣೆಗೊಂಡಿರುವುದರಿಂದ ಶಾಲಾ ಶಿಕ್ಷಣದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದೆ ಎಂದು ಆರೋಪಿಸಿ, ಗೋಕುಲ್ ಎನ್ನುವ ವಿದ್ಯಾರ್ಥಿಯೊಬ್ಬರು ಪ್ರಧಾನಿ ಮೋದಿಗೆ ಪತ್ರ ಬರೆದು ಶಿಕ್ಷಕರನ್ನು ತಕ್ಷಣ ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ಮನವಿ ಮಾಡಿ ಕೊಂಡಿದ್ದಾರೆ. 2026–27ರ ಶೈಕ್ಷಣಿಕ ವರ್ಷ ಇದೀಗ ಆರಂಭವಾಗಿದ್ದು, ಇದೇ ಸಂದರ್ಭದಲ್ಲಿ ಅನೇಕ ಸರ್ಕಾರಿ ಶಾಲೆಗಳ ಶಿಕ್ಷಕರನ್ನು ಕಾರ್ಯಕ್ಕೆ ನಿಯೋಜಿಸಿರುವುದರಿಂದ ತರಗತಿಗಳು ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.ಒಂದು ತಿಂಗಳಿಗೂ ಹೆಚ್ಚು ಕಾಲ ಶಿಕ್ಷಕರು ತರಗತಿಗಳಿಗೆ ಹಾಜರಾಗದಿದ್ದರೆ ವಿದ್ಯಾರ್ಥಿಗಳ ಕಲಿಕೆ ಕುಂಠಿತವಾಗುತ್ತದೆ. ಅದರಲ್ಲೂ ಪ್ರಾಥಮಿಕ ಹಂತದ ಮಕ್ಕಳ ಶಿಕ್ಷಣದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ ಎಂದು ವಿದ್ಯಾರ್ಥಿ ಪತ್ರದಲ್ಲಿ ಆತಂಕ ವ್ಯಕ್ತಪಡಿಸಿದ್ದಾರೆ.

**ದೇಶದ ಮೊದಲ ಖಾಸಗಿ ಕಕ್ಷೀಯ ರಾಕೆಟ್ ಉಡ್ಡಯನವಾಗಿದೆ. ಈ ಮೂಲಕ ದೇಶದ ಬಾಹ್ಯಾಕಾಶ ಕ್ಷೇತ್ರದಲ್ಲಿ ಹೊಸ ಮೈಲುಗಲ್ಲು ಸೃಷ್ಟಿಯಾದಂತಾಗಿದೆ. ಶನಿವಾರ ಮಧ್ಯಾಹ್ನ ಆಂಧ್ರ ಪ್ರದೇಶದ ಶ್ರೀಹರಿಕೋಟಾದಲ್ಲಿರುವ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಈ ರಾಕೆಟ್ ಉಡ್ಡಯನ ಮಾಡಲಾಯಿತು. ಖಾಸಗಿಯಾಗಿ ಅಭಿವೃದ್ಧಿಪಡಿಸಿದ ಭಾರತದ ಮೊದಲ ಕಕ್ಷೀಯ ರಾಕೆಟ್ ಇದಾಗಿದೆ ಎಂಬುವುದು ಇದರ ವಿಶೇಷವಾಗಿದೆ. ವಿಕ್ರಮ್ -1 ಶನಿವಾರ ಮಧ್ಯಾಹ್ನ 12.05ಕ್ಕೆ ನಭಕ್ಕೆ ಚಿಮ್ಮಿತು. ದೇಶದ ಮೊದಲ ಖಾಸಗಿ ಕಕ್ಷೀಯ ರಾಕೆಟನ್ನು ನೆರೆ ರಾಜ್ಯ ಆಂಧ್ರ ಪ್ರದೇಶದ ಶ್ರೀಹರಿಕೋಟಾದಲ್ಲಿರುವ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಉಡ್ಡಯನ ಮಾಡಲಾಯಿತು. ಶನಿವಾರ ಮಧ್ಯಾಹ್ನ 12.05ಕ್ಕೆ ರಾಕೆಟ್ ನಭಕ್ಕೆ ಚಿಮ್ಮಿತು.**

# ವಿಕ್ರಮ್-1 ಯಶಸ್ವಿ ಉಡಾವಣೆ

# ನಮೋ ಬಣ್ಣನೆ

• ಉದಯವಾಹಿನಿ, ಶ್ರೀಹರಿಕೋಟಾ



**1** ದೇಶದ ಮೊದಲ ಖಾಸಗಿ ಕಕ್ಷೀಯ ರಾಕೆಟ್ ಉಡ್ಡಯನ
**2** ಬಾಹ್ಯಾಕಾಶ ಕ್ಷೇತ್ರದಲ್ಲಿ ಹೊಸ ಮೈಲುಗಲ್ಲು
**3** ರಾಕೆಟ್ ತಂತ್ರಜ್ಞಾನ ಪ್ರಾತ್ಯಕ್ಷಿಕೆಯ ಹತ್ತಾರು ಉಪಗ್ರಹ

ಭಾರತದ ಖಾಸಗಿ ಬಾಹ್ಯಾಕಾಶ ಕ್ಷೇತ್ರದಲ್ಲಿ ಐತಿಹಾಸಿಕ ಮೈಲಿಗಲ್ಲು ನಿರ್ಮಾಣವಾಗಿದ್ದು, ದೇಶದ ಮೊದಲ ಖಾಸಗಿ ಕಕ್ಷಾ ರಾಕೆಟ್ 'ವಿಕ್ರಮ್-1' ಶನಿವಾರ ಯಶಸ್ವಿಯಾಗಿ ಉಡಾವಣೆಯಾಗಿದೆ. ಮಿಷನ್ ಆಗಮನ ಎಂದು ಹೆಸರಿಸಲಾದ ಈ ಪರೀಕ್ಷಾ ಉಡಾವಣೆಯನ್ನು ಹೈದರಾಬಾದ್ ಮೂಲದ ಸ್ಕೈರೂಟ್ ಏರೋಸ್ಪೇಸ್ ಯಶಸ್ವಿಯಾಗಿ ನಡೆಸಿದ್ದು, ಇದು ಭಾರತದ ವಾಣಿಜ್ಯ ಬಾಹ್ಯಾಕಾಶ ಕ್ಷೇತ್ರಕ್ಕೆ ಹೊಸ ಅಧ್ಯಾಯ ಬರೆದಿದೆ. 35 ನಿಮಿಷ ತಡವಾಗಿ ಉಡಾವಣೆ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದ ಮೊದಲ ಉಡಾವಣಾ ವೇದಿಕೆಯಿಂದ ಶನಿವಾರ ಮಧ್ಯಾಹ್ನ 12.05ಕ್ಕೆ ಏಳು ಅಂತಸ್ತಿನ ಎತ್ತರದ, ನಾಲ್ಕು ಹಂತಗಳ ವಿಕ್ರಮ್-1 ರಾಕೆಟ್ ಯಶಸ್ವಿಯಾಗಿ ಆಕಾಶಕ್ಕೇರಿತು. ಮೂಲತಃ ಬೆಳಿಗ್ಗೆ 11.30ಕ್ಕೆ ಉಡಾವಣೆ ನಿಗದಿಯಾಗಿದ್ದರೂ, ನ್ಯಾವಿಗೇಶನ್ ವ್ಯವಸ್ಥೆಯಲ್ಲಿ ಕಂಡುಬಂದ ತಾಂತ್ರಿಕ ಸಮಸ್ಯೆಯಿಂದ 'ಪ್ಲ್ಯಾನ್ಡ್ ಹೋಲ್ಡ್ ಘೋಷಿಸಿ, ಸುಮಾರು 35 ನಿಮಿಷಗಳ ಬಳಿಕ ಉಡಾವಣೆ ನಡೆಸಲಾಯಿತು.

ಸುಮಾರು 16 ನಿಮಿಷಗಳ ಆರಂಭಿಕ ಹಾರಾಟದ ಬಳಿಕ, ವಿಕ್ರಮ್-1 ರಾಕೆಟ್ ದೇಶೀಯ ಹಾಗೂ ವಿದೇಶಿ ತಂತ್ರಜ್ಞಾನ ಪ್ರದರ್ಶನ ಪೇಲೋಡ್‌ಗಳನ್ನು 450 ಕಿಲೋಮೀಟರ್ ಎತ್ತರದ ಲೋ ಅರ್ಥ್ ಆರ್ಬಿಟ್ ಕಕ್ಷೆಗೆ, 60 ಡಿಗ್ರಿ ಇನ್‌ಕ್ಲಿನೇಶನ್ ಕೋನದಲ್ಲಿ ಯಶಸ್ವಿಯಾಗಿ ಸ್ಥಾಪಿಸುವ ನಿರೀಕ್ಷೆಯಿದೆ. ಈ ಐತಿಹಾಸಿಕ ಉಡಾವಣೆಯ ವಿಶೇಷವೆಂದರೆ, ರಾಕೆಟ್‌ನಲ್ಲಿ ವಿವಿಧ ತಂತ್ರಜ್ಞಾನ ಪ್ರದರ್ಶನ ಪೇಲೋಡ್‌ಗಳ ಜೊತೆಗೆ ಪ್ರಧಾನಿ ನರೇಂದ್ರ ಮೋದಿ ಅವರ ಪೋಸ್ಟ್‌ಕಾರ್ಡ್ ಕೂಡ ಬಾಹ್ಯಾಕಾಶಕ್ಕೆ ಕಳುಹಿಸಲಾಗಿದೆ. ಭಾರತದ ಬಾಹ್ಯಾಕಾಶ ಕಾರ್ಯಕ್ರಮದ ಪಿತಾಮಹರೆಂದು ಪರಿಗಣಿಸಲ್ಪಡುವ ಡಾ. ವಿಕ್ರಮ್ ಸಾರಾಭಾಯಿ ಅವರ ಗೌರವಾರ್ಥ ಈ ರಾಕೆಟ್‌ಗೆ 'ವಿಕ್ರಮ್-1' ಎಂದು ಹೆಸರಿಡಲಾಗಿದೆ. ಈ ರಾಕೆಟ್ ಸಂಪೂರ್ಣ ಕಾರ್ಬನ್ ಕಾಂಪೋಸಿಟ್ ರಚನೆ ಹೊಂದಿದ್ದು, ಸಂಸ್ಥೆಯೇ ಅಭಿವೃದ್ಧಿಪಡಿಸಿದ 3ಆ-ಮುದ್ರಿತ ಇಂಜಿನ್‌ಗಳು ಹಾಗೂ ಹೆಚ್ಚಿನ ಸಾಮರ್ಥ್ಯದ ಘನ ಇಂಧನ ಬೂಸ್ಟರ್‌ಗಳ ಮೂಲಕ ಕಾರ್ಯನಿರ್ವಹಿಸುತ್ತದೆ. ವಿಕ್ರಮ್-1 ರಾಕೆಟ್‌ನಲ್ಲಿ ಗ್ರಾಹಾ ಸ್ಪೇಸ್, ಕಾಸ್ಮೋಸರ್ವ್, ಡಿಕ್ಯೂಬ್ಡ್ ಸೇರಿದಂತೆ ಹಲವು ಸಂಸ್ಥೆಗಳ ತಂತ್ರಜ್ಞಾನ ಪ್ರದರ್ಶನ ಪೇಲೋಡ್‌ಗಳು ಹಾಗೂ ಸ್ಕೈರೂಟ್‌ನ 'ಪೇಲೋಡ್ ಸಾಗಿಸಲಾಗುತ್ತಿದೆ. ಜೊತೆಗೆ 'ಕಾಸ್ಮಿಕ್ ಬ್ಲೂಮ್' ಎಂಬ ವಿಶೇಷ ಕಲಾಕೃತಿಯನ್ನೂ ಬಾಹ್ಯಾಕಾಶಕ್ಕೆ ಕೊಂಡೊಯ್ಯಲಾಗಿದೆ. ಈ ಯಶಸ್ವಿ ಉಡಾವಣೆಯೊಂದಿಗೆ ಭಾರತದಲ್ಲಿ ಖಾಸಗಿ ಬಾಹ್ಯಾಕಾಶ ತಂತ್ರಜ್ಞಾನ ಹೊಸ ಎತ್ತರಕ್ಕೆ ಏರಿದ್ದು, ಜಾಗತಿಕ ವಾಣಿಜ್ಯ ಬಾಹ್ಯಾಕಾಶ ಕ್ಷೇತ್ರದಲ್ಲಿ ದೇಶದ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದೆ.**ನಭಕ್ಕೆ ಜಿಗಿದ ದೇಶದ ಮೊದಲ ಖಾಸಗಿ :** ಹೈದರಾಬಾದ್




**ಕೊನೆ ಕ್ಷಣದ ರೋಮಾಂಚನ ತಾಂತ್ರಿಕ ಸವಾಲು**

ನಿಗದಿತ ವೇಳಾಪಟ್ಟಿಯ ಪ್ರಕಾರ ರಾಕೆಟ್ ಬೆಳಿಗ್ಗೆ 11:30 ಕ್ಕೆ ಉಡಾವಣೆಯಾಗಬೇಕಿತ್ತು. ಆದರೆ, ಉಡಾವಣೆಗೆ ಕೆಲವೇ ನಿಮಿಷಗಳ ಮುನ್ನ ಮಿಷನ್ ಕಂಟ್ರೋಲ್ ತಂಡವು ತಾಂತ್ರಿಕ ಕಾರಣಗಳಿಗಾಗಿ ಯೋಜಿತ ತಡೆ ವಿಧಿಸಿತು.



**ಉಡಾವಣೆಗೆ ಮುನ್ನ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಪ್ರಧಾನಿ, ಈ ಮಿಷನ್ ಭಾರತದ ಖಾಸಗಿ ಬಾಹ್ಯಾಕಾಶ ಕ್ಷೇತ್ರದ ಬೆಳೆಯುತ್ತಿರುವ ಸಾಮರ್ಥ್ಯಗಳನ್ನು ಪ್ರದರ್ಶಿಸುತ್ತದೆ. ಇದು ಭಾರತದ ಬಾಹ್ಯಾಕಾಶ ಪ್ರಯಾಣಕ್ಕೆ ಒಂದು ಐತಿಹಾಸಿಕ ಹೊಸ ಆರಂಭ! ಬೆಳಗ್ಗೆ 11:30 ಕ್ಕೆ ಸ್ಕೈರೂಟ್ ಏರೋಸ್ಪೇಸ್ ಭಾರತದ ಮೊದಲ ಖಾಸಗಿಯಾಗಿ ಅಭಿವೃದ್ಧಿಪಡಿಸಿದ ಉಡಾವಣಾ ವಾಹನವಾದ ವಿಕ್ರಮ್ -1ರ ಮೊದಲ ಕಕ್ಷೆಯ ಉಡಾವಣೆಯನ್ನು ನಡೆಸಲಿದೆ. ಈ ನಾಲ್ಕು ಹಂತದ ರಾಕೆಟ್ ಅನ್ನು ತ್ವರಿತ ಮತ್ತು ಬೇಡಿಕೆಯ ಮೇರೆಗೆ ಉಡಾವಣಾ ಸೇವೆಗಳನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ.** ಪ್ರಧಾನಿ ಮೋದಿ

## ಅಭಿನಂದನೆ ಸಲ್ಲಿಸಿದ ಇಸ್ರೋದ ಮಾಜಿ ಅಧ್ಯಕ್ಷರು

**ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ಅಧ್ಯಕ್ಷ ಎಸ್. ಸೋಮನಾಥ್ ಅವರು ಸ್ಕೈರೂಟ್ ಏರೋಸ್ಪೇಸ್ ಅನ್ನು ಅಭಿನಂದಿಸಿದರು ಮತ್ತು ಈ ಕಾರ್ಯಾಚರಣೆಯನ್ನು ಭಾರತದ ಖಾಸಗಿ ಬಾಹ್ಯಾಕಾಶ ಉದ್ಯಮಕ್ಕೆ ಒಂದು ಮೈಲಿಗಲ್ಲು ಎಂದು ಬಣ್ಣಿಸಿದರು. ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ, ಅವರು ಇಂದು ವಿಕ್ರಮ್-1 ಕಕ್ಷೆಯ ರಾಕೆಟ್‌ನೊಂದಿಗೆ 'ಮಿಷನ್ ಆಗಮನ್'ದ ಪರೀಕ್ಷಾರ್ಥ ಉಡಾವಣೆಗಾಗಿ ಸ್ಕೈರೂಟ್ ಏರೋಸ್ಪೇಸ್ ತಂಡಕ್ಕೆ ನನ್ನ ಶುಭಾಶಯಗಳು ಎಂದು ಬರೆದಿದ್ದಾರೆ.**

## ಸ್ಕೈರೂಟ್‌ನ ಆರ್ಬಿಟಲ ಚೊಚ್ಚಲ ಪ್ರವೇಶ

**ಸ್ಕೈರೂಟ್ ಏರೋಸ್ಪೇಸ್ ಪ್ರಕಾರ, ವಿಕ್ರಮ್-1 ಹಗುರವಾದ ಇಂಗಾಲ-ಸಂಯೋಜಿತ ರಚನೆಯನ್ನು ಬಳಸಿಕೊಂಡು ನಿರ್ಮಿಸಲಾದ 24 ಮೀಟರ್ ಎತ್ತರದ ನಾಲ್ಕು- ಹಂತದ ಉಡಾವಣಾ ವಾಹನವಾಗಿದೆ. ಇದು ಮೂರು ಘನ - ಇಂಧನ ಹಂತಗಳು ಮತ್ತು ಲಿಕ್ವಿಡ್ ಆರ್ಬಿಟಲ್ ಅಡ್ಜೆಸ್ಟಮೆಂಟ್ ಮಾಡ್ಯೂಲ್‌ನಿಂದ ಚಾಲಿತವಾಗಿದೆ ಮತ್ತು 450 ಕಿಮೀ ಲೋ ಅರ್ಥ್ ಆರ್ಬಿಟ್‌ಗೆ 350 ಕೆಜಿ ವರೆಗಿನ ಪೇಲೋಡ್ ಅನ್ನು ಸಾಗಿಸಲು ವಿನ್ಯಾಸಗೊಳಿಸಲಾಗಿದೆ.**

**ಕೊನೆ ಕ್ಷಣದ ರೋಮಾಂಚನ ತಾಂತ್ರಿಕ ಸವಾಲು**

**ನಿಗದಿತ ವೇಳಾಪಟ್ಟಿಯ ಪ್ರಕಾರ ರಾಕೆಟ್ ಇಂದು ಬೆಳಿಗ್ಗೆ 11:30 ಕ್ಕೆ ಉಡಾವಣೆಯಾಗಬೇಕಿತ್ತು. ಆದರೆ, ಉಡಾವಣೆಗೆ ಕೆಲವೇ ನಿಮಿಷಗಳ ಮುನ್ನ ಮಿಷನ್ ಕಂಟ್ರೋಲ್ ತಂಡವು ತಾಂತ್ರಿಕ ಕಾರಣಗಳಿಗಾಗಿ ಯೋಜಿತ ತಡೆ ವಿಧಿಸಿತು. ಇದರಿಂದಾಗಿ ಶ್ರೀಹರಿಕೋಟಾದ ಕಂಟ್ರೋಲ್ ರೂಂನಲ್ಲಿ ಕೆಲಕಾಲ ಆತಂಕ ಮತ್ತು ತಳಮಳದ ವಾತಾವರಣ ನಿರ್ಮಾಣವಾಗಿತ್ತು. ಕೊನೆಗೆ ಎಲ್ಲಾ ತಾಂತ್ರಿಕ ಸವಾಲುಗಳನ್ನು ಯಶಸ್ವಿಯಾಗಿ ನಿವಾರಿಸಿ, ಮಧ್ಯಾಹ್ನ 12:05:30ರ ಸುಮಾರಿಗೆ ಮುಗಿಲನ್ನು ಸೀಳಿ ರಾಕೆಟ್ ನಭಕ್ಕೆ ಜಿಗಿಯುತ್ತಿದ್ದಂತೆ ವಿಜ್ಞಾನಿಗಳು ಮತ್ತು ಇಂಜಿನಿಯರ್‌ಗಳ ಹರ್ಷೋದ್ಗಾರ ಮುಗಿಲುಮುಟ್ಟಿತು.**

**ವಿಕ್ರಮ್ ಸಾರಾಭಾಯ್ ಹೆಸರು**

**ದೇಶದ ಮೊದಲ ಖಾಸಗಿ ಕಕ್ಷೀಯ ರಾಕೆಟ್‌ಗೆ 'ವಿಕ್ರಮ್ ಸಾರಾಭಾಯ್' ಅವರ ಹೆಸರು ಇಡಲಾಗಿದೆ. ಭಾರತೀಯ ಬಾಹ್ಯಾಕಾಶ ಕಾರ್ಯಕ್ರಮದ ಪಿತಾಮಹ ಎಂದೇ ವಿಕ್ರಮ್ ಸಾರಾಭಾಯ್ ಅವರು ಕರೆಯಲ್ಪಡುತ್ತಾರೆ. ಹಾಗಾಗಿ ಅವರ ಹೆಸರನ್ನು ಈ ರಾಕೆಟ್‌ಗೆ ಇಡಲಾಗಿದೆ ಎಂಬುವುದು ವಿಶೇಷ. ಭಾರತದಲ್ಲಿ ಬಾಹ್ಯಾಕಾಶ ಕ್ಷೇತ್ರದಲ್ಲಿ ಇದುವರೆಗೆ ಕೇವಲ ಸರ್ಕಾರಿ ಸ್ವಾಮ್ಯದ ಇಸ್ರೋ ಸಂಸ್ಥೆಗೆ ಮಾತ್ರ ಸೀಮಿತವಾಗಿತ್ತು. ಆದರೆ ಇದೀಗ ಈ ಉಡಾವಣೆಯ ಮೂಲಕ ಭಾರತೀಯ ಬಾಹ್ಯಾಕಾಶ ರಂಗದಲ್ಲಿ ಖಾಸಗಿ ಯುಗ ಅಧಿಕೃತವಾಗಿ ಆರಂಭವಾದಂತಾಗಿದೆ. ಮುಂದಿನ ದಿನಗಳಲ್ಲಿ ಇದು ಮತ್ತಷ್ಟು ಬೆಳವಣಿಗೆ ಕಾಣುವುದರಲ್ಲಿ ಸಂಶಯವಿಲ್ಲ.**


ಮೂಲದ ಸ್ಕೈರೂಟ್ ಏರೋಸ್ಪೇಸ್ ನಿರ್ಮಿಸಿದ ವಿಕ್ರಮ್ -1 ಮೂರು ಘನ-ಇಂಧನ ಹಂತಗಳು ಮತ್ತು ದ್ರವ ಕಕ್ಷೀಯ ಹೊಂದಾಣಿಕೆಯಿಂದ ಚಾಲಿತವಾಗಿದೆ. ಇದನ್ನು ಬೆಳಗ್ಗೆ 11:30ಕ್ಕೆ ಉಡಾವಣೆ ಮಾಡಲು ನಿರ್ಧರಿಸಲಾಗಿತ್ತು. ಆದರೆ, ತಾಂತ್ರಿಕ ಸಮಸ್ಯೆಯಿಂದಾಗಿ ಉಡಾವಣೆಯಲ್ಲಿ ವಿಳಂಬವಾಯಿತು. ತಾಂತ್ರಿಕ ಸಮಸ್ಯೆ ಸರಿಪಡಿಸಿದ ಬಳಿಕ ಮಧ್ಯಾಹ್ನ 12:05 ಕ್ಕೆ ಉಡಾವಣೆ ಮಾಡಲಾಯಿತು. ಮಿಷನ್ ಆಗಮನ್ ಎಂದು ಹೆಸರಿಸಲಾದ ಈ ಪರೀಕ್ಷಾರ್ಥ ಉಡಾವಣೆಯು ದೇಶದ ವಾಣಿಜ್ಯ ಬಾಹ್ಯಾಕಾಶ ವಲಯಕ್ಕೆ ಒಂದು ಐತಿಹಾಸಿಕ ಮೈಲಿಗಲ್ಲು. ಇದನ್ನು ಹೈದರಾಬಾದ್ ಮೂಲದ ಸ್ಕೈರೂಟ್ ಏರೋಸ್ಪೇಸ್ ಕಾರ್ಯಗತಗೊಳಿಸಿದೆ.

## ಬೆಂಗಳೂರಿನ ಹಲವೆಡೆ ವರುಣನ ಆರ್ಭಟ; ರಾಜ್ಯಾದ್ಯಂತ ಇಂದು ಅಬ್ಬರಿಸಲಿದೆ ಮಳೆ!

• ಉದಯವಾಹಿನಿ, ಬೆಂಗಳೂರು

ನಗರದ ಹಲವೆಡೆ ಶನಿವಾರ ಮಧ್ಯಾಹ್ನ ಮಳೆ ಅಬ್ಬರಿಸಿದೆ. ಭಾರಿ ಮಳೆ ಹಿನ್ನೆಲೆಯಲ್ಲಿ ಕೆಲಸ ಕಾರ್ಯಗಳಿಗೆ ತೆರಳುತ್ತಿದ್ದ ವಾಹನ ಸವಾರರು ಪರದಾಡುವಂತಾಯಿತು. ನಗರದ ಮಲ್ಲೇಶ್ವರ, ಶೇಷಾದ್ರಿಪುರ, ಸದಾಶಿವನಗರ, ಮೆಜೆಸ್ಟಿಕ್, ರಾಜಾಜಿನಗರ, ವಿಧಾನಸೌಧ, ಕೆ.ಆರ್.ಸರ್ಕಲ್, ಶ್ರೀರಾಮಪುರ, ಗಾಂಧಿನಗರ, ವಿಜಯನಗರ, ಹೊಸಹಳ್ಳಿ, ಮಂಜುನಾಥ ನಗರ, ಶಿವಳ್ಳಿ, ನಾಗರಬಾವಿ, ಆರ್‌ಆರ್ ನಗರ ಸೇರಿ ಹಲವೆಡೆ ಜೋರು ಮಳೆಯಾಗಿದೆ.ಇನ್ನು ಮುಂದಿನ ಮೂರ್ನಾಲ್ಕು ದಿನ ಬೆಂಗಳೂರಿನಲ್ಲಿ ಸಾಧಾರಣವಾಗಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಜುಲೈ 19ರಂದು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಹವಾಮಾನ ಇಲಾಖೆಯು ಯೆಲ್ಲೋ ಅಲರ್ಟ್ ಘೋಷಿಸಿದ್ದು, ಗುಡುಗುಸಹಿತ ಮಳೆ ಅಬ್ಬರಿಸುವ ಸಾಧ್ಯತೆ ಇದೆ.

ಕರಾವಳಿಯ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಭಾನುವಾರ ಒಂದು ಅಥವಾ ಎರಡು ಸ್ಥಳಗಳಲ್ಲಿ ನಿರಂತರ ಗಾಳಿಯೊಂದಿಗೆ (30–40 ಕಿ.ಮೀ.) ಭಾರೀ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಒಳನಾಡಿನ ಬೆಳಗಾವಿ, ಧಾರವಾಡ, ಗದಗ, ಬೀದರ್, ಕಲಬುರಗಿ, ಹಾವೇರಿ ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿ ನಿರಂತರ ಗಾಳಿಯೊಂದಿಗೆ (40–50 ಕಿ.ಮೀ.) ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಬೆಂಗಳೂರು (ಗ್ರಾಮಾಂತರ), ಬೆಂಗಳೂರು (ನಗರ),



ಮಂಡ್ಯ, ಮೈಸೂರು, ಹಾಸನ, ಕೊಡಗು, ಚಾಮರಾಜನಗರ, ರಾಮನಗರ ಜಿಲ್ಲೆಗಳಲ್ಲಿ ಕೆಲವೆಡೆ ನಿರಂತರ ಗಾಳಿಯೊಂದಿಗೆ (40–50 ಕಿಮೀ) ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ 48 ಸಾಮಾನ್ಯವಾಗಿ ಮೋಡ ಕವಿದ ವಾತಾವರಣ ಇರಲಿದ್ದು, ಕೆಲವು ಪ್ರದೇಶಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಗಂಟೆಗೆ 40–50 ಕಿ.ಮೀ ವೇಗದಲ್ಲಿ ನಿರಂತರ ಗಾಳಿ ಬೀಸುವ ಸಾಧ್ಯತೆ ಇದೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನ ಕ್ರಮವಾಗಿ 29ಲಿಅ ಮತ್ತು 21ಲಿಅ ಇರುವ ಸಾಧ್ಯತೆ ಇದೆ.

ಮಳೆಗೆ ಹಳ್ಳದ ನೀರು ರಭಸವಾಗಿ ಬಂದು ಬೇಲೇಕೇರಿ ಮೀನುಗಾರಿಕೆ ಬಂದರಿನಲ್ಲಿ ಲಂಗರು ಹಾಕಿದ್ದ ಮೂರು ಮೀನುಗಾರಿಕೆ ದೋಣಿಗಳು ಕೊಚ್ಚಿ ಹೋಗಿ ಸಮುದ್ರದಲ್ಲಿ ಮುಳುಗಿವೆ. ರಾತ್ರಿಯೇ ದೋಣಿಗಳು ನೀರಿನ ರಭಸಕ್ಕೆ ಕೊಚ್ಚಿ ಹೋಗಿ ಬಂದರಿನ ಸಮೀಪದ ಅಳಿವೆ ಪ್ರದೇಶದಲ್ಲಿ ಮುಳುಗಿ ಕಲ್ಲಿನ ಮೇಲೆ ಸಿಲುಕಿದ್ದವು.

## ಬಿಡದಿ ಟೌನ್‌ಶಿಪ್ ವಿರುದ್ಧದ ಪಾದಯಾತ್ರೆ ಬಗ್ಗೆ ಜೆಡಿಎಸ್ -ಬಿಜೆಪಿ ಒಮ್ಮತದ ದಿನಾಂಕ ಪ್ರಕಟಿಸಲಿವೆ: ಎನ್. ರವಿಕುಮಾರ್

• ಉದಯವಾಹಿನಿ, ಬೆಂಗಳೂರು

ಬಿಡದಿ ಟೌನ್‌ಶಿಪ್ ಯೋಜನೆಯನ್ನು ಕೈಬಿಡುವಂತೆ ರಾಜ್ಯ ಸರ್ಕಾರವನ್ನು ಆಗ್ರಹಿಸಲು ಬಿಡದಿಯಿಂದ ಬೆಂಗಳೂರುವರೆಗೆ ಬೃಹತ್ ಪಾದಯಾತ್ರೆ ನಡೆಸಲು ಬಿಜೆಪಿ ನಿರ್ಧರಿಸಿದೆ. ಎನ್‌ಡಿಎ ಮಿತ್ರ ಪಕ್ಷವಾಗಿರುವ ಜೆಡಿಎಸ್ ಜುಲೈ 30, 31 ಹಾಗೂ ಆಗಸ್ಟ್ 1 ರಂದು ಪಾದಯಾತ್ರೆ ಎಂಬುದಾಗಿ ದಿನಾಂಕ ಘೋಷಣೆ ಮಾಡಿದೆ. ದಿನಾಂಕದ ಬಗ್ಗೆ ಯಾವುದೇ ವಿವಾದ ಮಾಡುವುದಿಲ್ಲ. ಪಾದಯಾತ್ರೆ ಬಗ್ಗೆ ಎರಡೂ ಪಕ್ಷಗಳು ಒಮ್ಮತದ ನಿರ್ಧಾರ ಪ್ರಕಟಿಸಲಿವೆ ಎಂದು ವಿಧಾನ ಪರಿಷತ್ತಿನ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು ಸ್ಪಷ್ಟಪಡಿಸಿದ್ದಾರೆ.

ಮಲ್ಲೇಶ್ವರದ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ದಿನಾಂಕದ ಬಗ್ಗೆ ಸುದ್ದಿವಾಹಿನಿಗಳಲ್ಲಿ ಚರ್ಚೆಯಾಗುತ್ತಿದೆ. ಬಿಜೆಪಿ ಹಾಗೂ ಜೆಡಿಎಸ್ ಬೇರೆ ಬೇರೆ ಪಾದಯಾತ್ರೆ ಮಾಡುತ್ತವೆಯೇ ಇಲ್ಲವೇ ಒಟ್ಟಿಗೆ ಮಾಡುತ್ತಾರೋ ಎಂದು ಚರ್ಚೆ ಆಗುತ್ತಿದೆ. ನಾವು ಎನ್‌ಡಿಎ ಪಕ್ಷವಾಗಿರುವ ಹಿನ್ನೆಲೆಯಲ್ಲಿ ಎರಡೂ ಪಕ್ಷಗಳ ಬೇಡಿಕೆ ಒಂದೇ ಇದೆ. ದಿನಾಂಕದ ಬಗ್ಗೆ ಬಿಜೆಪಿಗೆ ಯಾವುದೇ ಅಪಸ್ವರ ಇಲ್ಲ ಎಂದರು.

ಎರಡೂ ಪಕ್ಷಗಳ ಆಗ್ರಹ ಬಿಡದಿ ಟೌನ್‌ಶಿಪ್ ಅನ್ನು ರಾಜ್ಯ ಸರ್ಕಾರ ಕೈಬಿಡಬೇಕು ಎಂಬುದೇ ಆಗಿದೆ. ಪಾದಯಾತ್ರೆ ದಿನಾಂಕದ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಒಮ್ಮೆ ಜೆಡಿಎಸ್ ಮುಖಂಡರ ಜೊತೆ ಮಾತನಾಡಲಿದ್ದಾರೆ. ದಿನಾಂಕದ ಬಗ್ಗೆ ಯಾವುದೇ ವಿವಾದ ಮಾಡುವುದಿಲ್ಲ. ಪಾದಯಾತ್ರೆ ಬಗ್ಗೆ




ಎರಡೂ ಪಕ್ಷಗಳು ಒಮ್ಮತದ ನಿರ್ಧಾರ ಪ್ರಕಟಿಸಲಿವೆ ಎಂದು ಹೇಳಿದರು. ಕೂಡಲೇ ಬಿಡದಿ ಟೌನ್‌ಶಿಪ್ ಅನ್ನು ಕೈಬಿಡಬೇಕು ಎಂದು ನಾವು ಆಗ್ರಹಿಸಿದ್ದೇವೆ. ನಿನ್ನೆ ಬೃಹತ್ ಪ್ರತಿಭಟನೆ ನಡೆಸಿದ್ದೇವೆ. ಸಾವಿರಾರು ರೈತರು ಈ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು ಎಂದು ತಿಳಿಸಿದರು.

ಬಿಡದಿ ಟೌನ್‌ಶಿಪ್‌ರೈತರ ಜಮೀನನ್ನು ಒತ್ತಾಯವಾಗಿ ಪಡೆಯುವುದಿಲ್ಲ ಎಂದು ಹೇಳುವ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು, ಭೂಸ್ವಾಧೀನಕ್ಕೆ ಎರಡನೇ ಅಧಿಸೂಚನೆಯನ್ನು ಹೊರಡಿಸಿದ್ದಾರೆ. ಒತ್ತಾಯವಾಗಿ ಭೂಮಿ ಪಡೆಯುವುದಿಲ್ಲ ಎಂದ ಮೇಲೆ ಯಾಕೆ ಅಧಿಸೂಚನೆ ಹೊರಡಿಸಬೇಕು.

ಇಂತಹ ದ್ವಿಮುಖ ನೀತಿಯನ್ನು ಶಿವಕುಮಾರ್ ಅವರು ಬಿಡಬೇಕು ಎಂದು ಆಗ್ರಹಿಸಿದರು. ರೈತರ ಫಲವತ್ತಾದ ಜಮೀನನ್ನು ಟೌನ್ ಶಿಪ್‌ಗೆ ಪಡೆಯಬಾರದು. ಅರ್ಧ ಎಕರೆ ಜಮೀನು ಹೊಂದಿರುವ ರೈತರಿಂದಲೂ ಟೌನ್‌ಶಿಪ್‌ಗೆ ವಶಕ್ಕೆ ಪಡೆಯಲು ಮುಂದಾಗಿದ್ದಾರೆ.

## ಸಂಪುಟ ವಿಸ್ತರಣೆ : ಖರ್ಗೆ ಜೊತೆ ಸಿಎಂ–ಡಿಸಿಎಂ ಚರ್ಚೆ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಇಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಸಂಪುಟ ವಿಸ್ತರಣೆ ಕುರಿತು ಮಹತ್ವದ ಚರ್ಚೆ ನಡೆಸಿದ್ದಾರೆ. ಕಳೆದ ಮೂರು ದಿನಗಳಿಂದಲೂ ಮಲ್ಲಿಕಾರ್ಜುನ ಖರ್ಗೆ ಅವರು,ಬೆಂಗಳೂರಿನಲ್ಲೇ ಉಳಿದಿದ್ದಾರೆ.

ಡಿ.ಕೆ.ಶಿವ ಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಮೊನ್ನೆ ದೆಹಲಿಗೆ ತೆರಳಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್‌ಸಿಂಗ್ ಸುರ್ಜೇವಾಲ ಅವರನ್ನು ಭೇಟಿ ಮಾಡಿ ಸಚಿವ ಸಂಪುಟ ವಿಸ್ತರಣೆ ಮತ್ತು ಪಕ್ಷ ಸಂಘಟನೆ ಬಗ್ಗೆ ಸುದೀರ್ಘ ಚರ್ಚೆ ನಡೆಸಿದ್ದರು. ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿಯಲ್ಲಿ ಇಲ್ಲದೇ ಇದ್ದ ಕಾರಣಕ್ಕೆ ಚರ್ಚೆಗಳು ಅಪೂರ್ಣವಾಗಿದ್ದವು. ನಿನ್ನೆ ತಡ ರಾತ್ರಿ ಬೆಂಗಳೂರಿಗೆ ಆಗಮಿಸಿದ ಡಿ.ಕೆ.ಶಿವಕುಮಾರ್ ಅವರು, ಸದಾಶಿವನಗರದಲ್ಲಿರುವ ಖರ್ಗೆ ಅವರ ನಿವಾಸಕ್ಕೆ ಭೇಟಿ ನೀಡಿದರು. ಕಾಂಗ್ರೆಸ್ ಹೈಕಮಾಂಡ್‌ನ ನಾಯಕರು ಸಂಪುಟ ವಿಸ್ತರಣೆಗೆ ಹಸಿರು ನಿಶಾನೆ ತೋರಿಸಿದ್ದಾರೆ. ಆದರೆ ಕೆಲವರ ಹೆಸರುಗಳ ಬಗ್ಗೆ ಅಸಮಾಧಾನಗಳಿವೆ. ಡಿ.ಕೆ.ಶಿವ ಕುಮಾರ್, ಸಿದ್ದರಾಮಯ್ಯ, ಬಿ.ಕೆ.ಹರಿಪ್ರಸಾದ್ ಪ್ರತ್ಯೇಕವಾದ ಪಟ್ಟಿ ಸಲ್ಲಿಸಿದ್ದರು. ಪ್ರಮುಖ ನಾಯಕರು ನೀಡಿದ್ದ ಸಂಭವನೀಯ ಸಚಿವರ ಕರಡು ಪಟ್ಟಿಗೆ ಹೈಕಮಾಂಡ್ ನಾಯಕರು ಅಸಮಾಧಾನ ವ್ಯಕ್ತಪಡಿಸಿದರು. ಬದಲಾಗಿ ಕೆಲ ಮಾನದಂಡಗಳನ್ನು ನಿಗದಿ ಮಾಡಿ ಸಂಪುಟ ವಿಸ್ತರಣೆಯಲ್ಲಿ ಯಾರನ್ನೆಲ್ಲಾ ಪರಿಗಣಿಸಬೇಕು ಎಂಬ ನಿರ್ದೇಶನ ನೀಡಿದರು.



ಅದರನುಸಾರ ಈಗಾಗಲೇ ಡಿ.ಕೆ.ಶಿವಕುಮಾರ್, ಪರಿಷ್ಕೃತ ಕರಡು ಪಟ್ಟಿಯನ್ನು ಸಿದ್ಧಪಡಿಸಿಕೊಂಡಿದ್ದಾರೆ. ಮಲ್ಲಿಕಾರ್ಜುನ ಖರ್ಗೆಯವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿ ಅವರೊಂದಿಗೆ ಮಾತುಕತೆಯ ಮೂಲಕ ಕೆಲ ನಿರ್ದೇಶನಗಳನ್ನು ಪಡೆದುಕೊಂಡಿದ್ದಾರೆ ಎನ್ನಲಾಗಿದೆ. ದೆಹಲಿಯಲ್ಲಾದ ಚರ್ಚೆಗಳ ಕುರಿತು ಖರ್ಗೆ ಅವರಿಗೆ, ಡಿ.ಕೆ.ಶಿವಕುಮಾರ್ ಸಂಪೂರ್ಣ ಮಾಹಿತಿ ನೀಡಿದ್ದಾರೆ. ಖರ್ಗೆ ಅವರು ಇಂದು ದೆಹಲಿಗೆ ತೆರಳಿದ್ದು, ಡಿ.ಕೆ. ಶಿವಕುಮಾರ್ ಅವರು ವಿಮಾನ ನಿಲ್ದಾಣದವರೆಗೂ ಬೀಳ್ಕೊಟ್ಟಿದ್ದಾರೆ.

ದೆಹಲಿಗೆ ತೆರಳಿದ ಬಳಿಕ ಖರ್ಗೆ ಅವರು, ರಾಹುಲ್ ಗಾಂಧಿ, ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ ಅವರ ಜೊತೆ ಚರ್ಚೆ ಮಾಡಲಿದ್ದಾರೆ ಎಂದು ಹೇಳಲಾಗಿದೆ. ಒಂದು ವೇಳೆ ಈವರೆಗಿನ ಚರ್ಚೆಯಲ್ಲಿ ಅಖೈರುಗೊಂಡಿರುವ ಪಟ್ಟಿಯೇ ಸಮರ್ಪಕವಾಗಿದೆ ಎನಿಸಿದರೆ, ಹೈಕಮಾಂಡ್ ನಾಯಕರು ಸಂಪುಟ ವಿಸ್ತರಣೆಗೆ ಹಸಿರು ನಿಶಾನೆ ನೀಡಲಿದ್ದಾರೆ ಅಥವಾ ಮತ್ತಷ್ಟು ಚರ್ಚೆಗಳು ಅಗತ್ಯ ಎನಿಸಿದರೆ, ಮುಂದಿನ ವಾರದೊಳಗೆ ಮುಖ್ಯಮಂತ್ರಿಯವರನ್ನು ದೆಹಲಿಗೆ ಆಹ್ವಾನಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ದೆಹಲಿಯಲ್ಲಿ ಡಿ.ಕೆ.ಶಿವಕುಮಾರ್ ಅವರು ಸಚಿವ ಸ್ಥಾನ ಆಕಾಂಕ್ಷಿಗಳ ಜೊತೆ ಚರ್ಚೆ ನಡೆಸಿದ್ದರು. ಹೈಕಮಾಂಡ್ ಹೊಸ ಮುಖಗಳಿಗೆ ಮಣೆ ಹಾಕಬೇಕೆಂದು ಸ್ಪಷ್ಟ ನಿರ್ದೇಶನ ನೀಡಿರುವುದರಿಂದ ಹಿರಿಯ ನಾಯಕರು ಅಸಮಾಧಾನಗೊಳ್ಳುವ ಸಾಧ್ಯತೆ ಇದೆ.

ಒಂದು ವೇಳೆ ಅಸಮಾಧಾನ, ಅತೃಪ್ತಿಗಳು ತೀವ್ರಗೊಂಡರೆ ಅದನ್ನು ನಿರ್ವಹಿಸುವ ಕುರಿತು ಡಿ.ಕೆ.ಶಿವಕುಮಾರ್ ಸಮಾಲೋಚನೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

### ಜಾತಿ ಸಮೀಕರಣ–ಪ್ರಾದೇಶಿಕ ಸಮತೋಲನ ಪರಿಗಣನೆ

**ಸಚಿವ ಸ್ಥಾನದ ಆಕಾಂಕ್ಷಿಗಳಿಂದ ಹೆಚ್ಚುತ್ತಿರುವ ಒತ್ತಡ ಮತ್ತು ಪ್ರಾದೇಶಿಕ ಪೈಪೋಟಿಯಿಂದಾಗಿ ಕಾಂಗ್ರೆಸ್ ಹೈಕಮಾಂಡ್ ಸೂಕ್ಷ್ಮವಾದ ಸಮತೋಲನ ಕಾಯ್ದುಕೊಳ್ಳುವ ಕಾರ್ಯಕ್ಕೆ ಇಳಿದಿದೆ, ಇದು ಬಹುನಿರೀಕ್ಷಿತ ಕರ್ನಾಟಕ ಸಚಿವ ಸಂಪುಟ ವಿಸ್ತರಣೆಯನ್ನು ಮತ್ತಷ್ಟು ವಿಳಂಬಗೊಳಿಸಿದೆ. ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಮಾಜಿ ಸಿಎಂ ಸಿದ್ದರಾಮಯ್ಯ ಆದಷ್ಟು ಬೇಗ ಸಂಪುಟ ವಿಸ್ತರಣೆ ಪೂರ್ಣಗೊಳಿಸಲು ಒಲವು ತೋರುತ್ತಿದ್ದಾರೆಂದು ಹೇಳಲಾಗುತ್ತಿದೆ. ಆದರೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಅನುಪಸ್ಥಿತಿಯು ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯನ್ನು ಮತ್ತಷ್ಟು ವಿಳಂಬಗೊಳಿಸಿದೆ.ಹೊಸ ಸಂಪುಟರಚನೆ ಮಾಡುವ ಮೊದಲು ವಿಶಾಲವಾದ ಒಮ್ಮತವನ್ನು ರೂಪಿಸಲು ನಾಯಕತ್ವವು ಉತ್ಸುಕವಾಗಿದೆ ಎಂದು ಕಾಂಗ್ರೆಸ್ ಒಳಗಿನವರು ಹೇಳಿದ್ದಾರೆ. ಸಂಪುಟ ರಚನೆಯನ್ನು ಅಂತಿಮಗೊಳಿಸಲು ಹೈಕಮಾಂಡ್ ಕನಿಷ್ಠ ಒಂದು ವಾರ ತೆಗೆದುಕೊಳ್ಳುತ್ತಾರೆ ಎಂದು ಕಾಂಗ್ರೆಸ್ ಉನ್ನತ ಮೂಲಗಳು ತಿಳಿಸಿವೆ. ರಾಜಕೀಯ ಸಮತೋಲನ ಮತ್ತು ಅನುಭವಿ ಶಾಸಕರಿಗೆ ಅವಕಾಶ ಕಲ್ಪಿಸುವ ಕುರಿತು ಪಕ್ಷದ ಹಿರಿಯ ನಾಯಕರೊಂದಿಗೆ ವ್ಯಾಪಕವಾದ ಸಮಾಲೋಚನೆಗಳು ವಿಳಂಬಕ್ಕೆ ಕಾರಣವೆಂದು ಹೇಳಲಾಗುತ್ತಿದೆ.**

**ಈ ದಿನದ ದರ** ಪೆಟ್ರೋಲ್: 111.68₹/L | ಡೀಸೆಲ್ : 99.56₹/L | ಬಂಗಾರ: ₹ 14,329/Gram 24ct ₹13,135/Gram 22ct | ಬೆಳ್ಳಿ: ₹235.00/Gram

## ಚುನಾವಣಾ ಅಕ್ರಮ ಆರೋಪ: ಶಾಸಕ ಮುನಿರತ್ನ ವಿರುದ್ಧದ ಈಖುಖ ವಜಾಗೊಳಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಚುನಾವಣೆ ವೇಳೆ ನಿರ್ದಿಷ್ಟ ಪಕ್ಷದ ಶಾಲು ಧರಿಸುವಂತೆ ಜನರಿಗೆ ಬಲವಂತಪಡಿಸಿದ ಆರೋಪದ ಮೇಲೆ ರಾಜರಾಜೇಶ್ವರಿನಗರ ಕ್ಷೇತ್ರದ ಶಾಸಕ ಮುನಿರತ್ನ ವಿರುದ್ಧದ ದಾಖಲಾಗಿದ್ದ ಎಫ್‌ಐಆರ್ ಅನ್ನು ಹೈಕೋರ್ಟ್ ರದ್ದುಪಡಿಸಿ ಆದೇಶಿಸಿದೆ.

ನಂದಿನಿ ಲೇಔಟ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಈ ಪ್ರಕರಣದ ರದ್ದು ಕೋರಿ ಶಾಸಕ ಮುನಿರತ್ನ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ಮಾಡಿದೆ.

ಅಲ್ಲದೆ, ಪ್ರಕರಣದಲ್ಲಿ ದಾಖಲಿಸಲಾಗಿರುವ ಸೆಕ್ಷನ್‌ಗಳು ತೀರಾ ಸಡಿಲವಾಗಿದ್ದು, ಸೂಕ್ತ ಆಧಾರಗಳಿಲ್ಲದೆ ಸೇರ್ಪಡೆ ಮಾಡಲಾಗಿದೆ. ಐಪಿಸಿ ಸೆಕ್ಷನ್ 363 ಅಪ್ರಾಪ್ತರ ಅಪಹರಣಕ್ಕೆ ಸಂಬಂಧಿಸಿದ್ದಾಗಿದೆ. ಆದರೆ ಈ ಪ್ರಕರಣದಲ್ಲಿ ಯಾವುದೇ ಅಪ್ರಾಪ್ತರ ಅಪಹರಣ ನಡೆದಿಲ್ಲ. ಹೀಗಿದ್ದರೂ ಪೊಲೀಸರು ಈ ಸೆಕ್ಷನ್ ಅಳವಡಿಸಿರುವುದು ಸರಿಯಾದ ಕ್ರಮವಲ್ಲ ಎಂದು ಪೀಠ ಹೇಳಿದೆ.ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಮತ್ತು ಐಪಿಸಿ ಸೆಕ್ಷನ್ 171-ಸಿ ಅಡಿಯಲ್ಲಿನ ಆರೋಪಗಳಿಗೆ ಸಂಬಂಧಿಸಿದಂತೆ ಈ ಹಿಂದಿನ ತೀರ್ಪುಗಳನ್ನು ಉಲ್ಲೇಖಿಸಿದ ನ್ಯಾಯಪೀಠವು, ಇಂತಹ ಸಣ್ಣಪುಟ್ಟ ವಿಷಯಗಳಲ್ಲಿ ತನಿಖೆಯನ್ನು ಮುಂದುವರಿಸಲು ಅನುಮತಿ ನೀಡುವುದು ಕಾನೂನು ಪ್ರಕ್ರಿಯೆಯ ದುರುಪಯೋಗಕ್ಕೆ ಕಾರಣವಾಗುತ್ತದೆ ಎಂದು ತಿಳಿಸಿದೆ.

ಈ ಪ್ರಕರಣದಲ್ಲಿ ಕಾನೂನು ಕ್ರಮಗಳನ್ನು ಮುಂದುವರಿಸಲು ಬಿಟ್ಟರೆ ಅದು ನ್ಯಾಯದ ಹಾದಿ ತಪ್ಪಿಸಿದಂತಾಗುತ್ತದೆ ಮತ್ತು ಕಾನೂನಿನ ದುರ್ಬಳಕೆಗೆ ದಾರಿ ಮಾಡಿಕೊಡುತ್ತದೆ ಎಂದು ತಿಳಿಸಿರುವ ನ್ಯಾಯಪೀಠ, ವಿಚಾರಣಾ ನ್ಯಾಯಾಲಯದಲ್ಲಿನ ನ್ಯಾಯಿಕ ಪ್ರಕ್ರಿಯೆಯನ್ನು ರದ್ದುಪಡಿಸಿ ಆದೇಶಿಸಿದೆ.



ಉದಯವಾಹಿನಿ ಚಿತ್ರ

## ಚಿತ್ರಕಲಾ ಪರಿಷತ್‌ನಲ್ಲಿ 'ಮೀನಾ ಬಜಾರ್' ಪ್ರದರ್ಶನಕ್ಕೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಗ್ರ್ಯಾಂಡ್ ಫ್ಲಿಯಾ ಮಾರ್ಕೆಟ್ ಆಯೋಜಿಸಿರುವ 'ಮೀನಾ ಬಜಾರ್' ಕಲಾ, ಕರಕುಶಲ, ಕೈಮಗ್ಗ ಹಾಗೂ ಲೈಫ್‌ಸ್ಟೈಲ್ ಪ್ರದರ್ಶನಕ್ಕೆ ಕರ್ನಾಟಕ ಚಿತ್ರಕಲಾ ಪರಿಷತ್, ಕುಮಾರ ಕೃಪಾ ರಸ್ತೆ, ಬೆಂಗಳೂರಿನಲ್ಲಿ ಚಾಲನೆ ದೊರೆಯಿತು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ಉತ್ತರ ವಲಯ ಆಯುಕ್ತ ಡಾ. ಹರೀಶ್ ನಾಯಕ್, ನಟಿ ಜಾನ್ವಿ ರಾಜಶೇಖರ್ ಹಾಗೂ ಬಿಗ್ ಬಾಸ್ ಕನ್ನಡ ವಿಜೇತ ಪ್ರಥಮ್ ಅವರು ಪ್ರದರ್ಶನವನ್ನು ಉದ್ಘಾಟಿಸಿದರು.ಈ ಪ್ರದರ್ಶನದಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸಿರುವ ಪ್ರದರ್ಶಕರು ಕಲಾ ವಸ್ತುಗಳು, ಕರಕುಶಲ ಉತ್ಪನ್ನಗಳು,


ಉದಯವಾಹಿನಿ ಚಿತ್ರ

ಕೈಮಗ್ಗ ಉಡುಪುಗಳು, ಆಭರಣಗಳು, ಗೃಹ ಅಲಂಕಾರ ವಸ್ತುಗಳು, ಲೈಫ್‌ಸ್ಟೈಲ್ ಉತ್ಪನ್ನಗಳು ಹಾಗೂ ಇತರ ವಿಶೇಷ ವಸ್ತುಗಳನ್ನು ಪ್ರದರ್ಶನ ಮತ್ತು ಮಾರಾಟಕ್ಕೆ ಇಟ್ಟಿದ್ದಾರೆ.

ಪ್ರದರ್ಶನವು ಕರ್ನಾಟಕ ಚಿತ್ರಕಲಾ ಪರಿಷತ್ನಲ್ಲಿ ಸಾರ್ವಜನಿಕರ ವೀಕ್ಷಣೆಗೆ ತೆರೆದಿದೆ.


## ಅಪ್ರಾಪ್ತ ಲಿವ್ ಇನ್ ಸಂಗಾತಿಯನ್ನು ಕೊಂದು ಹೂತುಹಾಕಿದ್ದ 16 ವರ್ಷದ ಬಾಲಕ ಸೇರಿ ಮೂವರ ಬಂಧನ!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸಾಮಾಜಿಕ ಜಾಲತಾಣದಲ್ಲಿ ಮತ್ತೊಬ್ಬ ಹುಡುಗನಿಗೆ ಸಂದೇಶ ಕಳುಹಿಸುತ್ತಿರುವುದನ್ನು ಗಮನಿಸಿದ ಅಪ್ರಾಪ್ತ ಬಾಲಕನೊಬ್ಬ ಜುಲೈ 10 ರಂದು ತನ್ನ ಲಿವ್ ಇನ್ ಪಾರ್ಟ್ನರ್ ಆಗಿದ್ದ 16 ವರ್ಷದ ಬಾಲಕಿಯನ್ನು ನಾಡಬಂದೂಕಿನಿಂದ ಗುಂಡಿಕ್ಕಿ ಹತ್ಯೆ ಮಾಡಿರುವ ಭೀಕರ ಘಟನೆ ನಡೆದಿದೆ. ಅಪರಾಧವನ್ನು ಮುಚ್ಚಿಹಾಕುವ ಉದ್ದೇಶದಿಂದ, ಆರೋಪಿಯು ಇತರ ಇಬ್ಬರೊಂದಿಗೆ ಸೇರಿ ಆಕೆಯ ಮೃತದೇಹವನ್ನು ತಮ್ಮ ಕೃಷಿ ಜಮೀನಿನಲ್ಲಿ ಹೂತುಹಾಕಿದ್ದನು. ಪೊಲೀಸರು ಇದೀಗ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ತಾಲ್ಲೂಕಿನ ಕೋಡಿಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಕೆಂಪಾಲನಾಥ ಗ್ರಾಮದಲ್ಲಿ ಈ ಕೊಲೆ ನಡೆದಿದೆ. ಯುವತಿಯ ಪೋಷಕರು ನಾಪತ್ತೆ ದೂರು ನೀಡಿದ ನಂತರ ಪೊಲೀಸರು ಆರೋಪಿಗಳ ಮನೆಗೆ ಭೇಟಿ ನೀಡಿದಾಗ, ಕೊಲೆ ನಡೆದು ಒಂದು ವಾರದ ಬಳಿಕ ಈ ಅಪರಾಧ ಬೆಳಕಿಗೆ ಬಂದಿದೆ.

## ಶೋಭಾ ಕರಂದ್ಲಾಜೆ ವಿರುದ್ಧ ದಾಖಲಿಸಿದ್ದ ಮಾನನಷ್ಟ ಮೊಕದ್ದಮೆ ರದ್ದುಗೊಳಿಸಿದ ಹೈಕೋರ್ಟ್!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕೇಂದ್ರ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ಕಾಂಗ್ರೆಸ್ ಮಾಜಿ ಶಾಸಕಿ ಸೌಮ್ಯಾ ರೆಡ್ಡಿ ದಾಖಲಿಸಿದ್ದ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯನ್ನು ಕರ್ನಾಟಕ ಹೈಕೋರ್ಟ್ ರದ್ದುಗೊಳಿಸಿದೆ. ಏಕಸದಸ್ಯ ಪೀಠವು ಅರ್ಜಿಯನ್ನು ಪುರಸ್ಕರಿಸಿ, ಕೆಳ ನ್ಯಾಯಾಲಯದಲ್ಲಿ ಬಾಕಿ ಇದ್ದ ವಿಚಾರಣಾ ಪ್ರಕ್ರಿಯೆಯನ್ನು ರದ್ದುಪಡಿಸಿದೆ. 2024ರ ಲೋಕಸಭಾ ಚುನಾವಣೆಗೂ ಮುನ್ನ ಹಾಗೂ ನಂತರದ ಸಾರ್ವಜನಿಕ ವೇದಿಕೆಗಳಲ್ಲಿ ಕರಂದ್ಲಾಜೆ ಅವರು ತಮ್ಮ ವಿರುದ್ಧ ಮಾನಹಾನಿಕರ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಿ, ಜಯನಗರದ ಮಾಜಿ ಶಾಸಕಿ ಸೌಮ್ಯಾ ರೆಡ್ಡಿ ಅವರು ದೂರು ದಾಖಲಿಸಿದ್ದರು.

ಈ ಹೇಳಿಕೆಗಳು ತಮ್ಮ ಘನತೆಗೆ ಧಕ್ಕೆ ತಂದಿವೆ ಮತ್ತು ತಮ್ಮ ವರ್ಚಸ್ಸಿಗೆ ಮಸಿ ಬಳಿಯುವ ಉದ್ದೇಶದಿಂದಲೇ ಅವುಗಳನ್ನು ನೀಡಲಾಗಿದೆ ಎಂದು ರೆಡ್ಡಿ ಪ್ರತಿಪಾದಿಸಿದ್ದರು. ಈ ಪ್ರಕರಣವನ್ನು ಬೆಂಗಳೂರಿನ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ದಾಖಲಿಸಲಾಗಿತ್ತು.

ಬೆಂಗಳೂರು ಉತ್ತರ ಕ್ಷೇತ್ರದ ಬಿಜೆಪಿ ಸಂಸದೆ ಹಾಗೂ ಎಂಎಸ್‌ಎಂಇ ಮತ್ತು ಕಾರ್ಮಿಕ ಹಾಗೂ ಉದ್ಯೋಗ ಖಾತೆಯ ಕೇಂದ್ರ ರಾಜ್ಯ ಸಚಿವೆಯಾಗಿರುವ ಕರಂದ್ಲಾಜೆ ಅವರು, ತಮ್ಮ ವಿರುದ್ಧದ ಕಾನೂನು ಪ್ರಕ್ರಿಯೆಗಳನ್ನು ರದ್ದುಗೊಳಿಸುವಂತೆ ಕೋರಿ ಹೈಕೋರ್ಟ್ ಮೊರೆ ಹೋಗಿದ್ದರು.

ಪ್ರಕರಣವನ್ನು ರದ್ದುಗೊಳಿಸುವಾಗ, ಐಪಿಸಿ ಸೆಕ್ಷನ್ 499/500ರ ಅಡಿಯಲ್ಲಿ ಮಾನನಷ್ಟ ಅಪರಾಧವನ್ನು ಸಾಬೀತುಪಡಿಸಲು ಅಗತ್ಯವಿರುವ ಅಂಶಗಳು ಮೇಲ್ನೋಟಕ್ಕೆ ಕಂಡುಬಂದಿಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿತು.

## ಟ್ಯಾಂಕರ್ ಢಿಕ್ಕಿ: ಶಾಲೆಗೆ ಮೊಮ್ಮಕ್ಕಳ ಬಿಡಲು ಹೋಗಿದ್ದ ವೃದ್ಧ ದಾರುಣ ಸಾವು!

• ಉದಯವಾಹಿನಿ, ಬೆಂಗಳೂರು

ಯಲಹಂಕ ನ್ಯೂಟೌನ್‌ನ ಹೊಯ್ಸಳ ಗ್ರೌಂಡ್ ರಸ್ತೆಯಲ್ಲಿ ನೀರಿನ ಟ್ಯಾಂಕರ್ ಸಾಗಿಸುವ ವಾಹನ ಹಾಗೂ ದ್ವಿಚಕ್ರ ವಾಹನದ ನಡುವೆ ಸಂಭವಿಸಿದ ಅಪಘಾತದಲ್ಲಿ ವೃದ್ಧರೊಬ್ಬರು ಮೃತಪಟ್ಟಿದ್ದಾರೆ.ಮೃತರನ್ನು ನ್ಯಾಯಾಂಗ ಬಡಾವಣೆ ನಿವಾಸಿ ವೆಂಕಣ್ಣ (70) ಎಂದು ಗುರುತಿಸಲಾಗಿದ್ದು, ವೆಂಕಣ್ಣ ಅವರ ಮೊಮ್ಮಕ್ಕಳಾದ ಶ್ರಾವಣಿ (12) ಹಾಗೂ ಚರಿತ್ (5) ಕೂದಲೆಳೆ ಅಂತರದಲ್ಲಿ ಪ್ರಾಣಾಯದಿಂದ ಪಾರಾಗಿದ್ದಾರೆ. ವೆಂಕಣ್ಣ ಅವರು ಮೊಮ್ಮಕ್ಕಳನ್ನು ಶಾಲೆಗೆ ಬಿಡಲು ದ್ವಿಚಕ್ರ ವಾಹನದಲ್ಲಿ ಬೆಳಿಗ್ಗೆ ಹೋಗುತ್ತಿದ್ದರು. ದುರ್ಘಟನೆ ನಡೆದಿದೆ. ರಸ್ತೆ ತಿರುವಿನಲ್ಲಿ ವೆಂಕಣ್ಣ ಮತ್ತು ಅವರ ಮೊಮ್ಮಕ್ಕಳು ಸಾಗುತ್ತಿದ್ದ ದ್ವಿಚಕ್ರವಾಹನ ಟ್ಯಾಂಕರ್ ಹಿಂದಿಕ್ಕಿ ಮುಂದಕ್ಕೆ ಸಾಗಲು ಯತ್ನಿಸಿದಾಗ ಹಿಂದಿನಿಂದ ಬಂದ ನೀರಿನ ಟ್ಯಾಂಕರ್ ದ್ವಿಚಕ್ರವಾಹನಕ್ಕೆ ಢಿಕ್ಕಿಯಾಗಿದೆ.

## ಅಗ್ನಿ ಸುರಕ್ಷತಾ ವ್ಯವಸ್ಥೆಗಳಿಲ್ಲದ ಕಟ್ಟಡ ಮಾಲೀಕರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ: GBA ಮುಖ್ಯಸ್ಥ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ಅಪಾಯ ಸಾಧ್ಯತೆಯಿರುವ ಪ್ರದೇಶಗಳಲ್ಲಿ, ಕಡ್ಡಾಯ ಅಗ್ನಿ ಸುರಕ್ಷತಾ ವ್ಯವಸ್ಥೆಗಳನ್ನು ಹೊಂದಿರದ ಕಟ್ಟಡಗಳ ಮಾಲೀಕರ ವಿರುದ್ಧ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವಂತೆ ಪ್ರಾಧಿಕಾರದ ಮುಖ್ಯ ಆಯುಕ್ತ ಎಂ ಮಹೇಶ್ವರ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಬಿಎ ಅಡಿಯಲ್ಲಿನ ವಿವಿಧ ಇಲಾಖೆಗಳ ಸಮನ್ವಯ ಸಭೆಯನ್ನು ಉದ್ದೇಶಿಸಿ ಮಾತನಾಡಿ, ನಗರದ ಸೂಕ್ಷ್ಮ ಪ್ರದೇಶಗಳಲ್ಲಿ ಅಗ್ನಿ ಸುರಕ್ಷತಾ ಪರಿಶೀಲನೆಗಳನ್ನು ನಡೆಸುವಂತೆ ಸೂಚಿಸಿದರು. ಅಗತ್ಯವಿರುವ ಅಗ್ನಿ ಸುರಕ್ಷತಾ ಕ್ರಮಗಳನ್ನು ಕಲ್ಪಿಸಲು ವಿಫಲವಾಗುವ ಕಟ್ಟಡಗಳ ಮಾಲೀಕರ ವಿರುದ್ಧ ಕ್ರಿಮಿನಲ್ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ದುರ್ಬಲ ಪ್ರದೇಶಗಳಲ್ಲಿ ಹೊಸದಾಗಿ ನಿರ್ಮಿಸಲಾದ ವೈಟ್-ಟಾಪಿಂಗ್ ರಸ್ತೆಗಳಲ್ಲಿ ಅಗ್ನಿಶಾಮಕ ಹೈಡ್ರಂಟ್‌ಗಳನ್ನು ಅಳವಡಿಸಿ. ಸ್ಥಾಪಿಸಲಾದ ಹೈಡ್ರಂಟ್‌ಗಳನ್ನು ಪ್ರತಿ ತಿಂಗಳು ಸರಿಯಾಗಿ ನಿರ್ವಹಿಸಬೇಕು ಮತ್ತು ಪರಿಶೀಲಿಸಬೇಕು.

# ಶಿರಾದಲ್ಲಿ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ: ಸಚಿವ ವಿ. ಸೋಮಣ್ಣ

## ಬೆಂಗಳೂರು ಕೈಗಾರಿಕಾ ಕಾರಿಡಾರ್, ರಾಷ್ಟ್ರೀಯ ಹೂಡಿಕೆ ಮತ್ತು ಉತ್ಪಾದನಾ ವಲಯ NIMZ

• ಉದಯವಾಹಿನಿ, ಬೆಂಗಳೂರು

ತುಮಕೂರಿನ ಶಿರಾದಲ್ಲಿ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಬೇಕು ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ಕೇಂದ್ರ ವಿಮಾನಯಾನ ಸಚಿವರನ್ನು ಒತ್ತಾಯಿಸಿದ್ದಾರೆ.

ಈ ಸಂಬಂಧ ಕೇಂದ್ರ ವಿಮಾನಯಾನ ಸಚಿವರಿಗೆ ಪತ್ರ ಬರೆದಿದ್ದು, ರಾಜ್ಯ ಸರ್ಕಾರ ನಿರ್ಮಿಸಲು ಉದ್ದೇಶಿಸಿರುವ ನೂತನ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತುಮಕೂರು ಜಿಲ್ಲೆಯ ಶಿರಾ ಬಳಿ ನಿರ್ಮಿಸಬೇಕೆಂಬುದು ರಾಜ್ಯದ ಬಹುತೇಕ ಜನಪ್ರತಿನಿಧಿಗಳ ಒತ್ತಾಯವಾಗಿದೆ.

> 1 ನಗರಗಳನ್ನು ಸಶಕ್ತವಾಗಿ ಬೆಳೆಸುವುದು
> 2 ಬೆಂಗಳೂರಿನ ಸಮೀಪ ನಿರ್ಮಿಸಿದರೆ
> 3 ಉತ್ತರ ಮತ್ತು ಮಧ್ಯ ಕರ್ನಾಟಕದ

ಈ ಬಗ್ಗೆ ಕಳೆದ ವರ್ಷದ ಮಾರ್ಚ್ 20 ರಂದು ತುಮಕೂರು, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ಬಳ್ಳಾರಿ, ಹಾವೇರಿ ಹಾಗೂ ರಾಯಚೂರು ಸೇರಿದಂತೆ ಪ್ರಮುಖ ಜಿಲ್ಲೆಗಳ ಶಾಸಕರು ನನಗೆ ಪತ್ರ ಬರೆದು ಒತ್ತಾಯಿಸಿದ್ದರು. ಆ ಭಾಗವಾಗಿಯೇ ಅದೇ ವರ್ಷದ ಏಪ್ರಿಲ್ 22ರಂದು ಕೇಂದ್ರದ ನಾಗರಿಕ ವಿಮಾನಯಾನ ಸಚಿವರಾದ ಕೆ. ರಾಮಮೋಹನ ನಾಯ್ಡು ಅವರಿಗೆ ಪತ್ರ ಬರೆದು ಈ ಭಾಗದ ಜನಪ್ರತಿನಿಧಿಗಳ ಒತ್ತಾಸೆಯನ್ನು ಅವರ ಗಮನಕ್ಕೆ ತಂದಿರುವುದಾಗಿ ಮಾಹಿತಿ ನೀಡಿದ್ದಾರೆ.

ಈಗಾಗಲೇ ಕರ್ನಾಟಕ ರಾಜ್ಯವು ಬೆಂಗಳೂರು ಕೇಂದ್ರಿತವಾಗಿ ಅಭಿವೃದ್ಧಿ ಸಾಧಿಸಿದೆ. ಬೆಂಗಳೂರಿಗೆ ಪರ್ಯಾಯವಾಗಿ ರಾಜ್ಯದ ಎಲ್ಲಾ ಭಾಗಗಳನ್ನು, ನಗರಗಳನ್ನು ಸಶಕ್ತವಾಗಿ ಬೆಳೆಸುವುದು ಜನಪ್ರತಿನಿಧಿಗಳೆಲ್ಲರ ಜವಾಬ್ದಾರಿಯೂ ಹೌದು. ಆ ಹಿನ್ನೆಲೆಯಲ್ಲಿ ಮತ್ತೊಂದು ವಿಮಾನ ನಿಲ್ದಾಣವನ್ನು ಬೆಂಗಳೂರಿನ ಸಮೀಪ ನಿರ್ಮಿಸಿದರೆ, ಉತ್ತರ ಮತ್ತು ಮಧ್ಯ ಕರ್ನಾಟಕದ ಅಭಿವೃದ್ಧಿಗೆ ನ್ಯಾಯ ಸಂದಂತೆ ಆಗುವುದಿಲ್ಲ ಎಂದಿದ್ದಾರೆ.

ತುಮಕೂರಿನ ಶಿರಾ ಬಳಿ ನೂತನ ವಿಮಾನ ನಿಲ್ದಾಣ ನಿರ್ಮಾಣ ಮಾಡುವುದರಿಂದ ಮಧ್ಯ ಕರ್ನಾಟಕ ಭಾಗ ಪ್ರಗತಿ ಪಥದಲ್ಲಿ ಸಾಗಲು ಸಾಧ್ಯವಾಗಲಿದೆ. ಶಿರಾದ ಸುತ್ತುಮುತ್ತ ಮುಂಬೈ ಬೆಂಗಳೂರು ಕೈಗಾರಿಕಾ ಕಾರಿಡಾರ್, ರಾಷ್ಟ್ರೀಯ ಹೂಡಿಕೆ ಮತ್ತು ಉತ್ಪಾದನಾ ವಲಯ ಚೆನ್ನೈ ಬೆಂಗಳೂರು ಕೈಗಾರಿಕಾ ಕಾರಿಡಾರ್ ಹಾಗೂ ಕೈಗಾರಿಕಾ ಪ್ರದೇಶಗಳಿವೆ.

ಹೆಚ್ಚಿನ ಪ್ರಮಾಣದ ಸರ್ಕಾರಿ ಭೂಮಿ ಲಭ್ಯವಿದ್ದು, ಭದ್ರಾ ಮೇಲ್ದಂಡೆ ಕಾಲುವೆ, ಹೇಮಾವತಿ ಮತ್ತು ಎತ್ತಿನಹೊಳೆ ಯೋಜನೆಗಳಿಂದ ನೀರಿನ ಲಭ್ಯತೆಯ ಜೊತೆಗೆ ಚಿತ್ರದುರ್ಗದ ಕ್ಯಾಂಪಸ್ ಹಾಗೂ ತುಮಕೂರಿನ ಗುಬ್ಬಿಯ ಹೆಲಿಕಾಪ್ಟರ್ ಘಟಕಗಳೂ ಅತ್ಯಂತ ಸಮೀಪದಲ್ಲಿ ಕಾರ್ಯನಿರ್ವಹಿಸುತ್ತಿವೆ.

ಶಿರಾದ ಈ ಸ್ಥಳವು ಯ ನಿಯಮಕ್ಕನುಗುಣವಾಗಿ ಬೆಂಗಳೂರು ವಿಮಾನ ನಿಲ್ದಾಣದಿಂದ ಸುಮಾರು 150 ಕಿ.ಮೀ ದೂರವಿದೆ. ಅಲ್ಲದೇ, ಇದರಿಂದಾಗಿ ಮಧ್ಯ ಮತ್ತು ಉತ್ತರ ಕರ್ನಾಟಕದ ಜನರಿಗೆ ಅಂತಾರಾಷ್ಟ್ರೀಯ ಪ್ರಯಾಣ ಹಾಗೂ ಸರಕು ಸಾಗಣೆಗೆ ಅನುಕೂಲವಾಗಲಿದೆ. ಕೈಗಾರಿಕೆ, ಉದ್ಯೋಗ, ಹೂಡಿಕೆ ಮತ್ತು ಪ್ರಾದೇಶಿಕ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ದೊರಕಲಿದ್ದು, ರಾಜ್ಯದ ಸಮತೋಲಿತ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಸಚಿವರು ಮನವರಿಕೆ ಮಾಡಿಕೊಟ್ಟಿದ್ದಾರೆ.


ಉದಯವಾಹಿನಿ ಚಿತ್ರ



### ನೂತನ ವಿಮಾನ ನಿಲ್ದಾಣ

ರಾಜ್ಯದ ಸಮಗ್ರ ಅಭಿವೃದ್ಧಿಯ ಹಿತದೃಷ್ಟಿಯಿಂದ ತುಮಕೂರಿನ ಶಿರಾ ಭಾಗದಲ್ಲಿಯೇ ನೂತನ ವಿಮಾನ ನಿಲ್ದಾಣ ನಿರ್ಮಿಸುವಂತೆ ಕೇಂದ್ರ ವಿಮಾನಯಾನ ಸಚಿವರನ್ನು ಒತ್ತಾಯಿಸಿದ್ದೇನೆ. ರಾಜ್ಯ ಸರ್ಕಾರವು ರಾಜ್ಯದ ಸಮಗ್ರ ಅಭಿವೃದ್ಧಿಯನ್ನೇ ಮಾನದಂಡವನ್ನಾಗಿ ಇಟ್ಟುಕೊಂಡು ಚಿಂತನೆ ನಡೆಸಬೇಕೆಂದು ಮನವಿ ಮಾಡಿದ್ದಾರೆ.

NH-48, NH-69, NH-544E 544ಇ ಸೇರಿದಂತೆ ಹಲವು ರಾಷ್ಟ್ರೀಯ ಹೆದ್ದಾರಿಗಳು, ರಾಜ್ಯ ಹೆದ್ದಾರಿಗಳು ಹಾಗೂ ಹೊಸ ರೈಲು ಮಾರ್ಗಗಳ ಸಾರಿಗೆ ಸಂಪರ್ಕ ಜಾಲವೂ ಬಲವಾಗಿದೆ ಎಂದು ತಿಳಿಸಿದ್ದಾರೆ.-ಸಚಿವ ವಿ. ಸೋಮಣ್ಣ

ಶಿರಾದಲ್ಲಿ ನೂತನ ವಿಮಾನ ನಿಲ್ದಾಣ ನಿರ್ಮಾಣ ಮಾಡುವುದರಿಂದ ಮಧ್ಯ ಕರ್ನಾಟಕ ಹಾಗೂ ಉತ್ತರ ಕರ್ನಾಟಕದ ಪ್ರಮುಖ ಜಿಲ್ಲೆಗಳ ಪ್ರಗತಿಗೆ ಸಹಾಯಕವಾಗಲಿದೆ ಎಂದು ತಿಳಿಸಿದ್ದಾರೆ.-ಸಚಿವ ವಿ. ಸೋಮಣ್ಣ


**ತುಮಕೂರಿನ ಶಿರಾ ಬಳಿ ನೂತನ ವಿಮಾನ ನಿಲ್ದಾಣ ನಿರ್ಮಾಣ ಮಾಡುವುದರಿಂದ ಮಧ್ಯ ಕರ್ನಾಟಕ ಭಾಗ ಪ್ರಗತಿ ಪಥದಲ್ಲಿ ಸಾಗಲು ಸಾಧ್ಯವಾಗಲಿದೆ.**

### ತುಮಕೂರಿನಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಆಗಬೇಕು ಎಂಬ ಇಚ್ಛೆಯನ್ನು ಈಗಾಗಲೇ ಹೇಳಿದ್ದೇನೆ: ಸಚಿವ ಜಿ.ಪರಮೇಶ್ವರ್



ರಾಜ್ಯದ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತುಮಕೂರಿನಲ್ಲಿ ನಿರ್ಮಾಣವಾಗಬೇಕು ಎಂಬ ಇಚ್ಛೆಯನ್ನು ನಾನು ಮೊದಲಿನಿಂದಲೂ ಹೇಳಿದ್ದೇನೆ ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಹೇಳಿದ್ದಾರೆ. ಸದಾಶಿವನಗರದ ಗೃಹ ಕಚೇರಿ ಬಳಿ ಸುದ್ದಿಗಾರರೊಂದಿಗೆ ಅವರು ಮಾತನಾಡಿ, 2ನೇ ವಿಮಾನನಿಲ್ದಾಣ ತುಮಕೂರಿನಲ್ಲಿ ಆಗಬೇಕು ಎಂದು ಬಿ.ವೈ.ವಿಜಯೇಂದ್ರ ಅವರು ತಮಗೆ ತಿಳಿದ ರೀತಿಯಲ್ಲಿ ಹೇಳಿದ್ದಾರೆ. 2ನೇ ವಿಮಾನ ನಿಲ್ದಾಣ ತುಮಕೂರಿಗೆ ಆಗಬೇಕು ಎಂಬ ಇಚ್ಛೆಯನ್ನು ನಾನು ಮೊದಲಿನಿಂದಲೂ ಹೇಳಿದ್ದೇನೆ. ತಾಂತ್ರಿಕ ಸಮಿತಿಯು ನೆಲಮಂಗಲದ ಕುಣಿಗಲ್ ರಸ್ತೆ ಹಾಗೂ ಬಿಡದಿ ಪ್ರದೇಶಗಳನ್ನು ಪರಿಶೀಲಿಸಿ ಸರ್ಕಾರಕ್ಕೆ ಶಿಫಾರಸು ಸಲ್ಲಿಸಿದ್ದು, ಡಿಜಿಸಿಎ ತಾಂತ್ರಿಕ ಪರಿಶೀಲನೆ ನಡೆಸಿದ ಬಳಿಕ ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಲಿದೆ. ತುಮಕೂರಿನಲ್ಲಿ ವಿಮಾನ ನಿಲ್ದಾಣವಾದರೆ ಸುಮಾರು 20 ಜಿಲ್ಲೆಗಳ ಜನರಿಗೆ ಅನುಕೂಲವಾಗಲಿದ್ದು, ತಾಂತ್ರಿಕವಾಗಿಯೂ ಸೂಕ್ತ ಸ್ಥಳವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಬಿಡದಿ ಟೌನ್‌ಶಿಪ್ ವಿರೋಧಿಸಿ ಪಾದಯಾತ್ರೆ ಕೈಗೊಳ್ಳುತ್ತಿರುವ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸರ್ಕಾರ ಅಭಿವೃದ್ಧಿಯ ದೃಷ್ಟಿಯಿಂದ ಯೋಜನೆಯನ್ನು ಕೈಗೆತ್ತಿಕೊಂಡಿದ್ದು, ಭೂಸ್ವಾಧೀನದ ವಿಚಾರದಲ್ಲಿ ಯಾರ ಮೇಲೂ ಒತ್ತಾಯ ಮಾಡುವುದಿಲ್ಲ. ಮನವೊಲಿಸುವ ಪ್ರಯತ್ನ ನಡೆಸಲಾಗುವುದು ಎಂದು ಮುಖ್ಯಮಂತ್ರಿಯವರು ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಈ ವಿಷಯವನ್ನು ರಾಜಕೀಯ ದೃಷ್ಟಿಯಿಂದ ನೋಡದೇ, ರಾಜ್ಯದ ಅಭಿವೃದ್ಧಿಯ ದೃಷ್ಟಿಯಿಂದ ಪರಿಗಣಿಸಬೇಕು ಎಂದು ಹೇಳಿದ್ದಾರೆ. ಗ್ರಾಮೀಣಾಭಿವೃದ್ಧಿ ಇಲಾಖೆಯ ಇ-ಸ್ವತ್ತು ವಿತರಣೆಯನ್ನು ವೇಗಗೊಳಿಸಲು ಕಂದಾಯ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದ್ದು, ಹಲವು ವರ್ಷಗಳಿಂದ ಬಾಕಿ ಉಳಿದಿರುವ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ರಾಜ್ಯದಲ್ಲಿನ ಬರ ಪರಿಸ್ಥಿತಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಅವರೊಂದಿಗೆ ಬೆಳಗಾವಿ ಕಂದಾಯ ವಿಭಾಗ, ಕಲಬುರ್ಗಿ ಕಂದಾಯ ವಿಭಾಗ, ತುಮಕೂರು ಹಾಗೂ ಚಿತ್ರದುರ್ಗ ಜಿಲ್ಲೆಗಳ ಪ್ರಗತಿ ಪರಿಶೀಲನೆ ನಡೆಸಲಾಗಿದೆ. ಬರ ಪರಿಸ್ಥಿತಿಯನ್ನು ಎದುರಿಸಲು ಮುಂದೆ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಸಿಇಒಗಳೊಂದಿಗೆ ನಾಳೆ ವಿಡಿಯೊ ಕಾನ್ಫರೆನ್ಸ್ ಮೂಲಕ ಮುಖ್ಯಮಂತ್ರಿಯವರು ಸಭೆ ಕರೆದಿದ್ದಾರೆ.

## ಸೋದೆ ಶ್ರೀ ವಾದಿರಾಜ ಮಠಾಧೀಶರಿಂದ ಭಾಗವತ ಕಥಾ ಪ್ರವಚನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಶ್ರೀಕೃಷ್ಣ ಸೇವಾ ಸಮಾಜ ಟ್ರಸ್ಟ್ ವತಿಯಿಂದ ಸೋದೆ ಶ್ರೀ ವಾದಿರಾಜ ಮಠಾಧೀಶರಾದ ಪರಮಪೂಜ್ಯ ಶ್ರೀ ಶ್ರೀ ವಿಶ್ವವಲ್ಲಭತೀರ್ಥ ಶ್ರೀಪಾದಂಗಳವರು ಜುಲೈ 18 ರಿಂದ 24ರ ವರೆಗೆ ಪ್ರತಿದಿನ ಸಂಜೆ 4-00 ರಿಂದ 6-30ರ ತನಕ ನಗರದ ಕೆ.ಆರ್. ರಸ್ತೆಯಲ್ಲಿರುವ ಶ್ರೀಕೃಷ್ಣ ವಾದಿರಾಜ ಮಂದಿರದಲ್ಲಿ (ರಾಯ ರಾಯ ಕಲ್ಯಾಣ ಮಂಟಪದ ಆವರಣದಲ್ಲಿ) ಶ್ರೀಮದ್ಭಾಗವತ ಪ್ರವಚನ ನೀಡಲಿದ್ದಾರೆ. ಈ ವಿಶೇಷ ಕಾರ್ಯಕ್ರಮದಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹರಿ ವಾಯು ಗುರುಗಳ ಅನುಗ್ರಹದಿಂದ ಪಾತ್ರರಾಗಬೇಕೆಂದು ಶ್ರೀಮಠದ ಪದಾಧಿಕಾರಿಗಳು ವಿನಂತಿಸಿದ್ದಾರೆ.

## ಪೊಲೀಸ್‌ರಿಗೆ ಉಚಿತ ದೃಷ್ಟಿ ರಕ್ಷಣೆ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಸಮುದಾಯದ ಆರೋಗ್ಯ ಮತ್ತು ತಡೆಗಟ್ಟುವ ಕಣ್ಣಿನ ಆರೈಕೆಯ ಬಗೆಗಿನ ತನ್ನ ಬದ್ಧತೆಯನ್ನು ಮುಂದುವರಿಸುತ್ತಾ, ಪ್ರಸಿದ್ಧ 'ಡಾ. ಅಗರ್ವಾಲ್ಸ್ ಕಣ್ಣಿನ ಆಸ್ಪತ್ರೆ'ಯು ಬೆಂಗಳೂರಿನ ಪಶ್ಚಿಮ ವಿಭಾಗದ ಪೊಲೀಸ್ ಸಿಬ್ಬಂದಿಗಾಗಿ ವಿಶೇಷ 'ದೃಷ್ಟಿ ರಕ್ಷಣೆ' ಕಾರ್ಯಕ್ರಮವೊಂದನ್ನು ಹಮ್ಮಿಕೊಂಡಿತ್ತು.

ಕಠಿಣ ಹವಾಮಾನ ಪರಿಸ್ಥಿತಿಗಳ ನಡುವೆಯೂ ಅವಿರತವಾಗಿ ಸೇವೆ ಸಲ್ಲಿಸುತ್ತಿರುವ ವಿಜಯನಗರ, ಮಾಗಡಿ ರಸ್ತೆ, ಕಾಮಾಕ್ಷಿಪಾಳ್ಯ, ಬಸವೇಶ್ವರನಗರ, ಅಗ್ರಹಾರ, ಗೋವಿಂದರಾಜನಗರ ಮತ್ತು ಪಶ್ಚಿಮ ಮಹಿಳಾ ಪೊಲೀಸ್ ಠಾಣೆಗಳ 600ಕ್ಕೂ ಹೆಚ್ಚು ಸಿಬ್ಬಂದಿಗೆ ಈ ಸಂದರ್ಭದಲ್ಲಿ ಉಚಿತ ಕನ್ನಡಕ ಮತ್ತು ಸನ್-ಗ್ಲಾಸ್‌ಗಳನ್ನು ವಿತರಿಸಲಾಯಿತು.

ಕಣ್ಣಿನ ರಕ್ಷಣೆ ಮತ್ತು ದೇಹದಲ್ಲಿ ನೀರಿನಂಶವನ್ನು ಸಮರ್ಪಕವಾಗಿ ಕಾಯ್ದುಕೊಳ್ಳುವ ಮಹತ್ವದ ಬಗ್ಗೆ ಅರಿವು ಮೂಡಿಸುವುದು ಈ



ಉದಯವಾಹಿನಿ ಚಿತ್ರ

ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು. ಅಧಿಕಾರಿಗಳು ನಿಯಮಿತ ಕಣ್ಣಿನ ತಪಾಸಣೆಯನ್ನು ತಮ್ಮ ಆರೋಗ್ಯ ದಿನಚರಿಯ ಭಾಗವಾಗಿಸಿಕೊಳ್ಳಬೇಕು ಎಂದು ಡಾ.ರಾಕೇಶ್ ಸೀನಪ್ಪ, ಪ್ರಾದೇಶಿಕ ಮುಖ್ಯಸ್ಥರು (ರೆಟಿನಾ ಸೇವೆಗಳು), ಡಾ. ಅಗರ್ವಾಲ್ಸ್ ಆಸ್ಪತ್ರೆ ತಿಳಿಸಿದರು.

ಬೆಂಗಳೂರು ನಗರದ ಪಶ್ಚಿಮ ವಿಭಾಗದ ಪೊಲೀಸ್ ಉಪ ಆಯುಕ್ತರಾದ ಯತೀಶ್ ಎನ್ ಮತ್ತು ವಿಜಯನಗರ ಉಪ-ವಿಭಾಗದ ಸಹಾಯಕ ಪೊಲೀಸ್ ಆಯುಕ್ತರಾದ ಭೂತೇಗೌಡ ವಿ.ಎಸ್. ಅವರ ಸಮ್ಮುಖದಲ್ಲಿ ಕನ್ನಡಕಗಳನ್ನು ವಿತರಿಸಲಾಯಿತು.

## ವಿಶ್ವಮಟ್ಟದ ಇಬ್ಬರು ಐಬಿ ಟಾಪರ್‌ಗಳಿಂದ 45ಕ್ಕೆ 45 ಅಂಕಗಳಿಕೆ

• ಉದಯವಾಹಿನಿ, ಬೆಂಗಳೂರು

ಇಂಡಸ್ ಇಂಟರ್ನ್ಯಾಷನಲ್ ಸ್ಕೂಲ್ ಹೈದರಾಬಾದ್ ಮೇ 2026ರ ಇಂಟರ್ನ್ಯಾಷನಲ್ ಬಕ್ಕಾಲುರೇಟ್ ಡಿಪ್ಲೊಮಾ ಪ್ರೋಗ್ರಾಮ್ (ಐಬಿಡಿಪಿ) ಪರೀಕ್ಷೆಗಳಲ್ಲಿ ಅಸಾಧಾರಣ ಫಲಿತಾಂಶಗಳನ್ನು ನೀಡಿದ್ದು ರುಹಾನ್ ಗುಡೇಲಿ ಮತ್ತು ಸುಜಯ ರೆಡ್ಡಿ ಸುರುಕುಂಟಿ ಎಂಬ ಇಬ್ಬರು ವಿದ್ಯಾರ್ಥಿಗಳು 45ಕ್ಕೆ 45 ಅಂಕ ಗಳಿಸಿ ವಿಶ್ವದ ಮುಂಚೂಣಿಯ ಐಬಿ ಸಾಧಕರ ಸಾಲಿಗೆ ಸೇರಿದ್ದಾರೆ.

ಪ್ರತಿ ವರ್ಷ ಜಾಗತಿಕವಾಗಿ ಐಬಿ ಅಭ್ಯರ್ಥಿಗಳಲ್ಲಿ ಅತ್ಯಂತ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳು ಮಾತ್ರ 45ಕ್ಕೆ 45ರಷ್ಟು ಪರಿಪೂರ್ಣ ಅಂಕಗಳನ್ನು ಗಳಿಸಲು ಸಾಧ್ಯವಾಗುತ್ತದೆ. ಅಂತಹದರಲ್ಲಿ ಒಂದೇ ಬ್ಯಾಚ್ ನ ಇಬ್ಬರು ವಿದ್ಯಾರ್ಥಿಗಳು ಒಂದೇ ವರ್ಷದಲ್ಲಿ ಈ ಸಾಧನೆ ಮಾಡಿರುವುದು ನಿಜಕ್ಕೂ ಒಂದು ಅಸಾಧಾರಣ ಸಾಧನೆಯಾಗಿದೆ.

ಇದು ಇಂಡಸ್ ಸಂಸ್ಥೆಯ ಆಳವಾದ ಮತ್ತು ಸ್ಥಿರವಾದ ಶೈಕ್ಷಣಿಕ ಉತ್ಕೃಷ್ಟತೆಗೆ ಸಾಕ್ಷಿಯಾಗಿದೆ.ಇವರಲ್ಲಿ ರುಹಾನ್ ಗುಡೇಲಿ ಅವರು ಗಣಿತವನ್ನು ಪ್ರಮುಖ ವಿಷಯವಾಗಿ ಆಯ್ದುಕೊಂಡು ನ್ಯಾಷನಲ್ ಯೂನಿವರ್ಸಿಟಿ ಆಫ್ ಸಿಂಗಾಪುರ್(ಎನ್.ಯು.ಎಸ್.) ನಲ್ಲಿ ಪ್ರವೇಶ ಪಡೆದಿದ್ದರೆ, ಸುಜಯ್ ರೆಡ್ಡಿ ಸುರುಕುಂಟಿ ಅವರು ಎನ್.ವೈ.ಯು ಸ್ಟರ್ನ್ ಸ್ಕೂಲ್ ಆಫ್ ಬಿಸಿನೆಸ್‌ನಲ್ಲಿ ಫೈನಾನ್ಸ್ ವ್ಯಾಸಂಗ ಮಾಡಲು ಪ್ರವೇಶ ಪಡೆದಿದ್ದಾರೆ.

ಈ ಅತ್ಯುತ್ತಮ ಫಲಿತಾಂಶದ ಹೆಗ್ಗಳಿಕೆಯು ಕೇವಲ ಅಗ್ರ ಶ್ರೇಯಾಂಕದ ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತವಾಗಿರದೆ, ಇಡೀ ತಂಡಕ್ಕೆ ವಿಸ್ತರಿಸಿದೆ. ಈ ಪದವಿ ಬ್ಯಾಚ್ ನ ಒಟ್ಟು ಹನ್ನೆರಡು ವಿದ್ಯಾರ್ಥಿಗಳು 40 ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನುಗಳಿಸಿದ್ದಾರೆ. ಇದು ವಿಶ್ವಾದ್ಯಂತ ಐಬಿ ಅಭ್ಯರ್ಥಿಗಳಲ್ಲಿ ಕೇವಲ ಅತ್ಯಲ್ಪ ಪ್ರಮಾಣದ ವಿದ್ಯಾರ್ಥಿಗಳು ಮಾತ್ರ ಸಾಧಿಸಬಹುದಾದ ಅತ್ಯುನ್ನತ ಮೈಲಿಗಲ್ಲಾಗಿದೆ. ಅಮೋಘ್ ರೆಡ್ಡಿ ಬಡಿಕೋಲ್ 44 ಅಂಕಗಳನ್ನು ಗಳಿಸಿದರೆ, ಆಶ್ನಾ ನರೈನ್, ಈಶಾನ್ವಿ ಟುಪಿಲಿ, ಇಶಿತಾ ಚೌದರಿ ಕರುಟೂರಿ ಮತ್ತು ಸಾನ್ವಿ ಕಾಬ್ರಾ ತಲಾ 43 ಅಂಕಗಳನ್ನು ಪಡೆದು ಸಾಧನೆ ಮಾಡಿದ್ದಾರೆ.

### ಸಾಧಕರ ಪಟ್ಟಿಯನ್ನು ಪೂರ್ಣಗೊಳಿಸಿ

ನೈತ್ರವ್ ಸತೀಶ್, ಪ್ರಣವ್ ನಾರಾಯಣ ಗಂಪ, ಶ್ರೇಯಾ ರಮೇಶ್ ಮತ್ತು ಶ್ರೇಯಾ ಸಿಂಗ್ ತಲಾ 41 ಅಂಕಗಳನ್ನು ಗಳಿಸಿದ್ದು, ಇವರೊಂದಿಗೆ ಸಂಯೋಗಿತಾ ಬೊಬ್ಬಾ 40 ಅಂಕಗಳನ್ನು ಪಡೆಯುವ ಮೂಲಕ ಈ ಹೆಮ್ಮೆಯ ಸಾಧಕರ ಪಟ್ಟಿಯನ್ನು ಪೂರ್ಣಗೊಳಿಸಿದ್ದಾರೆ.


ಉದಯವಾಹಿನಿ ಚಿತ್ರ

# ಸರ್ಕಾರಿ ಶಾಲೆಗಳ 15 ಸಾವಿರ ಶಿಕ್ಷಕರ ನೇರ ನೇಮಕಾತಿ: ಅಧಿಕೃತ ಆದೇಶ ಪ್ರಕಟ

## ಕಲ್ಯಾಣ ಕರ್ನಾಟಕಕ್ಕೆ 6905 ಹಾಗೂ ಇತರೆ ಜಿಲ್ಲೆಗಳಿಗೆ 8095 ಹುದ್ದೆ ನೇಮಕಕ್ಕೆ ಅಧಿಸೂಚನೆ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿ ಇರುವ ವಿವಿಧ ವೃಂದದ ಒಟ್ಟು 15,000 ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಸರ್ಕಾರವು ಅಧಿಕೃತ ಆದೇಶ ಹೊರಡಿಸಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಈ ಅನುಮೋದನೆ ನೀಡಲಾಗಿದೆ. ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ) ಬಿ.ಕೆ. ಮಮತಾ ರಾಣಿ ಅವರು ಈ ಸಂಬಂಧ ಅಧಿಕೃತ ಆದೇಶ ಹೊರಡಿಸಿದ್ದಾರೆ.

ಕಲ್ಯಾಣ ಕರ್ನಾಟಕಕ್ಕೆ 6905 ಹಾಗೂ ಇತರೆ ಜಿಲ್ಲೆಗಳಿಗೆ 8095 ಹುದ್ದೆ ನೇಮಕಕ್ಕೆ ಅಧಿಸೂಚನೆ ಹೊರಡಿಸಲಾಗಿದೆ. ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ದೀರ್ಘಕಾಲದಿಂದ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಂದಾಗಿ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗುತ್ತಿತ್ತು. ಈ ನೇರ ನೇಮಕಾತಿಯ ಮೂಲಕ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಸಹಕಾರಿಯಾಗಲಿದ್ದು, ಶಿಕ್ಷಕ ಆಕಾಂಕ್ಷಿಗಳಿಗೆ ಉತ್ತಮ ಉದ್ಯೋಗಾವಕಾಶ ದೊರೆಯಲಿದೆ.

ಶೀಘ್ರದಲ್ಲೇ ಶಾಲಾ ಶಿಕ್ಷಣ ಇಲಾಖೆಯು ಈ ಹುದ್ದೆಗಳ ಭರ್ತಿಗಾಗಿ ಅಧಿಕೃತ ಅಧಿಸೂಚನೆ ಮತ್ತು ಅರ್ಜಿ ಸಲ್ಲಿಸುವ ಪ್ರಕ್ರಿಯೆಯ ವಿವರಗಳನ್ನು ಪ್ರಕಟಿಸಲಿದೆ. ಅಧಿಸೂಚನೆಯಲ್ಲಿರುವ ನಿಯಮಾವಳಿಯಂತೆ ಅಭ್ಯರ್ಥಿಗಳ ಆಯ್ಕೆಗೆ ಸ್ಪರ್ಧಾತ್ಮಕ


ಉದಯವಾಹಿನಿ ಚಿತ್ರ

ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಉಳಿದಂತೆ ಸ್ಪರ್ಧಾತ್ಮಕ ಪರೀಕ್ಷೆ, ಶಿಕ್ಷಕರ ಅರ್ಹತಾ ಪರೀಕ್ಷೆ ಮತ್ತು ಶೈಕ್ಷಣಿಕ ಅರ್ಹತೆಯಲ್ಲಿ ಪಡೆದ ಅಂಕಗಳನ್ನು ಪರಿಗಣಿಸಿ ವೇಟೇಜ್ ಆಧಾರದ ಮೇಲೆ ಮೆರಿಟ್ ಪಟ್ಟಿ ಸಿದ್ಧಪಡಿಸಲಾಗುತ್ತದೆ. ಅಭ್ಯರ್ಥಿಗಳಿಗೆ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪ್ರತಿ ಪತ್ರಿಕೆಯಲ್ಲೂ ಕನಿಷ್ಠ ಶೇ. 35 ಅಂಕ ಗಳಿಸುವುದನ್ನು ಕಡ್ಡಾಯಗೊಳಿಸಲಾಗಿದ್ದು, ಪರೀಕ್ಷೆಯು ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ನಡೆಯಲಿದೆ. ಇನ್ನು, ಅಭ್ಯರ್ಥಿಗಳು ಕನಿಷ್ಠ 21 ವರ್ಷ ಪೂರೈಸಿರಬೇಕಿದೆ. ಪರಿಶಿಷ್ಟ ಜಾತಿ/ಪಂಗಡ, ಪ್ರವರ್ಗ-1 ಮತ್ತು ವಿಶೇಷ ಚೇತನರಿಗೆ 43 ವರ್ಷಗಳು, ಪ್ರವರ್ಗ-2ಎ, 2ಬಿ, 3ಎ, 3ಬಿಗೆ 41 ವರ್ಷ ಹಾಗೂ ಸಾಮಾನ್ಯ ಅಭ್ಯರ್ಥಿಗಳಿಗೆ 38 ವರ್ಷಗಳ ಗರಿಷ್ಠ ವಯೋಮಿತಿ ನಿಗದಿ ಮಾಡಲಾಗಿದೆ. ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ವಸ್ತು ನಿಷ್ಠ ಮತ್ತು ವಿವರಣಾತ್ಮಕ ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿರಲಿದೆ ಎಂದು ಕರಡು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

### ಜಿಲ್ಲಾವಾರು ವಿವರ

ಇತರೆ ಜಿಲ್ಲೆಗಳ ಹುದ್ದೆ
ಜಿಪಿಟಿ- 5272
ಪ್ರೌಢಶಾಲೆ- 2286
PST - 100
ಕಂಪ್ಯೂಟರ್ ಸೈನ್ಸ್ -200
PE ಗ್ರೇಡ್ 1- 131
PE ಗ್ರೇಡ್- 2- 106

### ಜಿಲ್ಲಾವಾರು ವಿವರ

ಕಲ್ಯಾಣ ಕರ್ನಾಟಕ ವಿವರ
ಜಿಪಿಟಿ- 3228
ಪ್ರೌಢಶಾಲೆ- 2214
PST- 800
ಕಂಪ್ಯೂಟರ್ ಸೈನ್ಸ್-300
PE ಗ್ರೇಡ್ 1- 319
PE ಗ್ರೇಡ್- 2- 44

**ಬಜೆಟ್ ಘೋಷಣೆಯ ಅನುಷ್ಠಾನ**

2026-27ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದಂತೆ, ಶಾಲಾ-ಕಾಲೇಜುಗಳಲ್ಲಿ ಖಾಲಿ ಇರುವ 15,000 ಬೋಧಕ ಹುದ್ದೆಗಳನ್ನು ಭರ್ತಿ ಮಾಡುವುದಾಗಿ ಸರ್ಕಾರ ತಿಳಿಸಿತ್ತು. ಅದರಂತೆ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಈ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಈ ನೇಮಕಾತಿಯನ್ನು ಪ್ರಮುಖವಾಗಿ ಎರಡು ವಿಭಾಗಗಳಾಗಿ ವಿಂಗಡಿಸಲಾಗಿದ್ದು, ಕಲ್ಯಾಣ ಕರ್ನಾಟಕ ಭಾಗಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ.

# ಖಾಸಗಿ ಶಾಲೆಗಳ ವಾಹನಗಳಿಗೆ ಇಲ್ಲ ಜಿಪಿಎಸ್, ಸಿಸಿಟಿವಿ: ಮಕ್ಕಳ ಸುರಕ್ಷತೆ ಸಂಪೂರ್ಣ ಗಾಳಿಗೆ!

## ನಿಯಮಗಳನ್ನು ಗಾಳಿಗೆ ತೂರಿ ಪೋಷಕರ ಜೇಬಿಗೆ ಕತ್ತರಿ; ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಯಮಾವಳಿಗಳ ಸ್ಪಷ್ಟ ಉಲ್ಲಂಘನೆ

• **ಇಲಿಯಾಸ್ ಪಟೇಲ್, ಬಳಗಾನೂರು(ರಾಜ್ಯ ವಿಶೇಷ ವರದಿಗಾರರು)**

• **ಉದಯವಾಹಿನಿ,ಕೆಂಭಾವಿ:**

ಪಟ್ಟಣದ ಪ್ರತಿಷ್ಠಿತ ಖಾಸಗಿ ಶಿಕ್ಷಣ ಸಂಸ್ಥೆಗಳು ಕೇವಲ ಅಕ್ರಮ ವಸತಿ ನಿಲಯಗಳನ್ನು (ಹಾಸ್ಟೆಲ್) ನಡೆಸಿ ಕೋಟಿ

**1 : ಉಗ್ರ ಹೋರಾಟದ ಎಚ್ಚರಿಕೆ**
**2 : ಪೋಷಕರಿಂದ ಭಾರಿ ಸುಲಿಗೆ**
**3 : ಪ್ರಮುಖ ಸುರಕ್ಷತಾ ಲೋಪಗಳು**

ಕೋಟಿ ಲೂಟಿ ಮಾಡುತ್ತಿರುವುದು ಮಾತ್ರವಲ್ಲದೆ, ತಾವೇ ನಡೆಸುತ್ತಿರುವ ಶಾಲಾ ವಾಹನಗಳ ಸುರಕ್ಷತೆಯಲ್ಲೂ ನಿಯಮಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಿರುವುದು ಈಗ ಜಗಜ್ಜಾಹೀರಾಗಿದೆ. ಶಾಲೆಗಳು ಪ್ರವೇಶಾತಿ, ಯೂನಿಫಾರ್ಮ್, ಪಠ್ಯಪುಸ್ತಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಹೆಸರಿನಲ್ಲಿ ಪೋಷಕರಿಂದ ಸಾವಿರಾರು ರೂಪಾಯಿಗಳನ್ನು ಸುಲಿಗೆ ಮಾಡುತ್ತಿವೆ.

ತರಗತಿ ಶುಲ್ಕ ಹಾಗೂ ವಾಹನಗಳ ಭತ್ಯೆ ಹೆಸರಿನಲ್ಲಿ ಭಾರಿ ಹಣ ವಸೂಲಿ ಮಾಡುತ್ತಿದ್ದರೂ, ಸಾರಿಗೆ ವಾಹನಗಳಲ್ಲಿ ವಿದ್ಯಾರ್ಥಿಗಳ ಭದ್ರತೆಗೆ ಬೇಕಾದ ಕನಿಷ್ಠ ಸುರಕ್ಷತಾ ಕ್ರಮಗಳನ್ನು ಒದಗಿಸುತ್ತಿಲ್ಲ ಎಂದು ಪೋಷಕರು ಅಳಲು ತೋಡಿಕೊಂಡಿದ್ದಾರೆ.


ಉದಯವಾಹಿನಿ ಚಿತ್ರ

ಬಸ್ ಹಾಗೂ ವ್ಯಾನ್‌ಗಳಲ್ಲಿ ಜಿಪಿಎಸ್ ಇಲ್ಲದೆ ಇರುವುದರಿಂದ ತಮ್ಮ ಮಕ್ಕಳು ಎಲ್ಲಿದ್ದಾರೆ ಎಂಬ ಕನಿಷ್ಠ ಮಾಹಿತಿಯೂ ಪೋಷಕರಿಗೆ ಸಿಗದಂತಾಗಿದೆ. ವಾಹನಗಳ ಒಳಗೆ ಮಕ್ಕಳ ನಡುವೆ ಅಥವಾ ಚಾಲಕರಿಂದ ಯಾವುದೇ ಅಹಿತಕರ ಘಟನೆ ನಡೆಯದಂತೆ ತಡೆಯಲು ಸಿಸಿಟಿವಿ ಕಡ್ಡಾಯವಾಗಿದ್ದರೂ ಇಲ್ಲಿ ಸಂಪೂರ್ಣ ಉಲ್ಲಂಘನೆಯಾಗಿದೆ. ಶಿಕ್ಷಣ ಇಲಾಖೆಯ ಕಣ್ಣೆದುರೇ ನಡೆಯುತ್ತಿರುವ ಈ ದಂಧೆಯ ವಿರುದ್ಧ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಆಕ್ರೋಶ ವ್ಯಕ್ತವಾಗುತ್ತಿದೆ.

**ಜಿಪಿಎಸ್ ಮತ್ತು ಸಿಸಿಟಿವಿ ಇಲ್ಲದಿರುವುದು:** ಶಾಲಾ ವಾಹನಗಳು ಎಲ್ಲೆಲ್ಲಿವೆ ಎಂದು ಪತ್ತೆಹಚ್ಚಲು ಜಿಪಿಎಸ್ ಹಾಗೂ ವಾಹನದ ಒಳಗಿನ ಚಟುವಟಿಕೆಗಳ ಮೇಲೆ ನಿಗಾವಹಿಸಲು ಸಿಸಿಟಿವಿ ಕ್ಯಾಮೆರಾಗಳು ಅತ್ಯಗತ್ಯ. ಆದರೆ ಇಲ್ಲಿನ ಬಹುತೇಕ ವಾಹನಗಳಲ್ಲಿ ಈ ವ್ಯವಸ್ಥೆಯೇ ಇಲ್ಲ.

**ಮಹಿಳಾ ಅಟೆಂಡೆಂಟ್ ಕೊರತೆ:** ನಿಯಮಗಳ ಪ್ರಕಾರ ಶಾಲಾ ಬಸ್‌ಗಳಲ್ಲಿ ಕಡ್ಡಾಯವಾಗಿ ಮಹಿಳಾ ನಿರ್ವಾಹಕರನ್ನು ನೇಮಿಸಬೇಕಾಗಿದ್ದರೂ, ಇದನ್ನು ಎಲ್ಲಿಯೂ ಪಾಲಿಸುತ್ತಿಲ್ಲ.

**'ಉದಯ ವಾಹಿನಿ' ಪ್ರಕಟಿಸಿದ ಸರಣಿ ತನಿಖಾ ವರದಿ**

**ಈಗಾಗಲೇ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಅಧ್ಯಕ್ಷರಾದ ಶಶಿಧರ್ ಕೋಸಂಬಿ ಅವರು ಮಾನ್ಯ ಸಾರಿಗೆ ಸಚಿವರಿಗೆ ಅಧಿಕೃತ ಪತ್ರ ಬರೆದಿದ್ದಾರೆ. ಇಡೀ ಯಾದಗಿರಿ ಜಿಲ್ಲೆಯ ಶಾಲಾ ವಾಹನಗಳ ಸುರಕ್ಷತೆಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿರುವ ಆಯೋಗ, ನಿಯಮ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿದೆ.**

**ಸಾರಿಗೆ ಇಲಾಖೆಯ ಅಧಿಕಾರಿಗಳು 'ಹಣ ಗಳಿಕೆಗಾಗಿ' ಇಂತಹ ನಿಯಮಬಾಹಿರ ವಾಹನಗಳನ್ನು ಕಣ್ಣುಮುಚ್ಚಿ ನಡೆಸಿ, ಮಕ್ಕಳ ಸುರಕ್ಷತೆ ಕುರಿತು ಅಸಡ್ಡೆ ವಹಿಸಿರುವುದು ಅವರ ಜವಾಬ್ದಾರಿಗೆ ಒಳಪಡುತ್ತದೆ. ಯಾವ ಶಾಲಾ ಬಸ್‌ಗಳಿಗೆ ಸುರಕ್ಷತೆಯ ಯೋಗ್ಯತೆ ಇಲ್ಲವೋ ಅಂತಹ ವಾಹನಗಳನ್ನು ತಕ್ಷಣವೇ ಸೀಜ್ ಮಾಡಬೇಕು.**
-ಆಯೋಗದ ಆಗ್ರಹ

ಕುರಿತುಂಬಿದಂತೆ ಮಕ್ಕಳ ಸಾಗಾಟ: ನಿಗದಿಪಡಿಸಿದ ಸೀಟು ಸಾಮರ್ಥ್ಯಕ್ಕಿಂತ ಅಧಿಕ ಸಂಖ್ಯೆಯಲ್ಲಿ ಮಕ್ಕಳನ್ನು ಆಟೋ ಮತ್ತು ವ್ಯಾನ್‌ಗಳಲ್ಲಿ ಕುರಿತುಂಬಿದಂತೆ ತೂರಿಸಿಕೊಂಡು ಕಾನೂನು ಬಾಹಿರವಾಗಿ ಸಂಚರಿಸಲಾಗುತ್ತಿದೆ.

ಇನ್ನಾದರೂ ಜಿಲ್ಲಾಡಳಿತ, ಸಾರಿಗೆ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ತಕ್ಷಣವೇ ಎಚ್ಚೆತ್ತುಕೊಂಡು ಜಿಪಿಎಸ್, ಸಿಸಿಟಿವಿ ಇಲ್ಲದ ಮತ್ತು ನಿಯಮ ಉಲ್ಲಂಘಿಸುವ ಶಾಲಾ ವಾಹನಗಳ ಪರವಾನಗಿಯನ್ನು ರದ್ದುಗೊಳಿಸಬೇಕು. ನಿಯಮ ಬಾಹಿರವಾಗಿ ನಡೆಯುತ್ತಿರುವ ಇಂತಹ ಸಂಸ್ಥೆಗಳ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳದಿದ್ದರೆ.

ಮುಂಬರುವ ದಿನಗಳಲ್ಲಿ ಪೋಷಕರು ಹಾಗೂ ಪ್ರಗತಿಪರ ಸಂಘಟನೆಗಳ ನೇತೃತ್ವದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳುವುದು ಅನಿವಾರ್ಯವಾಗುತ್ತದೆ ಎಂದು ಸ್ಥಳೀಯ ಮುಖಂಡರು ಎಚ್ಚರಿಸಿದ್ದಾರೆ.

**ಸಾರಿಗೆ ಇಲಾಖೆಯ ಅಸಡ್ಡೆಗೆ ಆಯೋಗದ ಆಕ್ರೋಶ**

**ಇತ್ತೀಚೆಗೆ ಬೀದರ್ ಹಾಗೂ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಸಂಭವಿಸಿದ ಭೀಕರ ಅಪಘಾತಗಳಲ್ಲಿ ಮುಗ್ಧ ಮಕ್ಕಳು ಪ್ರಾಣ ಕಳೆದುಕೊಳ್ಳುತ್ತಿರುವುದನ್ನು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಗಂಭೀರವಾಗಿ ಪರಿಗಣಿಸಿದೆ.**


**ಸರ್ಕಾರ, ಸಾರಿಗೆ ಇಲಾಖೆ ಹಾಗೂ ಸುಪ್ರೀಂ ಕೋರ್ಟ್‌ನ ಕಟ್ಟುನಿಟ್ಟಿನ ಜಂಟಿ ಮಾರ್ಗಸೂಚಿಗಳು, ಮಕ್ಕಳ ಸುರಕ್ಷತಾ ನಿಯಮಾವಳಿಗಳು (2016 ಮತ್ತು 2023) ಹಾಗೂ ಮೋಟಾರು ವಾಹನ ಕಾಯ್ದೆ 1988ರ ನಿಯಮಗಳ ಪ್ರಕಾರ ಶಾಲಾ ವಾಹನಗಳಲ್ಲಿ ಕೆಳಗಿನ ಕ್ರಮಗಳು ಕಡ್ಡಾಯ. ಆದರೆ ಕೆಂಭಾವಿಯಲ್ಲಿ ಇವು ಸಂಪೂರ್ಣ ನಾಪತ್ತೆಯಾಗಿವೆ**

# ಕಲಿಕಾ ಸಾಮರ್ಥ್ಯವನ್ನು ಮೈಗೂಡಿಸಿಕೊಂಡರೆ ಮಕ್ಕಳಲ್ಲಿ ಜ್ಞಾನಾರ್ಜನೆ ಮಟ್ಟ ಹೆಚ್ಚುತ್ತದೆ

• **ಉದಯವಾಹಿನಿ,ಚಿಂಚೋಳಿ**

ಕಲಿಕಾ ಸಾಮರ್ಥ್ಯವನ್ನು ಮೈಗೂಡಿಸಿಕೊಂಡರೆ ಮಕ್ಕಳಲ್ಲಿ ಜ್ಞಾನಾರ್ಜನೆ ಮಟ್ಟ ಹೆಚ್ಚಾಗುವುದರಿಂದ ಅವರ ಆತ್ಮಸ್ಥೈರ್ಯ ಹೆಚ್ಚಾಗುತ್ತದೆ ಒಳ್ಳೆಯ ಅನುಭವದಿಂದಲೇ ಮನುಷ್ಯ ಯಶಸ್ಸುಯಾಗಲು ಸಾಧ್ಯವಾಗುತ್ತದೆ ಎಂದು ಬಿಜೆಪಿ ಅಲ್ಪಸಂಖ್ಯಾತರ ಘಟಕದ ರಾಜ್ಯ ಉಪಾಧ್ಯಕ್ಷ ಕೆ.ಎಂ.ಬಾರಿ ಹೇಳಿದರು.

ಪಟ್ಟಣದ ಚಂದಾಪೂರದ ಶಾರದಾ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಕಲಿಕಾ ಚೇತನ ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡಿದ ಅವರು,ಇಂದಿನ ಮಕ್ಕಳೇ ನಾಳಿನ ಪ್ರಜೆಗಳು ಹಾಗಾಗಿ ಮಕ್ಕಳು ನಿರಂತರವಾಗಿ ಅಧ್ಯಯನ ಮಾಡುವುದರಿಂದ ತಮ್ಮ ಜೀವನದಲ್ಲಿ ಯಶಸ್ಸನ್ನಗಳಿಸಬಹುದು ಎಂದರು.


ಉದಯವಾಹಿನಿ ಚಿತ್ರ

ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಭೀಮಶೇಟ್ಟಿ ಮುರುಡಾ ಮಾತನಾಡಿ ಮಕ್ಕಳಿಗೆ ಮೊಬೈಲ್ ದಿಂದ ದೂರವಿದ್ದು ವಿಧ್ಯಾಭ್ಯಾಸ ಕಡೆ ಹೆಚ್ಚಿನ ಗಮನ ಹರಿಸಬೇಕು,ಮಕ್ಕಳ ಕೌಶಲ್ಯಗಳನ್ನು ಎಳೆಯಾಗಿ ಹೊರ ತರುವ ಕೆಲಸ ಶಿಕ್ಷಕರಾಗಿದ್ದು ಅಂತ ಪ್ರತಿಭೆ ಮಕ್ಕಳನ್ನು ಗುರುತಿಸಿ ಅವರಿಗೆ ಒಳ್ಳೆಯ ಮಾರ್ಗದರ್ಶನ ನೀಡಿ ಅವರ ಕಲಿಕೆಯ ಸಾಮರ್ಥ್ಯವನ್ನು ಹೆಚ್ಚಾಗುವಂತೆ ಮಾಡಬೇಕು.

ಶಿಕ್ಷಕ ಎಂಬ ವೃತ್ತಿ ಅತ್ಯಂತ ಪವಿತ್ರವಾದ ವೃತ್ತಿಯಾಗಿದ್ದು ಶಿಕ್ಷಕರು ಪವಿತ್ರತೆಯಿಂದ ನಡೆಸಿಕೊಂಡು ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಕೊಡಬೇಕು,ಮೌಲ್ಯಯುವಾದ ಶಿಕ್ಷಣ ಕೊಡುವುದೇ ಶಿಕ್ಷಕರ ಮಹತ್ವದ ಪಾತ್ರ ಎಂದು ಹೇಳಿದರು.ಸ್ತ್ರೀಶಕ್ತಿ ಒಕ್ಕೂಟ ತಾಲ್ಲೂಕಾಧ್ಯಕ್ಷೆ ನರಸಮ್ಮ ಲಕ್ಷ್ಮಣ ಅವುಟೆ ಮಾತನಾಡಿ ಮಕ್ಕಳ ಜವಾಬ್ದಾರಿಯು ಪಾಲಕರ ಜೊತೆಗೆ ಶಿಕ್ಷಕರ ಅಷ್ಟೆ ಜವಾಬ್ದಾರಿಯಾಗಿದೆ,ಶಿಕ್ಷಕರು ಕೂಡ ಮಕ್ಕಳನ್ನು ಒಳ್ಳೆಯ ಗುಣಮಟ್ಟದ ಶಿಕ್ಷಣ ಕೊಡುವುದರ ಜೊತೆ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಸಂಸ್ಕೃತಿ ಜೊತೆಗೆ ಒಳ್ಳೆಯ ಕಲಿಕಾ ಸಾಮರ್ಥ್ಯವನ್ನು ಬೆಳೆಸುವಲ್ಲಿ ಶಿಕ್ಷಕರ ಪಾತ್ರ ಬಹುದೊಡ್ಡದಾಗಿದೆ ಎಂದು ಹೇಳಿದರು.

ಶಾಲೆಯ ಆಡಳಿತ ಮಂಡಳಿ ಶಿಕ್ಷಕಿ ಸುಷ್ಮಾ ಎಸ್ ,ಅಪರಂಜಿ,ರೋಹಿಣಿ,ಆರ್,ಶಿಕ್ಷಕ ಸಿದ್ದಿಕ್,ರಾಜೇಂದ್ರ ಪ್ರಸಾದ್ ಹಾಗೂ ಶಾಲೆಯ ಸಿಬ್ಬಂದಿ ಹಾಗೂ ಮುದ್ದು ಮಕ್ಕಳು ಇದ್ದರು.

# ಆರೋಗ್ಯ ಸಚಿವರಿಗೆ ಅಶೋಕ್ ರೈ ಮನವಿ

• **ಉದಯವಾಹಿನಿ, ಪುತ್ತೂರು:**

ಪುತ್ತೂರಿನಲ್ಲಿ ಆಯುರ್ವೇದ ಮೆಡಿಕಲ್ ಕಾಲೇಜಿಗೆ ಮಂಜೂರಾತಿ ನೀಡಿ ಅಗತ್ಯ ಮೂಲಸೌಕರ್ಯ ಮಾನವ ಸಂಪನ್ಮೂಲ ಒದಗಿಸಿಕೊಡುವಂತೆ ರಾಜ್ಯ ಆರೋಗ್ಯ ಸಚಿವ ಯು ಟಿ ಖಾದರ್ ಅವರಿಗೆ ಪುತ್ತೂರು ಶಾಸಕ ಅಶೋಕ್ ರೈ ಮನವಿ ಮಾಡಿದ್ದಾರೆ.


ಉದಯವಾಹಿನಿ ಚಿತ್ರ

ಬೆಂಗಳೂರಿನಲ್ಲಿ ಸಚಿವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ ಶಾಸಕರು ಪುತ್ತೂರು ತಾಲ್ಲೂಕಿನ ಬನ್ನೂರು ಗ್ರಾಮದಲ್ಲಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು 100 ಹಾಸಿಗೆಗಳ ಆಸ್ಪತ್ರೆ ನಿರ್ಮಾಣ ಮಾಡುವ ಬಗ್ಗೆ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾಪವನ್ನು ಸಲ್ಲಿಸಲಾಗಿದೆ.

ಗ್ರಾಮದ ಕುಂಟ್ಯಾನ ಎಂಬಲ್ಲಿ ಲಭ್ಯವಿರುವ ಸರ್ಕಾರಿ ಜಮೀನಿನಲ್ಲಿ 5.00 ಎಕರೆ ಜಮೀನನ್ನು ಆಯುಷ್ ಆಸ್ಪತ್ರೆ ನಿರ್ಮಾಣ ಮಾಡುವ ಉದ್ದೇಶದಿಂದ ದಕ ಜಿಲ್ಲಾ ಆಯುಷ್ ಇಲಾಖೆ ಹೆಸರಲ್ಲಿ ಕಾಯ್ದಿರಿಸಲು ಸೂಚಿಸಲಾಗಿದೆ.

# ನಾಡದೋಣಿ ಮುಗುಚಿ ಅವಘಡ: ಏಳು ಜನ ಮೀನುಗಾರರು ಸುರಕ್ಷಿತ

• **ಉದಯವಾಹಿನಿ, ಹೆಜಮಾಡಿ:**

ಮಲ್ಪೆಯಿಂದ ಮೀನುಗಾರಿಕೆಗೆ ತೆರಳಿದ್ದ ನಾಡದೋಣಿಯೊಂದು ಸಮುದ್ರದ ಅಲೆಗಳ ಸೆಳೆತಕ್ಕೆ ಸಿಲುಕಿ ಮುಗುಚಿ ಬಿದ್ದ ಘಟನೆ ಇಂದು (ದಿನಾಂಕ: 17/07/2026) ಬೆಳಿಗ್ಗೆ ಸುಮಾರು 10:00 ಗಂಟೆಗೆ ಹೆಜಮಾಡಿ ಕರಾವಳಿ ಭದ್ರತಾ ಪೊಲೀಸ್ (ಸಿ.ಎಸ್.ಪಿ) ಠಾಣಾ ಸರಹದ್ದಿನ ಇಡ್ಯಾ ಗ್ರಾಮದ ದೊಡ್ಡಕೊಪ್ಪ ಪರಿಸರದಲ್ಲಿ ಸಂಭವಿಸಿದೆ. ದೋಣಿಯಲ್ಲಿದ್ದ ಏಳು ಜನ ಮೀನುಗಾರರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದ್ದು, ಯಾವುದೇ ಜೀವಹಾನಿ ಸಂಭವಿಸಿಲ್ಲ. ಅವಘಡಕ್ಕೀಡಾದ ನಾಡದೋಣಿಯನ್ನು ಮಲ್ಪೆಯ ಎಂ. ರಾಜು ಎಂಬವರ ಮಾಲಿಕತ್ವದ ''ಶ್ರೀ ದುರ್ಗಾ ಕೃಪಾ'' ಎಂದು ಗುರುತಿಸಲಾಗಿದೆ.

ವಿವರಗಳು: ಇಂದು ಬೆಳಿಗ್ಗೆ ಎಂದಿನಂತೆ ಮೀನುಗಾರಿಕೆಯಲ್ಲಿ ನಿರತವಾಗಿದ್ದಾಗ ದೊಡ್ಡಕೊಪ್ಪ ಕಡಲ ತೀರದ ಸಮೀಪ ದೋಣಿಯು ಭೀಕರ ಅಲೆಗಳ ಸೆಳೆತಕ್ಕೆ ಸಿಲುಕಿ ನಿಯಂತ್ರಣ ತಪ್ಪಿ ಮಗುಚಿ ಬಿದ್ದಿದೆ. ಇದರಲ್ಲಿದ್ದ ಆಂಧ್ರಪ್ರದೇಶ ಮೂಲದ ಮೀನುಗಾರರಾದ ನಾಗರಾಜ (32), ಬಾಲರಾಜ್ (32), ಅಣ್ಣಾವರಂ (30), ಸಿ.ಹೆಚ್. ತಾಜು (26), ಸಿ.ಹೆಚ್. ಜ್ಯೋತಿ (24), ತಾತಾಜಿ (45) ಮತ್ತು ಪೆಂತಯ್ಯ (55) ಅವರು ದೋಣಿ ಸಮೇತ


ಉದಯವಾಹಿನಿ ಚಿತ್ರ


**ಘಟನಾ ಸ್ಥಳದಲ್ಲಿದ್ದ ಹೆಜಮಾಡಿ ಸಿ.ಎಸ್.ಪಿ ಠಾಣೆಯ ಎ.ಎಸ್.ಐ ಪ್ರತಿಭಾ, ಸಿ.ಹೆಚ್.ಸಿ 390 ಸಚಿನ್ ಹಾಗೂ ಕೆ.ಎನ್.ಡಿ ತುಕಡಿಯ ಶರತ್, ನಿಖಿಲ್, ಚಿರಂಜೀವಿ ಮತ್ತು ಸ್ಥಳೀಯ ಮೀನುಗಾರರು ಜಂಟಿಯಾಗಿ ಕಾರ್ಯಾಚರಣೆ ನಡೆಸಿ, ಎಲ್ಲರನ್ನೂ ಸುರಕ್ಷಿತವಾಗಿ ರಕ್ಷಿಸಿದ್ದಾರೆ.**

ಸಮುದ್ರದ ನೀರಿಗೆ ಬಿದ್ದಿದ್ದಾರೆ. ತಕ್ಷಣವೇ ಕಾರ್ಯಪ್ರವೃತ್ತರಾದ ಮೀನುಗಾರರು ಈಜಿ ದಡ ಸೇರುವಲ್ಲಿ ಯಶಸ್ವಿಯಾಗಿದ್ದಾರೆ. ಸಮುದ್ರದಲ್ಲಿ ಮಗುಚಿ ಬಿದ್ದಿದ್ದ ''ಶ್ರೀ ದುರ್ಗಾ ಕೃಪಾ'' ದೋಣಿಯನ್ನು ಬಳಿಕ ಬೇರೆ ದೋಣಿಯ ಸಹಾಯದೊಂದಿಗೆ ಕುಳಾಯಿ ಜೆಟ್ಟಿಗೆ ತರಲಾಗಿದ್ದು, ಅಲ್ಲಿಂದ ಸುರಕ್ಷಿತವಾಗಿ ಮೇಲಕ್ಕೆ ಎಳೆದು ಇಡಲಾಗಿದೆ. ಕರಾವಳಿ ಪೊಲೀಸ್ ಹಾಗೂ ಸ್ಥಳೀಯರ ಸಮಯಪ್ರಜ್ಞೆಯಿಂದಾಗಿ ದೊಡ್ಡದೊಂದು ದುರಂತ ತಪ್ಪಿದಂತಾಗಿದೆ.

# ಬೀದರ ಜಿಲ್ಲೆಯನ್ನು ಬರಪೀಡಿತವೆಂದು ಘೋಷಿಸಲು ದಲಿತ ಸಂಘರ್ಷ ಸಮಿತಿ ಒತ್ತಾಯ

• **ಉದಯವಾಹಿನಿ, ಬೀದರ:**

ಜಿಲ್ಲೆಯಾದ್ಯಂತ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ತಕ್ಷಣವೇ ಬೀದರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಘೋಷಿಸಿ ರೈತರ ಹಿತ ಕಾಪಾಡುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ವತಿಯಿಂದ ಇಂದು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಮನವಿ ಸಲ್ಲಿಸಿದ್ದಾರೆ. ಈ ಬಾರಿ ಸಂಪೂರ್ಣ ಮುಂಗಾರು ಮಳೆ ವಿಫಲವಾಗಿರುವುದರಿಂದ ರೈತರು ಈಗಾಗಲೇ ಹೊಲಗಳಲ್ಲಿ ಬಿತ್ತನೆ ಮಾಡಿರುವ ಬೆಳೆಗಳು ಮಳೆಯ ಕೊರತೆಯಿಂದ ಒಣಗಿ ನಾಶವಾಗುತ್ತಿವೆ,ಬೀಜ, ಗೊಬ್ಬರ ಹಾಗೂ ಕೃಷಿ ಕಾರ್ಯಗಳಿಗೆ ಲಕ್ಷಾಂತರ ರೂಪಾಯಿ ವೆಚ್ಚ ಮಾಡಿರುವ ರೈತರು ಈಗ ಸಾಲದ ಹೊರೆ ಹೊತ್ತು ಸಂಕಷ್ಟದಲ್ಲಿದ್ದು, ಅನೇಕ ರೈತರು ಆತ್ಮಹತ್ಯೆಯಂತಹ ದುಡುಕಿನ ನಿರ್ಧಾರಕ್ಕೆ ಮುಂದಾಗುವ ಆತಂಕ ಎದುರಾಗಿದೆ. ಆದ್ದರಿಂದ ರಾಜ್ಯ ಸರ್ಕಾರ ತಕ್ಷಣವೇ ಪರಿಸ್ಥಿತಿಯ ಗಂಭೀರತೆಯನ್ನು ಅರಿತು ಬೀದರ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಘೋಷಿಸಿ, ಜಿಲ್ಲೆಯ ಎಲ್ಲಾ ರೈತರ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು, ಅದೇ ರೀತಿ, 2025-26ನೇ ಸಾಲಿನಲ್ಲಿ ಸಹ ಬರಗಾಲ ಘೋಷಣೆಯಾದ ಸಂದರ್ಭದಲ್ಲಿ ಸರ್ಕಾರದಿಂದ ಬೆಳೆ ವಿಮೆ ಹಾಗೂ ಬರಪೀಡಿತ ಅನುದಾನ ಮಂಜೂರಾಗಿದ್ದರೂ, ತಾಂತ್ರಿಕ ದೋಷಗಳ ಕಾರಣದಿಂದ ಜಿಲ್ಲೆಯ ಹಲವಾರು ರೈತರಿಗೆ ಬೆಳೆ ವಿಮೆ ಹಾಗೂ ಬರಪೀಡಿತ ಪರಿಹಾರದ ಹಣ ಇನ್ನೂ ಜಮೆಯಾಗಿಲ್ಲ. ಈ ಹಿನ್ನೆಲೆಯಲ್ಲಿ ಬಾಕಿ ಉಳಿದಿರುವ ರೈತರಿಗೆ ಕೂಡಲೇ ಬೆಳೆ ವಿಮೆ ಹಾಗೂ ಬರಪೀಡಿತ ಪರಿಹಾರದ ಮೊತ್ತವನ್ನು ಬಿಡುಗಡೆ ಮಾಡಿ ರೈತರ ನೆರವಿಗೆ ಸರ್ಕಾರ ಬರಬೇಕು.


ಉದಯವಾಹಿನಿ ಚಿತ್ರ

**ಕೃಷಿಯನ್ನೇ ನಂಬಿಕೊಂಡಿರುವ ರೈತ ಸಮುದಾಯ ಸಂಕಷ್ಟದಲ್ಲಿದ್ದು, ಸರ್ಕಾರ ಯಾವುದೇ ವಿಳಂಬ ಮಾಡದೆ ರೈತರ ಹಿತದೃಷ್ಟಿಯಿಂದ ಅಗತ್ಯ ಕ್ರಮಗಳನ್ನು ಕೈಗೊಂಡು ಆರ್ಥಿಕ ನೆರವು ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.**
-ಧನರಾಜ ಮುಸ್ತಾಪೂರ

# ಬೇಜವಾಬ್ದಾರಿಯಿಂದ ಕೆಲಸ ಮಾಡುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ : ಡಾ. ಹೆಚ್ ಕೃಷ್ಣ

• **ಉದಯವಾಹಿನಿ, ಬೀದರ,**

ಈ ಹಿಂದೆ ಮಾಡಿದ ತಪ್ಪುಗಳನ್ನು ತಿದ್ದುಕೊಂಡು, ಜವಾಬ್ದಾರಿ ಅರಿತು ಒಂದು ತಿಂಗಳಲ್ಲಿ ಸಮರ್ಪಕವಾಗಿ ಕೆಲಸ ಮಾಡದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗ ಅಧ್ಯಕ್ಷ ಡಾ. ಹೆಚ್ ಕೃಷ್ಣ ಎಚ್ಚರಿಕೆ ನೀಡಿದರು. ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೆ.ಎಫ್.ಸಿ.ಎಸ್.ಸಿ ಸಗಟು ಮಳಿಗೆಗೆ ಭೇಟಿ ನೀಡಿದಾಗ ನಿಯಮಾನುಸಾರ ವಿತರಿಸಬೇಕಾದ ಅಕ್ಕಿಯನ್ನು ಹಂಚದೆ, ಸುಮಾರು 565 ಕ್ವಿಂಟಲ್‌ನಷ್ಟು


ಉದಯವಾಹಿನಿ ಚಿತ್ರ

ಹೆಚ್ಚುವರಿ ಅಕ್ಕಿ ದಾಸ್ತಾನನ್ನು ವಿತರಿಸದೆ ಉಳಿಸಿಕೊಂಡಿದ್ದು ಕಂಡುಬಂದಿದೆ. ಇನ್ನು ಜೋಳದ ದಾಸ್ತಾನು ಪರಿಕ್ಷಿಸಿದಾಗ ಕಡತದಲ್ಲಿರುವುದಕ್ಕಿಂತ 30 ಕ್ವಿಂಟಲ್ ಕಡಿಮೆ ಇರುವುದು ಕಂಡುಬಂದಿದೆ. ಈ ಕೊರತೆಯನ್ನು ದಾಖಲೆ ಸಮೇತ ದೃಢವಾಗಿದೆ.

ನ್ಯಾಯಬೆಲೆ ಮಳಿಗೆಗಳನ್ನು ಪರಿಶೀಲಿಸಿದ್ದಾಗ ಅಲ್ಲಿಯೂ ಸಾಕಷ್ಟು ಅವ್ಯವಸ್ಥೆ ಕಂಡುಬಂದಿದೆ ತಕ್ಷಣವೇ ಲೋಪದೋಷಗಳನ್ನು ಸರಿಪಡಿಸಿಕೊಳ್ಳಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ನೌಬಾದ ಮತ್ತು ಕರಡಿಮಾಲ್ ನಲ್ಲಿರುವ ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳಿಗೆ ಹಾಗೂ ನೌಬಾದನ ಶಾಲೆಯೊಂದಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಆಹಾರ, ಮೊಟ್ಟೆ ಹಾಗೂ ಬಾಳೆ ಹಣ್ಣು ವಿತರಣೆ ಮಾಡದಿರುವುದು ಕಂಡುಬಂದಿದೆ ಅಧಿಕಾರಿಗಳ ಈ ವರ್ತನೆ ಸರಿಯಲ್ಲ. ಅದೇ ರೀತಿ ನಗರದ ವಿವಿಧ ಪೆಟ್ರೋಲ್ ಪಂಪ್‌ಗಳಿಗೆ ಭೇಟಿ ನೀಡಿದ ಸಮಯದಲ್ಲಿ ಮೂಲಭೂತ ಸೌಕರ್ಯ ಇಲ್ಲದಿರುವುದು ಗಮನಕ್ಕೆ ಬಂದಿದೆ. ಬ್ರಿಮ್ಸ್ ಆಸ್ಪತ್ರೆಯಲ್ಲೂ ಸಹ ಸಾಕಷ್ಟು ಸಮಸ್ಯೆ ಕಂಡುಬಂದಿವೆ.

# ಸಮರ್ಪಕ ಕುಡಿಯುವ ನೀರು ಪೂರೈಕೆಗೆ: ಸಿಇಒ ಸೂಚನೆ

• **ಉದಯವಾಹಿನಿ, ಹೊಸಪೇಟೆ.**

ಜಿಲ್ಲೆಯ ಗ್ರಾಮೀಣ ಭಾಗಗಳ ಪ್ರತಿಯೊಂದು ಮನೆಗೂ ಕಡ್ಡಾಯವಾಗಿ ಶುದ್ಧ ಕುಡಿಯುವ ನೀರು ಹಾಗೂ ಸಮರ್ಪಕ ನೈರ್ಮಲ್ಯ ವ್ಯವಸ್ಥೆಯನ್ನು ತಲುಪಿಸಲು ಎಲ್ಲಾ ಇಲಾಖೆಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ನೋಂಗ್ಜಾಯ ಮಹಮದ್ ಅಲಿ ಅಕ್ರಂ ಷಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಥಳೀಯ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ನಡೆದ ಮಾಸಿಕ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಹಮ್ಮಿಕೊಳ್ಳಲಾಗಿರುವ ಜಲಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ ಯೋಜನೆಗಳ ಕಾಮಗಾರಿ ಇನ್ನೂ ಕೆಲವೆಡೆ ವಿವಿಧ ತಾಂತ್ರಿಕ ಕಾರಣಗಳಿಂದ ಪೂರ್ಣಗೊಂಡಿಲ್ಲ. ಕಾಮಗಾರಿ ವಿಳಂಬಕ್ಕೆ ಕಾರಣ ಸಮಸ್ಯೆಗಳ ಸೂಕ್ತ ಪರಿಹಾರ ಕಂಡುಕೊಂಡು ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ, ಶುದ್ಧ ಶಾಶ್ವತ ಕುಡಿಯುವ ನೀರು ಪೂರೈಸಬೇಕು.


ಉದಯವಾಹಿನಿ ಚಿತ್ರ

ಯಾವುದೇ ಕಾರಣಕ್ಕೂ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗಬಾರದು.

ಅಂತರ್ಜಲ ವೃದ್ಧಿ, ಜಲಮೂಲಗಳ ಸಂರಕ್ಷಣೆ ಹಾಗೂ ನೈರ್ಮಲ್ಯ ನಿರ್ವಹಣೆಗೆ ಮೊದಲ ಆದ್ಯತೆ ನೀಡಬೇಕು. ನಿಗದಿಪಡಿತ ಅವಧಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಜಿಲ್ಲೆಯಲ್ಲಿ ಈ ಬಾರಿ ತೀವ್ರ ಮಳೆ ಅಭಾವದಿಂದ ಅಂತರ್ಜಲ ಮಟ್ಟ ಕುಸಿಯುತ್ತಿದೆ. ಈಗಾಗಲೇ ಜಿಲ್ಲೆಯ 36 ಗ್ರಾಮಗಳನ್ನು ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳೆಂದು ಗುರಿತಿಸಲಾಗಿದ್ದು, ಇದಕ್ಕಾಗಿ 46 ಖಾಸಗಿ ಕೊಳವೆ ಬಾವಿಗಳಿಂದ ನೀರು ಪೂರೈಕೆ ಮಾಡಲಾಗುತ್ತಿದೆ. ಇದೇ ರೀತಿ ಮುಂದುವರೆದಲ್ಲಿ ಜಿಲ್ಲಾದ್ಯಂತೆ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆ ಹೆಚ್ಚಿದೆ.

# 40ಕ್ಕೂ ಹೆಚ್ಚು ಮಕ್ಕಳಿಗೆ ವಿಚಿತ್ರ ಜ್ವರ ಕೈ-ಕಾಲು ನೋವಿನಿಂದ ವಿದ್ಯಾರ್ಥಿಗಳ ನರಳಾಟ

• **ಉದಯವಾಹಿನಿ, ಧಾರವಾಡ:**

ಅಳ್ನಾವರದ ಖಾಸಗಿ ವಸತಿ ಶಾಲೆಯಲ್ಲಿ ಓದುತ್ತಿರುವ ಸುಮಾರು 40ಕ್ಕೂ ಹೆಚ್ಚು ಮಕ್ಕಳಲ್ಲಿ ವಿಚಿತ್ರ ಜ್ವರ ಕಾಣಿಸಿಕೊಂಡಿದ್ದು, ಜ್ವರದ ಜೊತೆಗೆ ಕೈ-ಕಾಲು ನೋವು ಹಾಗೂ ನರಗಳು ಜಗ್ಗಿದಂತಾಗುತ್ತಿರುವ ಲಕ್ಷಣಗಳಿಂದ ಮಕ್ಕಳು ತೀವ್ರವಾಗಿ ಬಳಲುತ್ತಿದ್ದಾರೆ. ಅಳ್ನಾವರದ ಖಾಸಗಿ ವಸತಿ ಶಾಲೆ ಹಾಗೂ ಕಸ್ತೂರಬಾ ವಸತಿ ನಿಲಯದ ಮಕ್ಕಳಲ್ಲೇ ಈ ಲಕ್ಷಣಗಳು ಕಂಡುಬಂದಿವೆ. ಕಳೆದ ಎರಡು ದಿನಗಳಿಂದ ಜ್ವರ ಕಾಣಿಸಿಕೊಂಡಿದ್ದು, ಕೈ-ಕಾಲು ನೋವಿನಿಂದ ಕೆಲ ಮಕ್ಕಳು ನರಳಾಡುತ್ತಿದ್ದಾರೆ.

ಅಸ್ವಸ್ಥಗೊಂಡ ಮಕ್ಕಳಲ್ಲಿ 8 ಮಂದಿಯನ್ನು ಧಾರವಾಡ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಉಳಿದ ಮಕ್ಕಳಿಗೆ ಅಳ್ನಾವರ, ಹಳಿಯಾಳ ಸರ್ಕಾರಿ ಆಸ್ಪತ್ರೆಗಳು ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಮುಂದುವರಿದಿದೆ.

ಮಕ್ಕಳಲ್ಲಿ ಕಂಡುಬಂದಿರುವ ಲಕ್ಷಣಗಳು ಇನ್ಫ್ಲುಯೆಂಜಾ ಅಥವಾ ವೈರಲ್ ಮಯೋಸೈಟಿಸ್ ಆಗಿರಬಹುದೆಂದು ವೈದ್ಯರು ಶಂಕಿಸಿದ್ದಾರೆ. ಜ್ವರದ ವೇಳೆ ಕೈ-ಕಾಲು ಮುಟ್ಟಿದರೂ ತೀವ್ರ ನೋವು ಕಾಣಿಸುತ್ತಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಸದ್ಯ ಮಕ್ಕಳ ಆರೋಗ್ಯದ ಮೇಲೆ ನಿಗಾ ವಹಿಸಲಾಗಿದ್ದು, ಇದು ಯಾವ ಸೋಂಕು ಎಂಬುದನ್ನು ಪರೀಕ್ಷೆಗಳ ಮೂಲಕ ವೈದ್ಯರು ಪತ್ತೆಹಚ್ಚುವ ಕಾರ್ಯದಲ್ಲಿ ತೊಡಗಿದ್ದಾರೆ.

# ಶಾಲಾ ಶೌಚಾಲಯ ದುರಸ್ತಿಗೆ ಆದ್ಯತೆ ನೀಡಿ ಎಂ ಕಾರಜೋಳ ಸೂಚನೆ!

## ಶಾಲೆಗಳ ಶೈಕ್ಷಣಿಕ ವಾತಾವರಣ ಮತ್ತು ಮೂಲ ಸೌಕರ್ಯ ಸರಿಯಾಗಿರುವುದಂತೆ ನೋಡಿಕೊಳ್ಳುವುದು ಅವರ ಕರ್ತವ್ಯ

• **ಉದಯವಾಹಿನಿ, ಚಿತ್ರದುರ್ಗ:**

ಸರ್ಕಾರಿ ಶಾಲೆಗಳ ಶೌಚಾಲಯ ಹಾಗೂ ಕಟ್ಟಡಗಳ ಸಮರ್ಪಕ ನಿರ್ವಹಣೆ ಮಾಡದಿದ್ದರೆ ಕಠಿಣ ಕ್ರಮಕೈಗೊಳ್ಳಲಾಗುವುದು ಎಂದು ಸಂಸದ ಗೋವಿಂದ ಎಂ ಕಾರಜೋಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ (ದಿಶಾ) ಪ್ರಗತಿ

**1 : ಶಾಲೆಗಳ ಶೈಕ್ಷಣಿಕ ವಾತಾವರಣ**
**2 : ವರ್ಷಕ್ಕೆ ರೂ.10 ಸಾವಿರ**
**3 : ಬಾಡಿಗೆಗೆ ಪಡೆದು ಸರಬರಾಜು**

ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶಾಲೆಗಳಲ್ಲಿನ ಶೌಚಾಲಯಗಳ ನಿರ್ಮಾಣ, ದುರಸ್ತಿ ಹಾಗೂ ನಿರ್ವಹಣೆ ಕೆಲಸವನ್ನು ಆಣೆಕಟ್ಟು ನಿರ್ಮಿಸುವಷ್ಟೇ ವಿಳಂಬವಾಗಿ ಮಾಡುತ್ತಿರುವುದು ಸರಿಯಲ್ಲ.

ಕೇವಲ ಶೌಚಾಲಯ ಸರಿಪಡಿಸಲು ವರ್ಷಗಟ್ಟಲೆ ಕಾಯಬೇಕೇ ಎಂದು ಸಂಸದರು ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಶಾಲೆಗಳ ಶೈಕ್ಷಣಿಕ ವಾತಾವರಣ ಮತ್ತು ಮೂಲ ಸೌಕರ್ಯ ಸರಿಯಾಗಿರುವುದಂತೆ ನೋಡಿಕೊಳ್ಳುವುದು ಅವರ ಕರ್ತವ್ಯ ಎಂದರು. ಶಾಲಾ ಶೌಚಾಲಯಗಳ ಸ್ವಚ್ಛತೆ ಹಾಗೂ ನಿರ್ವಹಣೆಗೆ ಪ್ರತಿ


ಉದಯವಾಹಿನಿ ಚಿತ್ರ

ಶಾಲೆ ವರ್ಷಕ್ಕೆ ರೂ.10 ಸಾವಿರ ಶಾಲಾನುದಾನ ನಿರ್ವಹಣೆಗೆ ನೀಡಲಾಗುತ್ತಿದೆ. ಆದರೆ ಈ ಹಣವನ್ನು ಎಷ್ಟು ಶಾಲೆಗಳ ಮುಖ್ಯ ಶಿಕ್ಷಕರು ಸರಿಯಾಗಿ ಬಳಕೆ ಮಾಡಿದ್ದಾರೆ ಎಂಬುದುದ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳ ಸಂಪೂರ್ಣ ಮಾಹಿತಿ ಪಡೆದು ಪರಿಶೀಲಿಸಬೇಕು ಎಂದು ಸೂಚನೆ ನೀಡಿದರು.

**ಕುಡಿಯುವ ನೀರಿನ ಸಮಸ್ಯೆ ನಿರ್ಲಕ್ಷಿಸಿದರೆ ಶಿಸ್ತು ಕ್ರಮ:** ಕೇವಲ ಹವಾನಿಯಂತ್ರಿತ ಚೇಂಬರ್ಗಳಲ್ಲಿ ಕುಳಿತುಕೊಂಡರೆ ಜನರ ಸಮಸ್ಯೆಗಳು ಬಗೆಹರಿಯುವುದಿಲ್ಲ. ಅಧಿಕಾರಿಗಳು ಕಡ್ಡಾಯವಾಗಿ ವಾರ್ಡ್‌ಗಳು ಮತ್ತು ಹಳ್ಳಿಗಳಿಗೆ ಭೇಟಿ ನೀಡಿ, ಜನರ ಕುಡಿಯುವ ನೀರಿನ ಮತ್ತು ನೈರ್ಮಲ್ಯದ ಕಷ್ಟಗಳನ್ನು ಖುದ್ದಾಗಿ ಆಲಿಸಬೇಕು ಸಂಸದರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಚಿತ್ರದುರ್ಗ ನಗರದಲ್ಲಿ ನೀರಿನ ಸರಬರಾಜು ಸಮರ್ಪಕವಾಗಿ ಆಗುತ್ತಿಲ್ಲ. ನೀವು ಕೊನೆಯದಾಗಿ 3ನೇ ವಾರ್ಡ್‌ಗೆ ಯಾವಾಗ ಭೇಟಿ

**ಚಿತ್ರದುರ್ಗ ತಾಲ್ಲೂಕಿನ ಕೆಲವು ಭಾಗ ಹಾಗೂ ಹಿರಿಯೂರು ಮತ್ತು ಹೊಳಲ್ಕೆರೆ ತಾಲ್ಲೂಕುಗಳಲ್ಲಿ ಇಂದಿಗೂ ಕುಡಿಯುವ ನೀರಿನ ಸಮಸ್ಯೆ ಇದ್ದು, ಅದನ್ನು ಬಗೆಹರಿಸಲು ಪರ್ಯಾಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.**
-ಎಂ ಕಾರಜೋಳ

**ಯಾವುದೇ ಕಾರಣಕ್ಕೂ ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಬಾರದು. ದುರಸ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತಕ್ಷಣವೇ ಸರಿಪಡಿಸಬೇಕು ಎಂದು ತಾಕೀತು ಮಾಡಿದರು.**
-ಎಂ ಕಾರಜೋಳ

ನೀಡಿದ್ದೀರಿ ದಿನನಿತ್ಯ ಬೆಳಿಗ್ಗೆ ಬೇಗ ಎದ್ದು ವಾರ್ಡ್‌ಗಳಿಗೆ ಭೇಟಿ ನೀಡಿ ಕಸ ವಿಲೇವಾರಿ, ನೀರು ಸರಬರಾಜು ಮತ್ತು ನೈರ್ಮಲ್ಯದ ಸ್ಥಿತಿಗತಿಗಳ ಪರಿಶೀಲಿಸಬೇಕು ಎಂದು ನಗರಸಭೆ ಆಯುಕ್ತರನ್ನು ತರಾಟೆಗೆ ತೆಗೆದುಕೊಂಡರು.

ಹೊಳಲ್ಕೆರೆ ತಾಲ್ಲೂಕಿನ ದುಮ್ಮಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗಾಗಿ ಮಹಿಳೆಯರು ನಡೆಸಿದ 'ಖಾಲಿ ಕೊಡ ಪ್ರದರ್ಶನ' ಪ್ರತಿಭಟನೆ ಪ್ರಸ್ತಾಪಿಸಿದ ಸಂಸದರು, 'ಮಹಿಳೆಯರು ಕುಡಿಯುವ ನೀರಿಗಾಗಿ ಬೀದಿಗೆ ಬಂದು ಪ್ರತಿಭಟನೆ ನಡೆಸುತ್ತಿದ್ದರೂ ಯಾವೊಬ್ಬ ಅಧಿಕಾರಿಯೂ ಪರ್ಯಾಯ ವ್ಯವಸ್ಥೆ ಮಾಡಿಲ್ಲ.

**ನೀರಿನ ಸಮಸ್ಯೆ ಇರುವ ಪ್ರದೇಶಗಳಿಗೆ ತಾ.ಪಂ ಇಒ, ಆರ್ಡಬ್ಲ್ಯೂಎಸ್ ಎಇಇ ಹಾಗೂ ನೀರು ಸರಬರಾಜು ವಿಭಾಗದ ತಾಂತ್ರಿಕ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದ್ದು, ತೀವ್ರ ಸಮಸ್ಯೆ ಎದುರಾದ 49 ಜನವಸತಿ ಪ್ರದೇಶಗಳಲ್ಲಿ ಈಗಾಗಲೇ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ.**
-ಎಂ ಕಾರಜೋಳ

ಇಂತಹ ಬೇಜವಾಬ್ದಾರಿತನ ಸಹಿಸಲು ಸಾಧ್ಯವಿಲ್ಲ ಎಂದರು. ದುಮ್ಮಿ ಪಂಚಾಯಿತಿ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟ ಕುಸಿದಿದ್ದು, ಬೋರ್ವೆಲ್‌ಗಳಲ್ಲಿ ನೀರಿನ ಇಳುವರಿ ಕಡಿಮೆಯಾಗಿದೆ. ಖಾಸಗಿ ಬೋರ್ವೆಲ್‌ಗಳನ್ನು ಬಾಡಿಗೆಗೆ ಪಡೆದು ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಬರಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯ ಯಾವುದೇ ಭಾಗದಲ್ಲಿ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ತಾಲ್ಲೂಕು ಮಟ್ಟದಲ್ಲಿ ಅಧಿಕಾರಿಗಳ ಟಾಸ್ಕ್ ಫೋರ್ಸ್ ಸಭೆಗಳನ್ನು ನಡೆಸಿ ಕ್ರಿಯಾ ಯೋಜನೆ ರೂಪಿಸಬೇಕು ಎಂದು ತಿಳಿಸಿದ ಕಳೆದ ಕೆಲವು ವಾರಗಳಿಂದ ಮಳೆ ಕೊರತೆಯಾಗಿದ್ದರೂ, ಸಂಸದರ ಮಧ್ಯಸ್ಥಿಕೆಯಿಂದ ಕಳೆದ ಎರಡು ತಿಂಗಳಿನಿಂದ ಸ್ಥಗಿತಗೊಂಡಿದ್ದ ತುಂಗಭದ್ರಾ ನದಿ ನೀರು ಈಗ ಹರಿಯಲು ಆರಂಭಿಸಿದೆ. ಚಳ್ಳಕೆರೆ, ಮೊಳಕಾಲ್ಮೂರು ಮತ್ತು ಪಾವಗಡ ಭಾಗಗಳಿಗೆ ನೀರು ತಲುಪುತ್ತಿದ್ದು, ಸದ್ಯ ಅಲ್ಲಿ ಪರಿಸ್ಥಿತಿ ಸುಧಾರಿಸಿದೆ.

ಉದಯ ವಾಹಿನಿ
ಪ್ರಾದೇಶಿಕ
ಭಾನುವಾರ 19 ಜುಲೈ 2026


## ಮಿನಿ ನ್ಯೂಸ್

# ಜನ್ಮದಿನದ ಅಂಗವಾಗಿ ಶ್ರೀ ಪಂಚಮುಖಿ ಗಣಪತಿ ದರ್ಶನ ಪಡೆದ ಡಾ. ರವಿ ಸಿ.ಟಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಚಿಕ್ಕಮಗಳೂರು:**

59ನೇ ವರ್ಷದ ಜನ್ಮದಿನದ ಅಂಗವಾಗಿ ನಗರದ ವಾರ್ಡ್ ಸಂಖ್ಯೆ 1, 2 ಹಾಗೂ 3ರ ಬಿಜೆಪಿ ಪ್ರಮುಖರು ಚಿಕ್ಕಮಗಳೂರಿನ ಕಲ್ಯಾಣನಗರದಲ್ಲಿರುವ ಶ್ರೀ ಪಂಚಮುಖಿ ಗಣಪತಿ ದೇವಸ್ಥಾನದಲ್ಲಿ ಆಯೋಜಿಸಿದ್ದ ಪೂಜೆಯಲ್ಲಿ ವಿಧಾನ ಪರಿಷತ್ ಸದಸ್ಯ ಡಾ. ರವಿ ಸಿ.ಟಿ ಅವರು ಭಾಗವಹಿಸಿ, ಗಣನಾಥನ ದಿವ್ಯ ದರ್ಶನ ಪಡೆದರು.

ಈ ಸಂದರ್ಭದಲ್ಲಿ ರಾಜಕೀಯ ಸಂಬಂಧಗಳನ್ನು ಮೀರಿ ತಮ್ಮ ಬದುಕಿನ ಶಕ್ತಿಯಾಗಿ ಸದಾ ಜೊತೆಯಾಗಿ ನಿಂತಿರುವ ಪ್ರೀತಿಯ ಕಾರ್ಯಕರ್ತ ಬಂಧುಗಳು ಹಾಗೂ ಪಕ್ಷದ ಮುಖಂಡರೊಂದಿಗೆ ದೇವರ ದರ್ಶನ ಪಡೆದ ಅವರು, ದೇಶ, ರಾಜ್ಯ ಹಾಗೂ ಸಮಾಜದ ಒಳಿತಿಗಾಗಿ ಮತ್ತು ಎಲ್ಲರ ಬದುಕಿನಲ್ಲಿ ಸುಖ, ಶಾಂತಿ, ನೆಮ್ಮದಿ ನೆಲೆಸಲೆಂದು ಪ್ರಾರ್ಥಿಸಿದರು.

ಬಳಿಕ ಮಾತನಾಡಿದ ಡಾ. ರವಿ ಸಿ.ಟಿ ಅವರು, ನನ್ನ ಬದುಕಿನ ಪ್ರತಿಯೊಂದು ಹೆಜ್ಜೆಯಲ್ಲೂ ದೇವರ ಕೃಪೆ, ಕಾರ್ಯಕರ್ತರ ನಿಸ್ವಾರ್ಥ ಪ್ರೀತಿ ಜನರ ಆಶೀರ್ವಾದವೇ ನನಗೆ ಶಕ್ತಿ. ಬದುಕಿನ ಎಲ್ಲಾ ವಿಘ್ನಗಳನ್ನು ದೂರಮಾಡಿ ಸನ್ಮಾರ್ಗದಲ್ಲಿ ಮುನ್ನಡೆಸುವ ಶ್ರೀ ಪಂಚಮುಖಿ ಗಣಪತಿಯ ಅನುಗ್ರಹ ಎಲ್ಲರ ಮೇಲೂ ಸದಾ ಇರಲಿ ಎಂದು ಪ್ರಾರ್ಥಿಸಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಕೋಟೆ ರಂಗನಾಥ್, ರಾಜು ಮಣೇನಹಳ್ಳಿ, ಜಯಣ್ಣ ನೆಟೆಕೆರೆನಹಳ್ಳಿ, ಕನಕರಾಜ್ ಅರಸ್, ದೀಪಕ್ ದೊಡ್ಡಯ್ಯ, ದಂಟರಮಕ್ಕಿ ಮೋಹನ್ ಸೇರಿದಂತೆ ವಾರ್ಡ್‌ಗಳ ಬಿಜೆಪಿ ಪದಾಧಿಕಾರಿಗಳು, ಸದ್ಯಸರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ನಕಲಿ ಬಸ್ ಪಾಸ್ ವಿತರಣೆ : ಪ್ರಕರಣ ದಾಖಲು

• **ಉದಯವಾಹಿನಿ, ಹೊಸಪೇಟೆ.**

ವಿದ್ಯಾರ್ಥಿಗಳಿಗೆ ಕಾನೂನು ಬಾಹಿರವಾಗಿ ನಕಲಿ ಬಸ್ ಪಾಸ್ಗಳನ್ನು ಸೃಷ್ಟಿಸಿ ವಿತರಿಸುವ ಮೂಲಕ ಸಾರಿಗೆ ನಿಗಮಕ್ಕೆ ವಂಚಿಸುತ್ತಿದ್ದ ಖಾಸಗಿ ಸೈಬರ್ ಕೇಂದ್ರದ ಮಾಲೀಕನ ವಿರುದ್ಧ ಪ್ರಕರಣ ದಾಖಲಾಗಿದೆ.

ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ಪಟ್ಟಣದ ಸರ್ಕಾರಿ ಜೂನಿಯರ್ ಕಾಲೇಜು ರಸ್ತೆಯಲ್ಲಿನ ಸೈಬರ್ ಕೇಂದ್ರದಲ್ಲಿ ಕಾನೂನು ಬಾಹಿರವಾಗಿ ವಿಶ್ವ ಎಂಬ ವ್ಯಕ್ತಿ ವಿದ್ಯಾರ್ಥಿಗಳಿಂದ ರೂ. 200 ಪಡೆದು ನಕಲಿ ಬಸ್ ಪಾಸ್ಗಳನ್ನು ವಿತರಿಸಿರುವುದು ಎಂದು ತಿಳಿದು ಬಂದಿದೆ. ಈ ರೀತಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ವಿತರಿಸುವ ಮೂಲಕ, ಸರ್ಕಾರದ ಯೋಜನೆಯನ್ನು ದುರ್ಬಳಕೆ ಮಾಡಿಕೊಂಡು ನಿಗಮಕ್ಕೆ ಹಾಗೂ ಸರ್ಕಾರಕ್ಕೆ ಆರ್ಥಿಕ ವಂಚನೆ ಎಸಗಿರುವ ಕಾರಣ ಅವರ ವಿರುದ್ಧ ದೂರು ದಾಖಲಿಸಲಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ಅಧಿಕೃತ ವಿದ್ಯಾರ್ಥಿ ಬಸ್ ಪಾಸ್ಗಳನ್ನು ಕರ್ನಾಟಕ ಒನ್ ಅಥವಾ ಗ್ರಾಮ ಒನ್ ಕೇಂದ್ರಗಳ ಮೂಲಕವೇ ಆನ್ಲೈನ್ನಲ್ಲಿ ಅರ್ಜಿ ಸಲ್ಲಿಸಿ ಪಡೆದುಕೊಳ್ಳಬೇಕು. ಇತರೆ ಯಾವುದೇ ಖಾಸಗಿ ಕೇಂದ್ರಗಳಲ್ಲಿ ಪಾಸ್ ಪಡೆದರೆ ಅದು ಕಾನೂನು ಬಾಹಿರ ಮತ್ತು ಶಿಕ್ಷಾರ್ಹ ಅಪರಾಧ ಎಂದು ಕಲ್ಯಾಣ ಕರ್ನಾಟಕ ಸಾರಿಗೆ ನಿಗಮದ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ರಾಜೇಶ್ ಹುದ್ದಾರ್ ತಿಳಿಸಿದ್ದಾರೆ.

# ಹಾಲಸ್ವಾಮಿ ಮಠ ಭವನ ನಿರ್ಮಾಣಕ್ಕೆ ಶಾಸಕರಿಂದ ಭೂಮಿ ಪೂಜೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಹಗರಿಬೊಮ್ಮನಹಳ್ಳಿ.**

ಪಟ್ಟಣದ ಹಾಲಸ್ವಾಮಿ ಮಠದಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಶಾಸಕ ಕೆ ನೇಮಿರಾಜ್ ನಾಯ್ಕ ಪೂಜೆ ಸಲ್ಲಿಸಿದರು. ನಂತರ ಮಾತನಾಡಿ ಭವನ ನಿರ್ಮಾಣಕ್ಕೆ 25 ಲಕ್ಷ ರೂ. ಅನುದಾನ ನೀಡಲಾಗಿದೆ. ಸರ್ಕಾರ ಮಾಡದ ಕೆಲಸಗಳನ್ನು ಮಠಗಳು ಮಾಡುತ್ತಿವೆ. ಆದ್ದರಿಂದ ಮಠಗಳು ಅಭಿವೃದ್ಧಿ ಹೊಂದಬೇಕು.

ಮಠಗಳಲ್ಲಿ ಸಂಸ್ಕಾರ, ಸಂಸ್ಕೃತಿ ಕಲಿಸಲಾಗುತ್ತದೆ. ಕೆಲ ಮಠಗಳಲ್ಲಿ ಉಚಿತ ವಿವಾಹ ನಡೆಯುತ್ತಿವೆ. ಇದರಿಂದ ಪಾಲಕರ ಹೊರೆ ಕಡಿಮೆಯಾಗುತ್ತಿದೆ ಎಂದರು. ನಂದಿಪುರ ಮಠದ ಡಾ.ಮಹೇಶ್ವರ ಸ್ವಾಮೀಜಿ ಮಾತನಾಡಿ, ಮಠಗಳಿಗೆ ಯಾವುದೇ ಆದಾಯ ಇರುವುದಿಲ್ಲ. ಭಕ್ತರು ನೀಡುವ ಕಾಣಿಕೆಗಳಿಂದ ಮಠಗಳ ನಿರ್ವಹಣೆ ಮತ್ತು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವುದರೊಂದಿಗೆ ಅನ್ನ ದಾಸೋಹ ಮಾಡಲಾಗುತ್ತದೆ ಎಂದು ತಿಳಿಸಿದರು.

# ಅಣ್ಣಿಗೇರಿಯಲ್ಲಿ ಗೀಸರ್‌ಗೆ ಅಳವಡಿಸಿದ್ದ ಸಿಲಿಂಡರ್ ಸ್ಫೋಟ ಮೂವರಿಗೆ ಗಾಯ

• **ಉದಯವಾಹಿನಿ, ಧಾರವಾಡ:**

ಜಿಲ್ಲೆಯ ಅಣ್ಣಿಗೇರಿ ಪಟ್ಟಣದಲ್ಲಿ ಗ್ಯಾಸ್ ಗೀಸರ್‌ಗೆ ಅಳವಡಿಸಿದ್ದ ಸಿಲಿಂಡರ್ ಬ್ಲಾಸ್ಟ್ ಆಗಿ ಮೂವರು ಗಾಯಗೊಂಡಿದ್ದಾರೆ.ಸಾಯಿರಾಬಾನು (54), ಇವರ ಮಕ್ಕಳಾದ ಅಬ್ಬಾಸ್ ಅಲಿ (29) ಮತ್ತು ಹಸನ್ (26) ಸಿಲಿಂಡರ್ ಸ್ಫೋಟದಿಂದ ಗಾಯಗೊಂಡವರು. ಇಂದು (ಜು.18) ಮುಂಜಾನೆ ಗ್ಯಾಸ್ ಸೋರಿಕೆಯಾದ ವಾಸನೆ ಬರುತ್ತಿತ್ತು. ಇದನ್ನು ಗಮನಿಸಿದ್ದ ಮನೆ ಮಾಲೀಕ ಅಲ್ಲಾಬಕ್ಷ್, ಬೇರೆ ಕಡೆ ಲೀಕ್ ಆಗುತ್ತಿರಬಹುದು ಎಂದು ನಮಾಜ್‌ಗೆ ಹೋಗಿದ್ದರು. ಅಷ್ಟರಲ್ಲಿ ಮನೆಯಲ್ಲಿದ್ದ ಒಬ್ಬ ಮಗ ಲೈಟ್ ಹಾಕಿದ್ದು, ತಕ್ಷಣ ಸಿಲಿಂಡರ್ ಬ್ಲಾಸ್ಟ್ ಆಗಿದೆ. ಮೂವರು ಗಾಯಾಳುಗಳಿಗೆ ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆಯಿಂದ ಮನೆಯಲ್ಲಿದ್ದ ಎಲ್ಲಾ ವಸ್ತುಗಳು ಚಲ್ಲಾಪಿಲ್ಲಿಯಾಗಿವೆ. ಸಿಲಿಂಡರ್ ಬ್ಲಾಸ್ಟ್ ಆದ ಹಿನ್ನೆಲೆ ಮನೆಯ ಒಂದು ಗೋಡೆ ಕೂಡಾ ಒಡೆದು ಹೋಗಿದೆ. ಸ್ಥಳಕ್ಕೆ ಅಣ್ಣಿಗೇರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.


ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಂಜೆ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ನಿಮ್ಮ ಜೀವನ ಸಂಗಾತಿಯು ಈ ಅಗತ್ಯದ ಕಾಲದಲ್ಲಿ ಅವರ ಕುಟುಂಬದ ಸದಸ್ಯರಿಗೆ ಹೋಲಿಸಿದರೆ ನಿಮ್ಮ ಕುಟುಂಬದ ಸದಸ್ಯರಿಗೆ ಕಡಿಮೆ ಕಾಳಜಿ ಮತ್ತು ಪ್ರಾಮುಖ್ಯತೆಯನ್ನು ನೀಡಬಹುದು. ಇಂದು ಜ್ಞಾನವುಳ್ಳ ವ್ಯಕ್ತಿಯನ್ನು ಭೇಟಿಯಾಗಿ, ನೀವು ನಿಮ್ಮ ಅನೇಕ ಸಮಸ್ಯೆಗಳ ಪರಿಹಾರವನ್ನು ಪಡೆಯುವಿರಿ.

**ವೃಷಭ** ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ.

**ಮಿಥುನ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ನೀವು ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ವಿವಾದಾತ್ಮಕ ವಿಷಯಗಳನ್ನು ತಪ್ಪಿಸಬೇಕು. ನಿಮ್ಮ ಕನಸುಗಳು ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಸೇರಿ ಹೋಗುತ್ತವೆ.

**ಕರ್ಕಾಟಕ** ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ನಿಮ್ಮ ಪ್ರೀತಿಪಾತ್ರರು ಬದ್ಧತೆಯನ್ನು ಬಯಸುತ್ತಾರೆ.

**ಸಿಂಹ** ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ಹೆಂಡತಿಯ ಜೊತೆ ಪ್ರವಾಸಕ್ಕೆ ಹೋಗಲು ಒಳ್ಳೆಯ ದಿನ. ಇದು ನಿಮ್ಮ ಮನಸ್ಥಿತಿಯನ್ನು ಬದಲಾಯಿಸುವುದಷ್ಟೇ ಅಲ್ಲದೇ ನಿಮ್ಮ ತಪ್ಪು ತಿಳುವಳಿಕೆಗಳನ್ನೂ ಹೋಗಲಾಡಿಸುತ್ತದೆ.

**ಕನ್ಯಾ** ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

**ತುಲಾ** ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳಿವೆ. ವಿದೇಶಿ ಸಂಪರ್ಕಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ಇಂದು ಹಣದ ನಷ್ಟವಾಗುವ ಸಾಧ್ಯತೆ ಇದೆ ಆದ್ದರಿಂದ ಇಂದು ಯೋಚಿಸಿ ಅರ್ಥಮಾಡಿಕೊಂಡು ನಡೆಯಿರಿ ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ.

**ವೃಶ್ಚಿಕ** ಎಲ್ಲರಿಗೂ ಸಹಾಯ ಮಾಡುವ ನಿಮ್ಮನ್ನು ದಣಿಸುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಯುವಕರು ಶಾಲಾ ಯೋಜನೆಗಳಲ್ಲಿ ಕೆಲವು ಸಲಹೆ ಪಡೆಯಬಹುದು.

**ಧನಸ್ಸು** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ತೀರಾ ಖರ್ಚು ಮಾಡುವ ಮತ್ತು ಮನರಂಜನೆಗೆ ತುಂಬಾ ಖರ್ಚ ಮಾಡುವ ನಿಮ್ಮ ಪ್ರವೃತ್ತಿಗೆ ಕಡಿವಾಣ ಹಾಕಿ. ಸಂಪರ್ಕಗಳು ಮತ್ತು ಚರ್ಚೆಗಳು ಚೆನ್ನಾಗಿ ನಡೆಯದಿದ್ದಲ್ಲಿ ? ನೀವು ನಿಮ್ಮ ಶಾಂತತೆ ಕಳೆದುಕೊಳ್ಳಬಹುದು .

**ಮಕರ** ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ನಿಮ್ಮ ಬಳಿ ಹೆಚ್ಚು ಹಣವಿಲ್ಲ ಎಂದು ಯೋಚಿಸಿದರೆ, ಇಂದು ಮನೆಯ ದೊಡ್ಡವರಿಂದ ಹಣವನ್ನು ಹಣವನ್ನು ಸಂಗ್ರಹಿಸುವ ಸಲಹೆ ತೆಗೆದುಕೊಳ್ಳಿ .

**ಕುಂಭ** ಇಂದು ನಿಮಗೆ ದೊರಕುವ ಹೊಸ ಹೂಡಿಕೆಯ ಅವಕಾಶಗಳನ್ನು ಅನ್ವೇಷಿಸಿ–ಆದರೆ ಈ ಯೋಜನೆಗಳ ಕಾರ್ಯಸಾಧ್ಯತೆಯನ್ನು ಅಧ್ಯಯನ ಮಾಡಿದ ನಂತರವೇ ನೀವು ಇದರಲ್ಲಿ ತೊಡಗಿಸಿಕೊಳ್ಳಬೇಕು. ನಿವಾಸದ ಬದಲಾವಣೆ ಹೆಚ್ಚು ಶ್ರೇಯಸ್ಕರವಾಗಿರುತ್ತದೆ. ಇಂದು ನಿಮ್ಮ ದೀರ್ಘಕಾಲದ ಜಗಳವನ್ನು ಪರಿಹರಿಸಿಕೊಳ್ಳಿ.

**ಮೀನ** ನೀವು ಇಂದು ಹಾಜರಾಗುವ ಒಂದು ಸಾಮಾಜಿಕ ಸಮಾರಂಭದಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ. ನಿಮ್ಮ ಪ್ರೀತಿಪಾತ್ರರು ನಿಮ್ಮ ಮಾತುಗಳನ್ನು ಅರ್ಥಮಾಡಿಕೊಳ್ಳುತ್ತಿಲ್ಲ ಎಂದು ಭಾವಿಸಿದರೆ, ನೀವು ಅವರೊಂದಿಗೆ ಸಮಯವನ್ನು ಕಳೆಯಿರಿ ನಿಮ್ಮ ಮಾತುಗಳನ್ನು ಸ್ಪಷ್ಟವಾಗಿ ಅವರ ಮುಂದೆ ಇಡಿ.

# ಬಡವರಿಗೆ ಸೇರಬೇಕಿದ್ದ ಪಡಿತರ ಅಕ್ಕಿ ರಾಗಿ ಅಕ್ರಮವಾಗಿ ಸಾಗಿಸುತ್ತಿದ್ದ 200 ಕ್ವಿಂಟಾಲ್ ವಶ

• **ಉದಯವಾಹಿನಿ ದಾವಣಗೆರೆ:**

ಬಡವರಿಗೆ ಸೇರಬೇಕಿದ್ದ ಪಡಿತರ ಅಕ್ಕಿ ರಾಗಿಗೆ ಕನ್ನ ಹಾಕಿದ ಘಟನೆ ಜಿಲ್ಲೆಯಲ್ಲಿ ಬೆಳಕಿಗೆ ಬಂದಿದೆ. ಪೊಲೀಸರು ದಾಳಿ ಮಾಡಿ 200 ಕ್ವಿಂಟಲ್ ಅಕ್ಕಿ, ರಾಗಿಯನ್ನು ವಶಕ್ಕೆ ಪಡೆದಿದ್ದಾರೆ.

ಅಕ್ರಮವಾಗಿ ಪಡಿತರ ಅಕ್ಕಿ, ರಾಗಿ ಸಾಗಿಸುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ವಿದ್ಯಾನಗರ ಪೊಲೀಸರು ದಾಳಿ ಮಾಡಿದ್ದಾರೆ. ಈ ದಾಳಿಯಲ್ಲಿ 200 ಕ್ವಿಂಟಲ್ ಅಕ್ಕಿ ರಾಗಿ ಮತ್ತು ಸಾಗಿಸುತ್ತಿದ್ದ ಲಾರಿಯನ್ನು ವಶಕ್ಕೆ ಪಡೆದಿದ್ದಾರೆ. ದಾವಣಗೆರೆ ನಗರದ ಶಾಮನೂರು ಬಳಿಯ ರಾಷ್ಟ್ರೀಯ ಹೆದ್ದಾರಿ ಬಳಿ ವಿದ್ಯಾನಗರ ಠಾಣೆಯ ಪಿಎಸ್ಐ ಸಚಿನ್ ಬಿರಾದರ್ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದೆ.

ಹರಿಹರದಿಂದ ಬೆಂಗಳೂರು ಕಡೆಗೆ ಹೊರಟಿದ್ದ ಲಾರಿ ಹರಿಹರದ ಮೂಲದ್ದಾಗಿದೆ. ವಶಕ್ಕೆ ಪಡೆದ ಲಾರಿಯನ್ನು ಪರಿಶೀಲಿಸಿದಾಗ ಅದರಲ್ಲಿ ಸುಮಾರು 200 ಕ್ವಿಂಟಲ್ ಅಕ್ಕಿ ಹಾಗೂ ರಾಗಿ ಪತ್ತೆಯಾಗಿದೆ. ಅಕ್ರಮವಾಗಿ ಅಕ್ಕಿ ರಾಗಿ ಸಂಗ್ರಹಿಸಿ ಲಾರಿ ಮೂಲಕ ಸಾಗಣೆ ಮಾಡಲಾಗಿತ್ತು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಲಾರಿ ಜೊತೆಗೆ ಚಾಲಕ ಜಬಿವುಲ್ಲಾ ಎಂಬುವರನ್ನ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಈ ಸಂಬಂಧ ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಉದಯವಾಹಿನಿ ಚಿತ್ರ

**ಗಂಗಾವತಿಯಲ್ಲಿ 35 ಟನ್ ಪಡಿತರ ಜಪ್ತಿ:** ಕಳೆದ ಮಾರ್ಚ್ ತಿಂಗಳಲ್ಲಿ ಅಕ್ರಮವಾಗಿ ಪಡಿತರ ಸಾಗಿಸುವ ಕುರಿತು ಗಂಗಾವತಿ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಆರೋಪದ ಮೇಲೆ ಇಲ್ಲಿನ ಆಹಾರ ಇಲಾಖೆಯ ನಿರೀಕ್ಷಕ ಶೇಖರಪ್ಪ ನೀಡಿದ ದೂರಿನ ಮೇರೆಗೆ ಮಾನ್ವಿಯ ಪ್ರಭಾವಿ ನಾಯಕರ ಮೇಲೆ ನಗರಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ರಾಜ್ಯ ಸರ್ಕಾರ ನಾಗರಿಕರ ಸರಬರಾಜು ಇಲಾಖೆಯ ಮೂಲಕ ಬಡವರಿಗೆಂದು ಪಡಿತರ ಆಹಾರ ಧಾನ್ಯ ಪೂರೈಕೆಯಡಿ ನೀಡಿದ್ದ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದು, ಈ ಮೂಲಕ ಅಗತ್ಯ ವಸ್ತುಗಳ ಕಾಯ್ದೆ 1955ರ ಕಲಂ 3 ಮತ್ತ 7 ಉಲ್ಲಂಘಿಸಿದ್ದು, ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ಶೇಖರಪ್ಪ ದೂರಿನಲ್ಲಿ ತಿಳಿಸಿದ್ದರು. ಮಾರುಕಟ್ಟೆ ಮೌಲ್ಯದ ಸಮಾರು 10 ಲಕ್ಷ ರೂಪಾಯಿ ಮೊತ್ತದ 35.8 ಟನ್ ಪ್ರಮಾಣದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಕೊಪ್ಪಳದ ಕೂಕನಪಳ್ಳಿಯಿಂದ ಮಾನ್ವಿಯ ರೈಸ್ ಮಿಲ್ ಗೆ ಸಾಗಿಸುತ್ತಿದ್ದ ಸಂದರ್ಭದಲ್ಲಿ ವಿವಿಧ ಸಂಘಟನೆಗಳ ಪ್ರಮುಖರು ಇದನ್ನು ಪತ್ತೆ ಹಚ್ಚಿ ರೆಡ್ ಹ್ಯಾಂಡಾಗಿ ಹಿಡಿದು ಆಹಾರ ಇಲಾಖೆಯ ವಶಕ್ಕೆ ಒಪ್ಪಿಸಿದರು. ಈ ಬಗ್ಗೆ ವಾಹನದಲ್ಲಿನ ಸರಕು, ಲಾರಿ ಚಾಲಕ ನೀಡಿದ ಬಿಲ್ ಪರಿಶೀಲಿಸಲಾಗಿ ತಾಳೆಯಾಗದ ಹಿನ್ನೆಲೆ ಲಾರಿಯಲ್ಲಿದ್ದ ಅಕ್ಕಿಯನ್ನು ವಶಕ್ಕೆ ಪಡೆದ ಆಹಾರ ಇಲಾಖೆಯ ಅಧಿಕಾರಿಗಳು, ಅಕ್ರಮವಾಗಿ ಸಾಗಿಸುತ್ತಿರುವುದನ್ನು ಖಚಿತ ಪಡಿಸಿಕೊಂಡು ಕಾನೂನು ಕ್ರಮಕ್ಕೆ ಮುಂದಾಗಿದ್ದರು.

# ನಿಯಮಾನುಸಾರ ರೈತರಿಗೆ ಪರಿಹಾರ ನೀಡಿ ಎಂ. ಕಾರಜೋಳ ಸೂಚನೆ

## ರೈಲ್ವೇ ಯೋಜನೆಗಳ ವೆಚ್ಚವೂ ವರ್ಷದಿಂದ ವರ್ಷಕ್ಕೆ ಹೆಚ್ಚಾಗಿ ಸರ್ಕಾರ ನಷ್ಟ ಉಂಟಾಗುತ್ತದೆ

• **ಉದಯವಾಹಿನಿ ಚಿತ್ರದುರ್ಗ:**

ಜಿಲ್ಲೆಯ ರೈಲ್ವೇ ಅಭಿವೃದ್ದಿಗೆ ಭೂಮಿ ನೀಡುವ ರೈತರಿಗೆ ನಿಯಮಾನುಸಾರ ಪರಿಹಾರ ನೀಡಿ, ರೈತರ ಹಿತ ಕಾಪಾಡುವಂತೆ ಸಂಸದ ಗೋವಿಂದ ಎಂ ಕಾರಜೋಳ ಅಧಿಕಾರಿಗಳಿಗೆ ಸೂಚಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ತುಮಕೂರು

**1 : ರೈಲ್ವೇ ಯೋಜನೆಗಳ ವೆಚ್ಚವೂ**
**2 : ಭೂಮಿ ನೀಡಲು ಸಿದ್ದರಿದ್ದಾರೆ**
**3 : ಸೂಕ್ತ ಪರಿಹಾರ ದೊರಕುವಂತೆ**

–ಚಿತ್ರದುರ್ಗ–ದಾವಣಗೆರೆ ಹೊಸ ನೇರ ರೈಲ್ವೇ ಮಾರ್ಗ ಮತ್ತು ಚಿಕ್ಕಜಾಜೂರು–ಬಳ್ಳಾರಿ ರೈಲ್ವೇ ಡಬ್ಲಿಂಗ್ ಯೋಜನೆಗೆ ಭೂಸ್ವಾಧೀನ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭೂಸ್ವಾಧೀನ ಪ್ರಕ್ರಿಯೆಯನ್ನು ಚುರುಕುಗೊಳಿಸಬೇಕು. ಭೂಸ್ವಾಧೀನ ಪ್ರಕ್ರಿಯೆ ತಡವಾದಷ್ಟು ರೈಲ್ವೇ ಯೋಜನೆಗಳ ವೆಚ್ಚವೂ ವರ್ಷದಿಂದ ವರ್ಷಕ್ಕೆ ಹೆಚ್ಚಾಗಿ ಸರ್ಕಾರ ನಷ್ಟ ಉಂಟಾಗುತ್ತದೆ. ಜಿಲ್ಲೆಯ ರೈತರು ರೈಲ್ವೇ ಅಭಿವೃದ್ಧಿ ಭೂಮಿ ನೀಡಲು ಸಿದ್ದರಿದ್ದಾರೆ, ಆದರೆ ನೀಡುವ ಭೂಮಿಗೆ ಸೂಕ್ತ ಬೆಲೆ ಅಪೇಕ್ಷಿಸುತ್ತಿದ್ದಾರೆ. ಹೊಳಲ್ಕೆರೆ ಭಾಗ ಅರೆ ಮಲೆನಾಡು ಪ್ರದೇಶವಾಗಿದ್ದು, ರೈತರು ಜಮೀನುಗಳಲ್ಲಿ ಅಡಿಕೆ, ಮಾವಿನ ತೋಟಗಳನ್ನು ಮಾಡಿದ್ದಾರೆ. ತೋಟಗಾರಿಕೆ ಇಲಾಖೆ ಅಧಿಕಾರಿಗಳು ಈ ಬೆಳೆಗಳಿಗೆ ಸೂಕ್ತ ಪರಿಹಾರ ದೊರಕುವಂತೆ ತಮ್ಮ ವರದಿ ನೀಡಬೇಕು. ರೈತರಿಗೆ ಯಾವುದೇ


ಉದಯವಾಹಿನಿ ಚಿತ್ರ

ರೀತಿಯಲ್ಲಿ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು ಎಂದರು.

**ಸರ್ವೇ ಕಾರ್ಯಕ್ಕೆ ಸಹಕರಿಸಲು ರೈತರಲ್ಲಿ ಮನವಿ:** ಸಭೆಯಲ್ಲಿ ರೈತರ ಮುಖಂಡರಿಗೆ ಭೂಸ್ವಾಧೀನ ಪಡಿಸಿಕೊಳ್ಳೂವ ಭೂಮಿಗೆ ಸೂಕ್ತ ಬೆಲೆ ನೀಡುವ ಭರವಸೆ ನೀಡಿದ ಸಂಸದ ಗೋವಿಂದ ಎಂ ಕಾರಜೋಳ, ಭೂಸ್ವಾಧೀನ ಹಾಗೂ ರೈಲ್ವೆ ಅಧಿಕಾರಿಗಳ ಸರ್ವೇ ಕಾರ್ಯಕ್ಕೆ ಸಹಕರಿಸುವಂತೆ ಕೋರಿದರು.

ಭೂಸ್ವಾಧೀನ, ರೈಲ್ವೇ, ಕಂದಾಯ, ತೋಟಗಾರಿಕೆ, ಕೃಷಿ, ಅರಣ್ಯ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸುವುದರ ಜೊತೆಗೆ ಭೂಸ್ವಾಧೀನ ಸಂಬಂಧಿಸಿದ ವ್ಯಾಜ್ಯಗಳನ್ನು ಶೀಘ್ರವಾಗಿ ಪರಿಹರಿಸಬೇಕು. ರೈತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯನಿರ್ವಹಿಸಬೇಕು. ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ರೈತರಿಗೆ ಯಾವುದೇ ಆತಂಕ ಬೇಡ, ಸಬ್ ರಿಜಿಸ್ಟ್ರಾರ್ ಕಚೇರಿಯ ಮಾರುಕಟ್ಟೆ ಮೌಲ್ಯದ ದರ ಆಧರಿಸಿ ಮೂಲ ಬೆಲೆ ನಿಗದಿಪಡಿಸಲಾಗುತ್ತದೆ. ಇದರ ಆಧಾರ ಮೇಲೆ ಭೂಮಿಗೆ ಹೆಚ್ಚಿನ ಬೆಲೆ ದೊರಕುತ್ತದೆ. ಇದರೊಂದಿಗೆ ಜಮೀನಿನಲ್ಲಿ ಇರುವ ಬೆಳೆ, ತೋಟಗಾರಿಕೆ ಬೆಳೆಗಳು, ಪಶು

> ಹೊಳಲ್ಕೆರೆ ತಾಲ್ಲೂಕಿಗೆ ಸಂಬಂಧಿಸಿದಂತೆ 86 ಎಕರೆ ಭೂ ಸ್ವಾಧೀನಕ್ಕೆ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. ಶೀಘ್ರದಲ್ಲೇ ಉಳಿದ ತಾಲ್ಲೂಕುಗಳಿಗೂ ಸಂಬಂಧಿಸಿದಂತೆ ಅಧಿಸೂಚನೆ ಹೊರಡಿಸುವುದಾಗಿ ತಿಳಿಸಿದರು.
> – ವೆಂಕಟೇಶ್ ನಾಯ್ಕ್

ಸಂಗೋಪನೆಗಾಗಿ ನಿರ್ಮಿಸಿರುವ ಕಟ್ಟಡ ಸೇರಿದಂತೆ ಕೃಷಿ ಚಟುವಟಿಕೆಗಳಿಗೆ ನಿರ್ಮಿಸಿದ ಇತರೆ ನಿರ್ಮಾಣಗಳಿಗೂ ಪರಿಹಾರ ದೊರಕಲಿದೆ. ನಿಯಮಗಳ ಅಡಿ ರೈತರಿಗೆ ದೊರಕಬೇಕಾದ ಗರಿಷ್ಠ ಮಟ್ಟದ ಪರಿಹಾರಗಳನ್ನು ದೊರಕಿಸಿಕೊಡಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೇ ಯೋಜನೆಗೆ ಒಟ್ಟು 1405 ಎಕರೆ ಭೂಮಿ ಅವಶ್ಯಕತೆ ಇದ್ದು, ಈ ಪೈಕಿ 1211 ಎಕರೆ ಭೂ ಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ರೈಲ್ವೇ ಇಲಾಖೆ ಜಮೀನು ಹಸ್ತಾಂತರಿಸಲಾಗಿದೆ. ನೇರ ರೈಲ್ವೇ ಕಾಮಗಾರಿಯೂ ಪ್ರಗತಿಯಲ್ಲಿದೆ.

### 79 ಎಕರೆ ಭೂಸ್ವಾಧೀನ

60 ದಿನ ನೋಟಿಸ್ ಅವಧಿ ಪೂರ್ಣಗೊಂಡ ನಂತರ ಭೂಮಿ ಸ್ವಾಧೀನಕ್ಕೆ ತೆಗೆದುಕೊಳ್ಳಲಾಗುವುದು. ಇದೇ ಮಾದರಿಯಲ್ಲಿ ಚಿತ್ರದುರ್ಗ ಹಿರಿಯೂರು ಮಧ್ಯೆ 79 ಎಕರೆ ಭೂಸ್ವಾಧೀನಕ್ಕೆ ಕ್ರಮ ವಹಿಸಲಾಗಿದೆ.

> ಶೀಘ್ರವೇ ಈ ಜಾಗದಲ್ಲಿ ಜಿಲ್ಲಾ ಪಂಚಾಯಿತಿಯಿಂದ ಲೇ ಔಟ್ ನಿರ್ಮಿಸಬೇಕು. ನಗರ ಪ್ರದೇಶದಲ್ಲಿ ಸ್ಲಂಬೋರ್ಡ್ ವತಿಯಿಂದ ನಿರ್ಮಿಸಿದ ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.
> –ಗೋವಿಂದ ಎಂ ಕಾರಜೋಳ

ರೈಲ್ವೇ ಮೇಲ್ಸೇತುವೆ, ಕೆಳಸೇತುವೆ, ವಿದ್ಯುತ್ ಉಪ ಕೇಂದ್ರ, ಹಾಗೂ ಜಾಲಗಳ ನಿರ್ಮಾಣಕ್ಕೆ ಒಟ್ಟು 194 ಎಕರೆ ಭೂ ಅವಶ್ಯಕತೆ ಇದ್ದು, ಸ್ವಾಧೀನ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈ ಪೈಕಿ ಚಿತ್ರದುರ್ಗ ಹಾಗೂ ಭರಮಸಾಗರ ಮಧ್ಯ 56 ಎಕರೆ ಭೂ ಸ್ವಾಧೀನಕ್ಕೆ ಜಂಟಿ ಅಳತೆ ಸಮೀಕ್ಷೆ (ಜೆ.ಎಂ.ಸಿ)ಯನ್ನು ಸಹ ಪೂರ್ಣಗೊಳಿಸಲಾಗಿದೆ. ಪಾಲವ್ವನಹಳ್ಳಿ–ಚಿತ್ರದುರ್ಗದ ಮಧ್ಯ 28–25 ಎಕರೆ ಭೂಮಿ ಅವಶ್ಯಕತೆ ಇದೆ. ನಕ್ಷೆ ಹಾಗೂ ಭೂ ದಾಖಲೆಗಳ ತಯಾರಿಕೆ 15 ದಿನಗಳ ಅವಶ್ಯಕತೆಯಿದೆ. ಹಿರಿಯೂರು ತವರಕೆರೆ ಮಧ್ಯೆ 31 ಎಕರೆ ಭೂ ಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಲಾಗಿದೆ.

# ಧಾರವಾಡ ವೈದ್ಯನ ಭೀಕರ ಹತ್ಯೆ

• **ಉದಯವಾಹಿನಿ ಧಾರವಾಡ:**

ಅಪಾರ್ಟ್‌ಮೆಂಟ್‌ನಲ್ಲಿ ನಡೆದ ಡಾ. ಕಿರಣ್ ಹೊನ್ನಣ್ಣನವರ್ (45) ಅವರ ಕೊಲೆ ಪ್ರಕರಣದ ತನಿಖೆ ಮುಂದುವರೆದಿದ್ದು, ದಂಪತಿಗಳ ಬಗ್ಗೆ ಸಂಬಂಧಿಕರು ಮತ್ತು ನೆರೆಹೊರೆಯವರಿಂದ ಹೊಸ ಮಾಹಿತಿ ಹೊರಬಿದ್ದಿದೆ.ಮನೆಯಲ್ಲಿ ಆಗಾಗ್ಗೆ ಭಿನ್ನಾಭಿಪ್ರಾಯಗಳು ಮತ್ತು ವಾದಗಳು ನಡೆಯುತ್ತಿದ್ದವು. ಪ್ರಿಯಾಂಕಾ ಪದೇ ಪದೇ ಸಣ್ಣಪುಟ್ಟ ವಿಷಯಗಳಿಗೆ ಜಗಳವಾಡುತ್ತಿದ್ದರು, ಇದು ಕುಟುಂಬದೊಳಗೆ ಉದ್ವಿಗ್ನತೆಯನ್ನು ಉಂಟುಮಾಡುತ್ತಿತ್ತು ಎಂದು ಡಾ. ಹೊನ್ನಣ್ಣನವರ್ ಅವರ ಸಂಬಂಧಿಯೊಬ್ಬರು ತಿಳಿಸಿದ್ದಾರೆ. ಡಾ. ಹೊನ್ನಣ್ಣನವರ್ ತಮ್ಮ ಮದುವೆಯ ನಂತರ ಈ ಸಮಸ್ಯೆಗಳನ್ನು ಸಹಿಸಿಕೊಂಡಿದ್ದರು. ಕಾಲ ಕ್ರಮೇಣ ಪರಿಸ್ಥಿತಿ ಸುಧಾರಿಸುತ್ತದೆ ಎಂಬ ಆಶಾಭಾವನೆಯಲ್ಲಿದ್ದರು ಎಂದು ಸಂಬಂಧಿಯೊಬ್ಬರು ಹೇಳಿಕೊಂಡಿದ್ದಾರೆ.

ಡಾ. ಪ್ರಿಯಾಂಕಾ ಅವರ ನಡವಳಿಕೆಯನ್ನು ಬದಲಾಯಿಸುವಂತೆ ಕುಟುಂಬ ಸದಸ್ಯರು ಪದೇ ಪದೇ ಸಲಹೆ ನೀಡಿದ್ದರೂ, ಭಿನ್ನಾಭಿಪ್ರಾಯಗಳು ಮುಂದುವರೆದಿದ್ದವು ಎಂದು ಆರೋಪಿಸಲಾಗಿದೆ. ಕಿರಣ್ ಮನೆಯಲ್ಲಿ ನಡೆಯುತ್ತಿದ್ದ ಜಗಳದಿಂದಾಗಿ ಅನೇಕ ಕುಟುಂಬ ಸದಸ್ಯರು ಕ್ರಮೇಣ ದಂಪತಿಗಳನ್ನು ಭೇಟಿ ಮಾಡುವುದನ್ನು ನಿಲ್ಲಿಸಿದ್ದರು. ನಾವೆಲ್ಲರೂ ಒಟ್ಟಿಗೆ ಬೆಳೆದಿದ್ದೆವು. ಕೆಲವು ಸಮಯದ ಹಿಂದೆ ನಡೆದ ತೀವ್ರ ಜಗಳದ ಸಮಯದಲ್ಲಿ ಡಾ. ಪ್ರಿಯಾಂಕಾ ಡಾ. ಹೊನ್ನಣ್ಣನವರ್ ಅವರನ್ನು ಚಾಕುವಿನಿಂದ ಬೆದರಿಸಿದ್ದರು ಎಂದು ಸಂಬಂಧಿಕರು ಆರೋಪಿಸಿದ್ದಾರೆ.

# ಯುವಕ ಹೃದಯಾಘಾತದಿಂದ ಸಾವು

• **ಉದಯವಾಹಿನಿ ಶಿವಮೊಗ್ಗ:**

ಸ್ನೇಹಿತರ ಜೊತೆ ಕೊಡಚಾದ್ರಿ ಪ್ರವಾಸಕ್ಕೆ ಬಂದಿದ್ದ ಯುವಕನೊಬ್ಬ ಹೃದಯಾಘಾತದಿಂದ ಮೃತಪಟ್ಟಿರುವ ಘಟನೆ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ಸಂಪೆಕಟ್ಟೆ ಸಮೀಪದ ಕಟ್ಟಿನಹೊಳೆ ಗ್ರಾಮದಲ್ಲಿ ನಡೆದಿದೆ.

ಬೆಂಗಳೂರು ಮೂಲದ ಶ್ರೀಕಾಂತ್ (28) ಮೃತ ದುರ್ದೈವಿ. ಮೂವರು ಸ್ನೇಹಿತರೊಂದಿಗೆ ಕೊಡಚಾದ್ರಿ ಪ್ರವಾಸಕ್ಕೆ ಶುಕ್ರವಾರ ತೆರಳಿ, ಕಟ್ಟಿನಹೊಳೆ ಗ್ರಾಮದ ಸ್ನೇಹಿತನ ಮನೆಯಲ್ಲಿ ಶ್ರೀಕಾಂತ್ ತಂಗಿದ್ದರು. ಶನಿವಾರ ಗೆಳೆಯರೆಲ್ಲರೂ ಕೂಡಿ ಬೆಳಗ್ಗೆ ಕೊಡಚಾದ್ರಿ ಶಿಖರಕ್ಕೆ ತೆರಳಲು ಸಿದ್ಧತೆ ಮಾಡಿಕೊಂಡಿದ್ದರು.

ರಾತ್ರಿ ಏಕಾಏಕಿ ಶ್ರೀಕಾಂತ್ ಆರೋಗ್ಯದಲ್ಲಿ ಏರುಪೇರು ಉಂಟಾಗಿ ಕುಸಿದು ಬಿದ್ದಿದ್ದಾನೆ. ತಕ್ಷಣ ಸ್ನೇಹಿತರು ಆತನನ್ನು ಹೊಸನಗರ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೆ, ಆಸ್ಪತ್ರೆಗೆ ತಲುಪುವ ಮೊದಲೇ ಹೃದಯಾಘಾತದಿಂದ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ತಿಂಗಳಲ್ಲಿ ಇದು ಎರಡನೇ ಘಟನೆಯಾಗಿದೆ. ಕೆಲ ದಿನಗಳ ಹಿಂದಷ್ಟೇ ನಿರ್ಮಾಪಕ ಬಾ.ಮಾ ಹರೀಶ್ ಪುತ್ರ ಕೂಡ ಕೊಡಚಾದ್ರಿ ಪ್ರವಾಸಕ್ಕೆ ತೆರಳಿ ಹೃದಯಾಘಾತದಿಂದ ನಿಧನ ಹೊಂದಿದ್ದರು.

## ಪಶ್ಚಿಮ ಆಫ್ರಿಕಾದ ಸೆನೆಗಲ್‌ನಲ್ಲಿ 20 ವರ್ಷದ ಮಗಳ ಮಾರಾಟ;

• **ಉದಯವಾಹಿನಿ ಚಿಕ್ಕಮಗಳೂರು:**

ತಾಲ್ಲೂಕಿನ ಮಲ್ಲೇನಹಳ್ಳಿ ಗ್ರಾಮದ ಹಕ್ಕಿಪಿಕ್ಕಿ ಸಮುದಾಯದ ಮಹಿಳೆಯೊಬ್ಬರು, ಆರ್ಥಿಕ ಲಾಭಕ್ಕಾಗಿ ತಮ್ಮ 20 ವರ್ಷದ ಮಗಳನ್ನು ಪಶ್ಚಿಮ ಆಫ್ರಿಕಾದ ಸೆನೆಗಲ್‌ನಲ್ಲಿ ಮಾರಾಟ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಪೊಲೀಸರು ಈ ಸಂಬಂಧ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡಿದ್ದು, ಯುವತಿಯನ್ನು ರಕ್ಷಿಸಲಾಗಿದೆ. ಹಕ್ಕಿ ಪಿಕ್ಕಿ ಸಮುದಾಯದ ಪೋರಂ ಪ್ರಕಾರ, ಆ ಕುಟುಂಬವು ಸಾಂಪ್ರದಾಯಿಕ ಗಿಡಮೂಲಿಕೆ ಉತ್ಪನ್ನಗಳನ್ನು ಮಾರಾಟ ಮಾಡಲು ಆಗಾಗ್ಗೆ ಆಫ್ರಿಕನ್ ದೇಶಗಳಿಗೆ ಪ್ರಯಾಣಿಸುತ್ತಿತ್ತು ಮತ್ತು ತಮ್ಮ ಮಗಳನ್ನೂ ಜೊತೆಗೆ ಕರೆದೊಯ್ಯುತ್ತಿತ್ತು.

ಇಂತಹ ಒಂದು ಭೇಟಿಯ ಸಂದರ್ಭದಲ್ಲಿ, ಆ ಮಹಿಳೆ ಹಣಕ್ಕಾಗಿ ಸೆನೆಗಲ್‌ನ ವ್ಯಕ್ತಿಯೊಬ್ಬರಿಗೆ ತನ್ನ ಮಗಳನ್ನು ಮಾರಾಟ ಮಾಡಿದ್ದಾರೆ ಎಂದು ಆರೋಪಿಸಿದೆ. ಪೋಷಕರು ಚಿಕ್ಕಮಗಳೂರಿಗೆ ಮರಳಿದ ನಂತರ, ಆ ಯುವತಿಯನ್ನು ಒತ್ತಾಯಪೂರ್ವಕವಾಗಿ ಬಂಧಿಸಿ ಇರಿಸಲಾಗಿತ್ತು ಮತ್ತು ಚಿತ್ರಹಿಂಸೆಗೆ ಒಳಪಡಿಸಲಾಗಿತ್ತು ಎಂದು ಹೇಳಲಾಗಿದೆ.

ಭಾರತೀಯ ರಾಯಭಾರ ಕಚೇರಿಯ ನೆರವಿನೊಂದಿಗೆ ಸೆನೆಗಲ್‌ನ ಸ್ಥಳೀಯ ಪೊಲೀಸರು ಆ ಯುವತಿಯನ್ನು ರಕ್ಷಿಸಿದ್ದಾರೆ ಎಂದು 'ಕರ್ನಾಟಕ ಹಕ್ಕಿ ಪಿಕ್ಕಿ ಬುಡಕಟ್ಟು ಸಂಘಟನೆ' ತಿಳಿಸಿದೆ. ಯುವತಿ ಸದ್ಯ ಸೆನೆಗಲ್‌ನಲ್ಲಿದ್ದು, ಮುಂದಿನ ಒಂದು ಅಥವಾ ಎರಡು ದಿನಗಳಲ್ಲಿ ಭಾರತಕ್ಕೆ ಮರಳುವ ನಿರೀಕ್ಷೆಯಿದೆ.

# ಸಹಾಯಕ ಸರ್ಕಾರಿ ಅಭಿಯೋಜಕ ಲೋಕಾಯುಕ್ತ ಬಲೆಗೆ

• **ಉದಯವಾಹಿನಿ ಕಲಬುರಗಿ**

ಸಾವಿರ ರೂ.ಲಂಚ ಸ್ವೀಕರಿಸುತ್ತಿದ್ದ ವೇಳೆ ಕಲಬುರಗಿಯ 5ನೇ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಹಾಯಕ ಸರ್ಕಾರಿ ಅಭಿಯೋಜಕ (ಎಪಿಪಿ) ಸಂತೋಷ್ ಕುಮಾರ ಲೋಖಂಡೆ ಅವರನ್ನು ಲೋಕಾಯುಕ್ತ ಅಧಿಕಾರಿಗಳು ರೆಡ್‌ಹ್ಯಾಂಡ್ ಆಗಿ ಬಂಧಿಸಿದ್ದಾರೆ.

ರಾಹುಲ್ ಹೈದರಾಬಾದ್ ಅವರ ನ್ಯಾಯಾಲಯದ ಪ್ರಕರಣದಲ್ಲಿ ರಾಜಿ ಅರ್ಜಿ ಸಲ್ಲಿಕೆಗೆ ಸಂಬಂಧಿಸಿದ ಬಾಕಿ ಕೆಲಸ ಪೂರ್ಣಗೊಳಿಸುವುದಾಗಿ ಹೇಳಿ ಆರೋಪಿ 10 ಸಾವಿರ ರೂ. ನಗದು ಜೊತೆಗೆ 9 ಸೀರೆಗಳು, 4 ಶರ್ಟ್‌ಗಳು, 4 ಜೀನ್ಸ್ ಪ್ಯಾಂಟ್‌ಗಳು, ಒಂದು ಜೋಡಿ ಶೂ, 4 ಮಹಿಳೆಯರ ಉಡುಪುಗಳು ಹಾಗೂ 6 ಜೋಡಿ ಮಹಿಳೆಯರ ಚಪ್ಪಲಿಗಳನ್ನು ಅಕ್ರಮವಾಗಿ ಬೇಡಿಕೆ ಇಟ್ಟಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ದೂರಿನ ಮೇರೆಗೆ ಲೋಕಾಯುಕ್ತ ಪೊಲೀಸ್ ಇನ್‌ಸ್ಪೆಕ್ಟರ್ ಅರುಣ್


ಉದಯವಾಹಿನಿ ಚಿತ್ರ

ಕುಮಾರ್ ನೇತೃತ್ವದ ತಂಡ ನ್ಯಾಯಾಲಯ ಸಂಕೀರ್ಣದ ಸಮೀಪ ಕಾರ್ಯಾಚರಣೆ ನಡೆಸಿ, ಆರೋಪಿ 10 ಸಾವಿರ ರೂ. ಲಂಚದ ಹಣವನ್ನು ಸ್ವೀಕರಿಸುತ್ತಿದ್ದ ವೇಳೆ ರೆಡ್‌ಹ್ಯಾಂಡ್ ಆಗಿ ಬಂಧಿಸಿದೆ. ಆರೋಪಿಯ ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದ್ದು, ಹೆಚ್ಚಿನ ತನಿಖೆ ಮುಂದುವರಿದಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

# 'ಅನ್ನಬ್ರಹ್ಮ ಚಾತುರ್ಮಾಸ್ಯ' ; ಆಹಾರ ಜಾಗೃತಿಯೇ ಈ ಬಾರಿಯ ವ್ರತದ ಧ್ಯೇಯ

• **ಉದಯವಾಹಿನಿ ಗೋಕರ್ಣ:**

ಶುದ್ಧ ಹಾಗೂ ವೈಜ್ಞಾನಿಕ ಆಹಾರ ಕ್ರಮದ ಜಾಗೃತಿ ಮೂಡಿಸಲು ಶ್ರೀ ರಾಮಚಂದ್ರಾಪುರ ಮಠವು ಈ ಬಾರಿ ವಿಶಿಷ್ಟವಾದ 'ಅನ್ನಬ್ರಹ್ಮ ಚಾತುರ್ಮಾಸ್ಯ' ವ್ರತವನ್ನು ಹಮ್ಮಿಕೊಂಡಿದೆ.

ಶ್ರೀಮಠದ ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳವರ 33ನೇ ಚಾತುರ್ಮಾಸ್ಯ ವ್ರತವು ಉತ್ತರ ಕನ್ನಡದ ಗೋಕರ್ಣದ ಅಶೋಕೆಯ ಮೂಲ ಮಠದಲ್ಲಿ ಜರುಗಲಿದೆ. ಜುಲೈ 29 ರಿಂದ ಸೆಪ್ಟೆಂಬರ್ 26ರ ವರೆಗೆ (ಆಷಾಢ ಶುಕ್ಲ ಪೂರ್ಣಿಮೆಯಿಂದ ಭಾದ್ರಪದ ಶುಕ್ಲ ಪೂರ್ಣಿಮೆಯವರೆಗೆ) ಎರಡು ತಿಂಗಳುಗಳ ಕಾಲ ವ್ರತ ಇರಲಿದೆ. ಸನಾತನ ಭಾರತೀಯ ಸಂಸ್ಕೃತಿಯಲ್ಲಿ ಅನ್ನಂ ಬ್ರಹ್ಮೇತಿ ವ್ಯಜಾನಾತ್' ಎನ್ನಲಾಗಿದೆ. ಅಂದರೆ ಅನ್ನವೇ ದೈವಸ್ವರೂಪ.

ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಅನ್ನದ ಅಪವ್ಯಯವನ್ನು ತಡೆಯುವುದು ಮತ್ತು ಋಷಿ ಪ್ರೋಕ್ತ ಆಹಾರ ಶೈಲಿಯನ್ನು ಜನಸಾಮಾನ್ಯರಿಗೆ ಪರಿಚಯಿಸುವುದು ಈ ವ್ರತದ ಮೂಲ ಉದ್ದೇಶವಾಗಿದೆ. ಇಹಕ್ಕೂ ಪರಕ್ಕೂ ಪರಮ ಸಾಧನವಾದ ಆಹಾರ ಕುರಿತಾದ ಜ್ಞಾನೋದ್ದೀಪನಕ್ಕೆ ಈ ಚಾತುರ್ಮಾಸ್ಯ ಸಮರ್ಪಿತವಾಗಿದೆ ಎಂದು ಮಠ ತಿಳಿಸಿದೆ.

ಆಹಾರದ ಕುರಿತಾದ ಋಷಿದರ್ಶನವನ್ನು ಪ್ರಸ್ತುತ ಪಡಿಸುವ ಕಾರ್ಯ ಈ ಚಾತುರ್ಮಾಸ್ಯದಲ್ಲಿ ನಡೆಯುತ್ತದೆ. ಆ ಕುರಿತಾದ ಸರಣಿ ಪ್ರವಚನವನ್ನು ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ನೀಡಲಿದ್ದಾರೆ.

ಈ ಎರಡು ತಿಂಗಳ ಅವಧಿಯಲ್ಲಿ ಪ್ರತಿದಿನವೂ ವೇದಪಾರಾಯಣ, ಸಂಸ್ಕೃತ ಚಿಂತನೆ, ಆಯುರ್ವೇದ ಆಹಾರ ಪದ್ಧತಿಯ ಮಾಹಿತಿ ಶಿಬಿರಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಿರಂತರವಾಗಿ ಜರುಗಲಿವೆ.

# ಮುಂಗಾರು ಮಳೆ ಇಲ್ಲದೆ ಬರದ ಛಾಯೆ: ವಲಸೆ ಹೋಗುತ್ತಿರುವ ಬಂಜಾರ ಸಮುದಾಯದ ಕುಟುಂಬಗಳು

• **ಉದಯವಾಹಿನಿ ವಿಜಯನಗರ:**

ಜಿಲ್ಲೆಯಲ್ಲಿ ಮುಂಗಾರು ಕೈಕೊಟ್ಟ ಪರಿಣಾಮ ಬರದ ಛಾಯೆ ಮತ್ತಷ್ಟು ಭೀಕರವಾಗಿದೆ. ಹೊಲಗಳಲ್ಲಿ ಬಿತ್ತನೆ ಮಾಡಲು ಮಳೆಯಿಲ್ಲ, ಗ್ರಾಮಗಳಲ್ಲಿ ಕೆಲಸವೂ ಇಲ್ಲ. ಹೀಗಾಗಿ ತುತ್ತಿನ ಚೀಲ ತುಂಬಿಸಿಕೊಳ್ಳಲು ಬಂಜಾರ ಸಮುದಾಯದ ಕುಟುಂಬಗಳು ಲಾರಿ, ಟ್ರ್ಯಾಕ್ಟರ್‌ಗಳಲ್ಲಿ ಕಬ್ಬು ಕಟಾವಿಗೆ ರಾಜ್ಯದ ವಿವಿಧ ಜಿಲ್ಲೆಗಳು ಹೊರರಾಜ್ಯಗಳಿಗೆ ವಲಸೆ ಹೋಗುತ್ತಿವೆ. ಈ ಮನಕಲಕುವ ದೃಶ್ಯ ಕಂಡುಬಂದಿದ್ದು ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮರಿಯಮ್ಮನಹಳ್ಳಿ ತಾಂಡಾದಲ್ಲಿ.

ಮುಂಗಾರು ಮುನಿಸಿಕೊಂಡ ಪರಿಣಾಮ ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮರಿಯಮ್ಮನಹಳ್ಳಿ ತಾಂಡಾದಲ್ಲಿ ಜೀವನೋಪಾಯಕ್ಕಾಗಿ ಬಂಜಾರ ಸಮುದಾಯದ ಕುಟುಂಬಗಳು ಸಾಮೂಹಿಕವಾಗಿ ವಲಸೆ ಹೋಗುತ್ತಿವೆ.

ತಡರಾತ್ರಿ 15ಕ್ಕೂ ಹೆಚ್ಚು ಲಾರಿಗಳು ಹಾಗೂ ಸುಮಾರು 20 ಟ್ರ್ಯಾಕ್ಟರ್‌ಗಳಲ್ಲಿ 60ಕ್ಕೂ ಹೆಚ್ಚು ಕುಟುಂಬಗಳು ಕಬ್ಬು ಕಟಾವು ಕೆಲಸಕ್ಕಾಗಿ ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ಹೊರರಾಜ್ಯಗಳತ್ತ ಪ್ರಯಾಣ ಬೆಳೆಸಿದವು. ಇನ್ನೂ ಹಲವು ಕುಟುಂಬಗಳು ಮುಂದಿನ ಕೆಲ ದಿನಗಳಲ್ಲಿ ತೆರಳಲು ಸಿದ್ಧತೆ ನಡೆಸಿವೆ.


ಉದಯವಾಹಿನಿ ಚಿತ್ರ

ಮೇ ತಿಂಗಳ ಕೊನೆಯಲ್ಲಿ ಸುರಿದ ಅಲ್ಪ ಪ್ರಮಾಣದ ಮಳೆಯಲ್ಲಿ ಕೆಲ ರೈತರು ಮಾತ್ರ ಜೋಳ ಹಾಗೂ ಮುಸುಕಿನ ಜೋಳ ಬಿತ್ತನೆ ಮಾಡಿದ್ದರು. ಆದರೆ ಬಳಿಕ ಮಳೆಯೇ ಕಾಣಿಸದ ಕಾರಣ ಬಹುತೇಕ ರೈತರು ಬಿತ್ತನೆ ಮಾಡದೇ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮರಿಯಮ್ಮನಹಳ್ಳಿ ತಾಂಡಾ ಮಾತ್ರವಲ್ಲದೆ ಜಿ. ನಾಗಲಾಪುರ ತಾಂಡಾ, ಗುಂಡಾ ತಾಂಡಾ ಹಾಗೂ ತಾಳೇಬಸಾಪುರ ತಾಂಡಾಗಳಲ್ಲಿಯೂ ಇದೇ ಪರಿಸ್ಥಿತಿ ನಿರ್ಮಾಣವಾಗಿದೆ. ಪ್ರತಿವರ್ಷ ಕೆಲ ಕುಟುಂಬಗಳು ಕಬ್ಬು ಕಟಾವಿಗೆ ತೆರಳುವುದು ಸಾಮಾನ್ಯವಾದರೂ, ಈ ಬಾರಿ ಬರದ ಪರಿಸ್ಥಿತಿಯಿಂದ ಹೆಚ್ಚಿನ ಕುಟುಂಬಗಳು ಊರು ತೊರೆದು ವಲಸೆ ಹೋಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.

ಕುಟುಂಬದ ಪುರುಷರು, ಮಹಿಳೆಯರು, ಯುವಕರು ಹಾಗೂ ಯುವತಿಯರು ಕೆಲಸಕ್ಕಾಗಿ ತೆರಳಿದ್ದು, ತಾಂಡಾಗಳಲ್ಲಿ ಮಕ್ಕಳು ಮತ್ತು ವೃದ್ಧರು ಮಾತ್ರ ಉಳಿದಿದ್ದಾರೆ. ಪರಿಣಾಮ ಹಲವು ತಾಂಡಾಗಳು ಬಿಕೋ ಎನ್ನುತ್ತಿವೆ. ಮೈಸೂರು, ಮಂಡ್ಯ, ಪಾಂಡವಪುರ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ಜೊತೆಗೆ ತಮಿಳುನಾಡು, ಕೇರಳ ಗಡಿ ಪ್ರದೇಶಗಳು ಹಾಗೂ ಚಿಕ್ಕಮಗಳೂರಿನ ಕಾಫಿ ತೋಟಗಳಿಗೂ ಈ ಕುಟುಂಬಗಳು ಉದ್ಯೋಗ ಅರಸಿ ತೆರಳುತ್ತಿವೆ.

ಪ್ರತಿವರ್ಷ ಕೆಲ ಕುಟುಂಬಗಳು ಮಾತ್ರ ಕಬ್ಬು ಕಟಾವಿಗೆ ಹೋಗುತ್ತಿದ್ವಿ. ಆದರೆ ಈ ಬಾರಿ ಮಳೆಯೇ ಇಲ್ಲ, ಕೃಷಿ ಕೆಲಸವೂ ಇಲ್ಲ. ಬದುಕು ಸಾಗಿಸಲು ಬೇರೆ ದಾರಿ ಇಲ್ಲದ ಕಾರಣ ಹೆಚ್ಚಿನ ಕುಟುಂಬಗಳು ವಲಸೆ ಹೋಗುತ್ತಿವೆ ಎನ್ನುತ್ತಾರೆ ಮರಿಯಮ್ಮನಹಳ್ಳಿ ತಾಂಡಾದ ಯುವಕರು. ಮಳೆ ಕೈಕೊಟ್ಟರೆ ಕೃಷಿಯಷ್ಟೇ ಅಲ್ಲ, ಗ್ರಾಮೀಣ ಬದುಕೇ ಹೇಗೆ ಅಸ್ತವ್ಯಸ್ತವಾಗುತ್ತದೆ ಎಂಬುದಕ್ಕೆ ಮರಿಯಮ್ಮನಹಳ್ಳಿ ತಾಂಡಾದ ಈ ದೃಶ್ಯವೇ ಜೀವಂತ ಸಾಕ್ಷಿಯಾಗಿದೆ.

# ಎತ್ತು, ಟ್ರ್ಯಾಕ್ಟರ್ ಇಲ್ಲ ಬಿತ್ತನೆ

## ಕೂರಿಗೆಯನ್ನು ತಾವೇ ಎಳೆದ ವೃದ್ಧ ದಂಪತಿ

• **ಉದಯವಾಹಿನಿ ಬೀದರ್:**

ಹೊಲದಲ್ಲಿ ಎತ್ತು ಅಥವಾ ಟ್ರ್ಯಾಕ್ಟರ್ ಓಡಬೇಕಾದ ಜಾಗದಲ್ಲಿ, ವೃದ್ಧ ದಂಪತಿಯೇ ಬಿತ್ತನೆ ಕೂರಿಗೆಯನ್ನು ಎಳೆದು ಬೀಜ ಬಿತ್ತಿದ ಘಟನೆ ಬೀದರ್ ಜಿಲ್ಲೆಯ ಹುಮನಾಬಾದ್ ತಾಲ್ಲೂಕಿನ ಹಳ್ಳಿಖೇಡ (ಬಿ) ಗ್ರಾಮದಲ್ಲಿ ನಡೆದಿದೆ.


ಉದಯವಾಹಿನಿ ಚಿತ್ರ

ಆರ್ಥಿಕ ಸಂಕಷ್ಟದ ನಡುವೆ ಬದುಕು ಸಾಗಿಸುತ್ತಿರುವ ತಿಪ್ಪಣ್ಣ–ಗಂಗಮ್ಮ ದಂಪತಿಗೆ ಎತ್ತು ಬಾಡಿಗೆಗೆ ತರುವುದಕ್ಕೂ, ಟ್ರ್ಯಾಕ್ಟರ್ ಬಳಸುವುದಕ್ಕೂ ಹಣವಿಲ್ಲ. ಹೀಗಾಗಿ ಇಬ್ಬರೂ ತಾವೇ ಕೂರಿಗೆಗೆ ಹೆಗಲು ಕೊಟ್ಟು ಹೊಲದಲ್ಲಿ ಬಿತ್ತನೆ ಮಾಡಿದ್ದಾರೆ. ವೃದ್ಧಾಪ್ಯದಲ್ಲೂ ಬೆವರು ಸುರಿಸಿ ಕೃಷಿ ಮಾಡುತ್ತಿರುವ ಈ ದಂಪತಿಗೆ ನೆರವಿನ ಹಸ್ತ ಸಿಕ್ಕಿಲ್ಲ. ಅಲ್ಪಸ್ವಲ್ಪ ಜಮೀನಿನಲ್ಲಿ ಕೃಷಿ ಮಾಡಿ ಜೀವನ ಸಾಗಿಸುತ್ತಿರುವ ದಂಪತಿ, ತಮಗೆ ಸ್ವಂತ ಮನೆ ಇಲ್ಲ, ಸಾಕಷ್ಟು ಜಮೀನು ಇಲ್ಲ, ಸರ್ಕಾರದಿಂದ ಯಾವುದೇ ಸೌಲಭ್ಯವೂ ಸಿಕ್ಕಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ. ಮೊದಲು ಉದ್ದು ಬಿತ್ತನೆ ಮಾಡಿದ್ದರೂ ಮಳೆ ಕೊರತೆಯಿಂದ ಮೊಳಕೆ ಬರಲಿಲ್ಲ. ಇದರಿಂದ ಅದೇ ಜಮೀನಿನಲ್ಲಿ ಮತ್ತೆ ತೊಗರಿ ಬಿತ್ತನೆ ಮಾಡಲು ಮುಂದಾಗಿದ್ದಾರೆ.

ನಮಗೆ ಸರ್ಕಾರದಿಂದ ಯಾವುದೇ ನೆರವು ಸಿಕ್ಕಿಲ್ಲ. ನಮ್ಮ ಪರಿಸ್ಥಿತಿಯನ್ನು ನೋಡಿ ಸರ್ಕಾರ ಮತ್ತು ಜನಪ್ರತಿನಿಧಿಗಳು ಸಹಾಯಕ್ಕೆ ಬರಬೇಕು ಎಂದು ವೃದ್ಧ ದಂಪತಿ ಮನವಿ ಮಾಡಿದ್ದಾರೆ

# ದಕ್ಷಿಣ ಕನ್ನಡ ಜಿಲ್ಲೆಗೆ 'ಆರೆಂಜ್ ಅಲರ್ಟ್': ರಜೆ ಘೋಷಣೆ

## ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಈ ಕೆಳಗಿನ ಪ್ರಮುಖ ತುರ್ತು ಕ್ರಮಗಳನ್ನು ಕೈಗೊಂಡಿದೆ

• **ಉದಯವಾಹಿನಿ ಮಂಗಳೂರು:**

ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಧಾರಾಕಾರ ಮಳೆ ಮುಂದುವರೆದಿದ್ದು, ಹವಾಮಾನ ಇಲಾಖೆಯು ಜಿಲ್ಲೆಯಲ್ಲಿ 'ಆರೆಂಜ್ ಅಲರ್ಟ್' ಘೋಷಿಸಿದೆ. ಈ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಜಿಲ್ಲೆಯ ಎಲ್ಲಾ ಅಂಗನವಾಡಿಗಳು, ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು, ವಸತಿ ಶಾಲೆಗಳು ಮತ್ತು ಪದವಿ ಪೂರ್ವ

**1 : ಪೋಷಕರು ತೀವ್ರ ಜಾಗ್ರತೆ ವಹಿಸಬೇಕು**
**2 : ಸಾರ್ವಜನಿಕ ದೂರುಗಳಿಗೆ ತಕ್ಷಣ ಸ್ಪಂದಿಸಿ**
**3 : ಸಾರ್ವಜನಿಕರಿಗೆ ಕಟ್ಟುನಿಟ್ಟಿನ ಸೂಚನೆಗಳು**

ಕಾಲೇಜುಗಳಿಗೆ ಇಂದು (ಜುಲೈ 18) ತುರ್ತು ರಜೆ ಘೋಷಿಸಿ ದಕ್ಷಿಣ ಕನ್ನಡ ಜಿಲ್ಲಾಧಿಕಾರಿಗಳು ಅಧಿಕೃತ ಆದೇಶ ಹೊರಡಿಸಿದ್ದಾರೆ.

ಭಾರತೀಯ ಹವಾಮಾನ ಇಲಾಖೆ ಮತ್ತು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮುನ್ಸೂಚನೆಯಂತೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಮಳೆಯ ತೀವ್ರತೆ ಹೆಚ್ಚಾಗಿದ್ದು, ಆರೆಂಜ್ ಅಲರ್ಟ್ ಜಾರಿಯಲ್ಲಿದೆ. ವಿದ್ಯಾರ್ಥಿಗಳ ಸುರಕ್ಷತೆಯ ದೃಷ್ಟಿಯಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಈ ಕೆಳಗಿನ ಪ್ರಮುಖ ತುರ್ತು ಕ್ರಮಗಳನ್ನು ಕೈಗೊಂಡಿದೆ.

**12ನೇ ತರಗತಿವರೆಗಿನ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ರಜೆ:** ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರಗಳು, ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪ್ರಾಥಮಿಕ, ಪ್ರೌಢಶಾಲೆಗಳು ಹಾಗೂ ವಸತಿ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಹಾಗೆಯೇ, ಪದವಿ ಪೂರ್ವ



ಉದಯವಾಹಿನಿ ಚಿತ್ರ

> ಮಾನ್ಸೂನ್ ಮಾರುತಗಳು ಉತ್ತರ ಒಡಿಶಾ ಮತ್ತು ಗಂಗಾನದಿಯ ಭಾಗದ ಪಶ್ಚಿಮ ಬಂಗಾಳದ ಕಡೆಗೆ ಚಲಿಸುವ ನಿರೀಕ್ಷೆಯಿದೆ. ಜುಲೈ 19ರಿಂದ ವಾಯುವ್ಯ ಭಾರತದಲ್ಲಿ ಒತ್ತಡ ತಗ್ಗಿ, ಈ ಪ್ರದೇಶದಾದ್ಯಂತ ಮಳೆ ಸುರಿಯಬಹುದು ಎಂದು ಅಂದಾಜಿಸಿತ್ತು.
> –ಹವಾಮಾನ ಇಲಾಖೆ

(ಪಿಯುಸಿ) ಹಾಗೂ ಪದವಿ ಪೂರ್ವ ವಸತಿ ಕಾಲೇಜುಗಳ (12ನೇ ತರಗತಿಯವರೆಗೆ) ಯಾವುದೇ ತರಗತಿಗಳನ್ನು ನಡೆಸದಂತೆ ಕಟ್ಟುನಿಟ್ಟಿನ ಆದೇಶ ಜಾರಿಗೊಳಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005ರ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಡಳಿತ ಎಚ್ಚರಿಸಿದೆ.

> ಜುಲೈ 22ರ ವರೆಗೆ ವ್ಯಾಪಕ ಮಳೆ: ಬಂಗಾಳಕೊಲ್ಲಿಯ ವಾಯುವ್ಯ ಭಾಗದಲ್ಲಿ ಉಂಟಾಗಿರುವ ಕಡಿಮೆ ಒತ್ತಡದಿಂದ ಪೂರ್ವ, ಮಧ್ಯ, ಈಶಾನ್ಯ ಮತ್ತು ವಾಯುವ್ಯ ಭಾರತದಲ್ಲಿ ಜುಲೈ 22ರ ವರೆಗೆ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ ಎಂದು ತಿಳಿಸಿತ್ತು.
> –ಐಎಂಡಿ

**ಪೋಷಕರು ಹಾಗೂ ಸಾರ್ವಜನಿಕರಿಗೆ ಕಟ್ಟುನಿಟ್ಟಿನ ಸೂಚನೆಗಳು:**

ನೀರು ಇರುವ ತಗ್ಗು ಪ್ರದೇಶ, ಕೆರೆ, ನದಿ ತೀರ ಹಾಗೂ ಸಮುದ್ರ ತೀರಕ್ಕೆ ಮಕ್ಕಳು ಹೋಗದಂತೆ ಪೋಷಕರು ತೀವ್ರ ಜಾಗ್ರತೆ ವಹಿಸಬೇಕು.

ಮೀನುಗಾರರು ಯಾವುದೇ ಕಾರಣಕ್ಕೂ ಸಮುದ್ರಕ್ಕೆ ಇಳಿಯದಂತೆ ಕಟ್ಟುನಿಟ್ಟಿನ ನಿರ್ಬಂಧ ಹೇರಲಾಗಿದೆ. ಪ್ರವಾಸಿಗರು ಮತ್ತು ಸಾರ್ವಜನಿಕರು

### ಟೋಲ್ ಫ್ರೀ ಸಂಖ್ಯೆ

ನೈಸರ್ಗಿಕ ವಿಕೋಪ ಅಥವಾ ಮಳೆಗೆ ಸಂಬಂಧಿಸಿದ ಯಾವುದೇ ಸಮಸ್ಯೆಗಳಿದ್ದಲ್ಲಿ ಸಾರ್ವಜನಿಕರು ತಕ್ಷಣವೇ ಈ ಕೆಳಗಿನ ನಿಯಂತ್ರಣ ಕೊಠಡಿಯ ಸಂಖ್ಯೆಗಳನ್ನು ಸಂಪರ್ಕಿಸಬಹುದು: ಟೋಲ್ ಫ್ರೀ ಸಂಖ್ಯೆ : 1077 ಹಾಗೂ ದೂರವಾಣಿ ಸಂಖ್ಯೆ : 0824-2442590

ನದಿ ತೀರ ಹಾಗೂ ಸಮುದ್ರ ತೀರಕ್ಕೆ ತೆರಳದಂತೆ ಸೂಚಿಸಲಾಗಿದೆ.

**ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಲು ಆದೇಶ:** ಜಿಲ್ಲಾಮಟ್ಟದ ಮತ್ತು ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರ ಸ್ಥಾನದಲ್ಲಿದ್ದುಕೊಂಡು, ವಿಪತ್ತು ನಿರ್ವಹಣಾ ಕಾರ್ಯಗಳನ್ನು ಚಾಚೂ ತಪ್ಪದೆ ನಿರ್ವಹಿಸಬೇಕು. ಸಾರ್ವಜನಿಕ ದೂರುಗಳಿಗೆ ತಕ್ಷಣ ಸ್ಪಂದಿಸಿ ಜಿಲ್ಲಾಧಿಕಾರಿ ಕಚೇರಿಯ ನಿಯಂತ್ರಣ ಕೊಠಡಿಯೊಂದಿಗೆ ನಿರಂತರ ಸಂಪರ್ಕದಲ್ಲಿರಲು ಸೂಚಿಸಲಾಗಿದ್ದು, ಪ್ರತಿ ತಾಲೂಕಿನಲ್ಲಿ ಕಾಳಜಿ ಕೇಂದ್ರಗಳನ್ನು ಸನ್ನದ್ಧ ಸ್ಥಿತಿಯಲ್ಲಿಡಲಾಗಿದೆ.

**ಕರಾವಳಿ, ಘಟ್ಟ ಪ್ರದೇಶಗಳಲ್ಲಿ ಭೂಕುಸಿತದ ಆತಂಕ:** ಧಾರಾಕಾರ ಮಳೆಯಿಂದಾಗಿ ಮಣ್ಣು ಸಡಿಲಗೊಳ್ಳುತ್ತಿದ್ದು, ಜುಲೈ 17 ಮತ್ತು 18ರಂದು ರಾಜ್ಯದ ಕರಾವಳಿ ಹಾಗೂ ಘಟ್ಟ ಪ್ರದೇಶದ ಭಾಗಗಳಲ್ಲಿ ಭೂಕುಸಿತ ಸಂಭವಿಸುವ ಹೆಚ್ಚಿನ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ವಿಶೇಷ ಮುನ್ನೆಚ್ಚರಿಕೆ ನೀಡಿದೆ.

ಈ ಹಿನ್ನೆಲೆಯಲ್ಲಿ ಬೆಟ್ಟದ ತಪ್ಪಲು ಹಾಗೂ ಘಾಟಿ ರಸ್ತೆಗಳಲ್ಲಿ ಸಂಚರಿಸುವ ವಾಹನ ಸವಾರರು ಮತ್ತು ಸ್ಥಳೀಯ ನಿವಾಸಿಗಳು ಕಡ್ಡಾಯವಾಗಿ ಸುರಕ್ಷತಾ ಕ್ರಮಗಳನ್ನು ಪಾಲಿಸಲು ಕೋರಲಾಗಿದೆ.